# ಡಾ|| ರಾಜ್‌ಕುಮಾರ್ ಅಕಾಡೆಮಿ ಬೆಂಗಳೂರು

ಡಾ|| ರಾಜ್‌ಕುಮಾರ್ ಕುಟುಂಬದವರ ಕೊಡುಗೆ

# ವಾರದ ಸುದ್ದಿ ಸಂಕಲನ

## ಸ್ಪಷ್ಟ ಮತ್ತು ಸಮಗ್ರ ವಿದ್ಯಮಾನಗಳು

**ಜನವರಿ ೩ನೇ ವಾರ**

12-01-2026 TO 17-01-2026

## ಇಂಧನ ಮತ್ತು ಶುದ್ಧಗಾಳಿ ಕುರಿತ ಸಂಶೋಧನಾ ಕೇಂದ್ರ

ಟೆನಿಸ್: ಸಬಲೆಂಕಾ, ಮೆಡ್ಡೆಡೇವ್ಗೆ ಪ್ರಶಸ್ತಿ

ವಿತ್ತೀಯ ಕೊರತೆ ಮಿತಿ

ಗೋದ್ವಾ, ಯೋಜನೆ ಜಿಂದಾಲ್ ತೆಕ್ಕೆಗೆ

ಜಿಡಿಪಿ ಶೇ 7.2ರಷ್ಟು ನಿರೀಕ್ಷೆ

## ❖ ಸುಡಾನ್‌ನ 5,000ಕ್ಕೂ ಹೆಚ್ಚು ಮಹಿಳೆಯರಿಗೆ ಸುರಕ್ಷಿತ ವಾತಾವರಣ ನಿರ್ಮಿಸಿದ ಹೆಗ್ಗಳಿಕೆ ಬೆಂಗಳೂರಿನ ಸ್ವಾತಿಗೆ ವಿಶ್ವಸಂಸ್ಥೆ ಪ್ರಶಸ್ತಿಯ ಗರಿ

**ಸಂದರ್ಭ:ಬೆಂಗಳೂರಿನವರಾದ ಭಾರತೀಯ ಸೇನಾಧಿಕಾರಿ ಮೇಜರ್ ಸ್ವಾತಿ ಶಾಂತಕುಮಾರ್ ಅವರು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ನೀಡುವ 'ಲಿಂಗ ಸಮಾನತೆ ಪ್ರತಿಪಾದಕ ಪ್ರಶಸ್ತಿ-2025'ಕ್ಕೆ ಭಾಜನರಾಗಿದ್ದಾರೆ.**

- ವಿವಿಧ ಕಾರ್ಯಾಚರಣೆಗಳ ಲ್ಲಿನ ಶ್ರೇಷ್ಠ ಸೇವೆಯನ್ನು ಗುರುತಿಸಿ ನೀಡುವ ಪ್ರಶಸ್ತಿಗಳನ್ನು ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಂಟೊನಿಯೊ ಗುಟೆರೆಸ್ ಘೋಷಿಸಿದ್ದಾರೆ. ಸಂಘರ್ಷ ಪೀಡಿತ ದಕ್ಷಿಣ ಸುಡಾನ್‌ನಲ್ಲಿ ಮಹಿಳೆಯರ ರಕ್ಷಣೆ, ಸಮುದಾಯದ ನೆಮ್ಮದಿಗೆ ಕೈಗೊಂಡ ಸಂವೇದನಾಶೀಲ ಕ್ರಮಗಳಿಗಾಗಿ ಸ್ವಾತಿ ಅವರಿಗೆ ಪ್ರಶಸ್ತಿ ಒಲಿದಿದೆ. 'ಸಮಾನ ಪಾಲುದಾರಿಕೆ ಶಾಶ್ವತ ಶಾಂತಿ' ಎನ್ನುವುದು ಅವರ 'ಧ್ಯೆಯವಾಗಿದ್ದು, ಶಾಂತಿ ರಕ್ಷಣಾ ಕಾರ್ಯಾಚರಣೆಗಳ ಮುಂದಾಳತ್ವದಲ್ಲಿ ಲಿಂಗ ಸಮಾನತೆಗೆ ಒತ್ತು ನೀಡಿದ್ದಾರೆ.
- ವಿಶ್ವದಾದ್ಯಂತ ಇರುವ ಎಲ್ಲ ಶಾಂತಿ ರಕ್ಷಣಾ ಕಾರ್ಯಚರಣೆ ಹಾಗೂ ವಿಶ್ವ ಸಂಸ್ಥೆಗಳಿಂದ ಬಂದ ನಾಮನಿರ್ದೇಶನ-ಗಳಲ್ಲಿ ಸ್ವಾತಿ ಆಯ್ಕೆಯಾಗಿದ್ದಾರೆ. ನಾಲ್ಕು ಅಂತಿಮ ಸ್ಪರ್ಧಿಗಳ ನಡುವೆ ನಡೆದ ಮತದಾನದಲ್ಲಿ ಅತ್ಯಧಿಕ ಮತಗಳನ್ನು ಪಡೆದು ಈ ಗೌರವಕ್ಕೆ ಪಾತ್ರವಾಗಿದ್ದಾರೆ.
- 'ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆಯಲ್ಲಿ ತು ಇವನ್ನು ಪರಿಣಾಮಕಾ ರಿಯಾಗಿ ಬಳಸಿಕೊಂಡು ಸೇನೆಯಲ್ಲೂ ಲಿಂಗಸಮಾನತೆಯನ್ನು ಬಲಗೊ ಳಿಸಿದ್ದಾರೆ. ಕಾರ್ಯಾಚರಣೆ ವೇಳೆ ತಳಮಟ್ಟದ ಸಂವಹನ ಮತ್ತು ಸೇನೆಯ ನಂಟನ್ನು ಮತ್ತಷ್ಟು ಗಟ್ಟಿ ಮಾಡಿದ್ದಾರೆ. ಚುರುಕಾದ ವಾಯುಗಸ್ತುಗಳ ಮೂಲಕ ತಮ್ಮ ಸಾಮರ್ಥ್ಯವನ್ನು ಸಾಬೀತು ಪಡಿಸಿದ್ದಾರೆ. ಇದರಿಂದ ಸುಡಾ ನ್‌ನ 5,000ಕ್ಕೂ ಹೆಚ್ಚು ಮಹಿಳೆಯ ರಿಗೆ ಸುರಕ್ಷಿತ ವಾತಾವರಣ ನಿರ್ಮಾಣ ವಾಗಿದೆ. ಅವರು ಗಳಿಸಿದ ಸಮುದಾಯದ ವಿಶ್ವಾಸ ವಿಶ್ವಸಂಸ್ಥೆಯ ಮುಂದಿನ ಕೆಲಸಗಳಿಗೂ ಪ್ರೇರಣೆಯಾ ಗಿದೆ' ಎಂದು ಗುಟೆರೆಸ್ ಶ್ಲಾಘಿಸಿದ್ದಾರೆ.
- ಎಂಜಿನಿಯರಿಂಗ್ ಪದವೀಧರ ಸ್ವಾತಿ ಅವರು ಬೆಂಗಳೂರಿನ ಲಿಂಗರಾಜಪುರದ ನಿವಾಸಿ ಖಾಸಗಿ ಕಂಪನಿ ಉದ್ಯೋಗಿ ಆರ್. ಶಾಂತಕುಮಾರ್, ಸರ್ಕಾರಿ ಶಾಲೆ ಶಿಕ್ಷಕಿ ರಾಜಮಣಿ ದಂಪತಿ ಪುತ್ರಿ, ಎಂಟು ವರ್ಷಗಳಿಂದ ಭಾರತೀಯ ಸೇನೆಯಲ್ಲಿದ್ದು, ಒಂದೂವರೆ ವರ್ಷದಿಂದ ದಕ್ಷಿಣ ಸುಡಾನ್‌ನಲ್ಲಿ ವಿಶ್ವಸಂಸ್ಥೆಯ ಶಾಂತಿಪಾಲನಾ ಪಡೆಯಲ್ಲಿ ಸೇವಾನಿರತರಾಗಿದ್ದಾರೆ.

## ❖ ಪಿಎಸ್‌ಎಲ್‌ವಿ-ಸಿ62 ಉಡಾವಣೆಗೆ ಕ್ಷಣಗಣನೆ

**ಸಂದರ್ಭ: ಭೂಸರ್ವೇಕ್ಷಣಾ ಉಪಗ್ರಹ ಮತ್ತು ಇತರ 14 ಉಪಗ್ರಹಗಳನ್ನು ಹೊತ್ತ ಪಿಎಸ್‌ಎಲ್‌ವಿ-ಸಿ62 ರಾಕೆಟ್ ಉಡಾವಣೆಗೆ ಕ್ಷಣಗಣನೆ ಆರಂಭವಾಗಿದೆ.**

- ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ಸೋಮವಾರ ಬೆಳಿಗ್ಗೆ 10.18ಕ್ಕೆ 250 ಟನ್ ತೂಕದ ಸಾಧನಗಳನ್ನು ಹೊತ್ತು ಎಲ್‌ಎಸ್‌ಎಲ್‌ವಿ-ಸಿ62 ರಾಕೆಟ್ ನಭಕ್ಕೆ ಚಿಮ್ಮಲಿದೆ ಎಂದು ಇಸ್ರೋ ಭಾನುವಾರ ತಿಳಿಸಿದೆ. ಇಸ್ರೋ ಅಂಗಸಂಸ್ಥೆಯಾದನ್ಯೂಸ್ಪೇಸ್ ಇಂಡಿಯಾ ಲಿಮಿಟೆಡ್ ನೇತೃತ್ವದಲ್ಲಿ ದೇಶೀಯ ಹಾಗೂ ವಿದೇಶದ 14 ಉಪಗ್ರಹ ಗಳನ್ನು ಕಕ್ಷೆಗೆ ಕಳುಹಿಸಲು ಸಿದ್ಧತೆ ನಡೆದಿದೆ. ಥಾಯ್ಲೆಂಡ್ ಮತ್ತು ಬ್ರಿಟನ್ ಅಭಿವೃದ್ಧಿಪಡಿಸಿದ ಭೂ ಸರ್ವೇಕ್ಷಣಾ ಉಪಗ್ರಹವನ್ನು ಪಿಎಸ್‌ಎಲ್‌ವಿ ರಾಕೆಟ್ ಮೊದಲಿಗೆ ಕಕ್ಷೆಗೆ ತಲುಪಿಸಲಿದೆ. ನಂತರ ನಭಕ್ಕೆ ಹಾರಿದ 17 ನಿಮಿಷಗಳ ಒಳಗಾಗಿ ಉಳಿದ 13 ಉಪಗ್ರಹಗಳನ್ನು ಸೂರ್ಯಸಮನ್ವಯ ಕಕ್ಷೆಗೆ ಸೇರಿಸಲಿದೆ.

Dr. Rajkumar IASKAS Academy

## ❖ ಗೋದ್ನಾ ಯೋಜನೆ ಜಿಂದಾಲ್ ತೆಕ್ಕೆಗೆ: 1,600 ಮೆ.ವಾ ಉತ್ಪಾದನೆ: ಪಿಪಿಪಿ ಮಾದರಿಯಲ್ಲಿ ಮೊದಲ ಪ್ರಯೋಗ

**ಸಂದರ್ಭ: ಸುಮಾರು 18 ವರ್ಷಗಳಿಂದ ನನೆಗುದಿಯಲ್ಲಿದ್ದ 1,600 ಮೆಗಾವಾಟ್ ಸಾಮರ್ಥ್ಯದ ಗೋದ್ನಾ ಶಾಖೋತ್ಪನ್ನ ವಿದ್ಯುತ್ ಯೋಜನೆಯನ್ನು ಜಿಂದಾಲ್ South ವೆಸ್ಟ್ (ಜೆಎಸ್‌ಡಬ್ಲ್ಯು) ಎನರ್ಜಿ ಕಂಪನಿ ಕೈಗೆತ್ತಿಕೊಳ್ಳಲಿದೆ. ಇದಕ್ಕೆ ಸಂಬಂಧಿಸಿದಂತೆ ಕರ್ನಾಟಕ ವಿದ್ಯುತ್ ನಿಗಮ ನಿಯಮಿತ (ಕೆಪಿಸಿಎಲ್) ಸದ್ಯದಲ್ಲೇ ಒಪ್ಪಂದ ಮಾಡಿಕೊಳ್ಳಲಿದೆ.**

- ಸಾರ್ವಜನಿಕ ಖಾಸಗಿ ಸಹ ಭಾಗಿತ್ವದ(ಪಿಪಿಪಿ) ಈ ಯೋಜನೆಯನ್ನು ಛತ್ತೀಸಗಢದ ಗೋದ್ನಾದಲ್ಲಿ ಕರ್ನಾಟಕ ಸರ್ಕಾರ ಆರಂಭಿಸುತ್ತಿದೆ. ಇದರ ಅನುಷ್ಠಾನದ ಹೊಣೆಯನ್ನು ಜೆಎಸ್‌ಡಬ್ಲ್ಯುಗೆ ನೀಡುವುದಕ್ಕೆ ಈ ತಿಂಗಳ 8ರಂದು ನಡೆದ ಕೆಪಿಸಿಎಲ್ ನಿರ್ದೇಶಕರ ಮಂಡಳಿಯ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ ಎಂದು ಮೂಲಗಳು 'ಪ್ರಜಾವಾಣಿ'ಗೆ ತಿಳಿಸಿವೆ.
- ಈ ಯೋಜನೆಯನ್ನು ಪಿಪಿಪಿ ಮಾದರಿಯಲ್ಲಿ ಕೈಗೆತ್ತಿಕೊಳ್ಳಲು ಕೆಪಿಸಿಎಲ್ ಟೆಂಡರ್ ಕರೆದಿತ್ತು. ಇದರಲ್ಲಿ ಎರಡು ಕಂಪನಿಗಳು ಭಾಗವಹಿಸಿದ್ದವು. ಜೆಎಸ್‌ಡಬ್ಲ್ಯು, ಕಡಿಮೆ ಬಿಡ್ ಮಾಡಿದ್ದ ಕಾರಣ, ಆ ಕಂಪನಿಗೆ ನೀಡಲು ಸಭೆಯ ಅಧ್ಯಕ್ಷತೆ ವಹಿಸಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮತಿ ಸೂಚಿಸಿದರು ಎಂದು ಇಂಧನ ಇಲಾಖೆಯ ಅಧಿಕಾರಿಯೊಬ್ಬರು ತಿಳಿಸಿದರು.
- ಜೆಎಸ್‌ಡಬ್ಲ್ಯು ಎನರ್ಜಿ ಕಂಪನಿಯು 1 ಯೂನಿಟ್‌ಗೆ ₹4.05 ಹಾಗೂ ಡಿಬಿ ಪವರ್ ಲಿಮಿಟೆಡ್ ₹4.20 ದರ ನಿಗದಿ ಮಾಡುವಂತೆ ಕೋರಿದ್ದವು. ಕಡಿಮೆ ದರ, ತಾಂತ್ರಿಕ ಸಾಮರ್ಥ್ಯ ಇತ್ಯಾದಿಗಳನ್ನು ಗಮನದಲ್ಲಿಟ್ಟುಕೊಂಡು ಜೆಎಸ್‌ಡಬ್ಲ್ಯು, ಅಯ್ಕೆ ಮಾಡಲಾಗಿದೆ.
- 'ಯೋಜನೆ ಪೂರ್ಣಗೊಂಡ ಬಳಿಕ ಅದಕ್ಕೆ ಎಷ್ಟು ಹಣ ವೆಚ್ಚವಾಗಿದೆ. ಮಾರುಕಟ್ಟೆಯಲ್ಲಿ ಕಲ್ಲಿದ್ದಲು ದರ ಎಷ್ಟಿದೆ ಎಂಬುದನ್ನು ಆಧರಿಸಿ, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗವು (ಕೆಇಆರ್‌ಸಿ) ಯೂನಿಟ್‌ಗೆ ಎಷ್ಟು ದರ ಎಂಬುದನ್ನು ನಿಗದಿ ಮಾಡಲಿದೆ. ಟೆಂಡರ್‌ನಲ್ಲಿ ಈಗ ನಿಗದಿ ಮಾಡಿರುವ ದರದಲ್ಲಿ ಸ್ವಲ್ಪಮಟ್ಟಿಗೆ ವ್ಯತ್ಯಾಸ ಆದರೂ ಆಗಬಹುದು' ಎಂದು ಅಧಿಕಾರಿಯೊಬ್ಬರು ವಿವರಿಸಿದರು.
- ಈ ಯೋಜನೆಗೆ ಸುಮಾರು ₹18 ಸಾವಿರ ಕೋಟಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದೆ. ಜೆಎಸ್‌ಡಬ್ಲ್ಯು ಶೇ 74ರಷ್ಟು ಹಾಗೂ ಕೆಪಿಸಿಎಲ್ ಶೇ 26ರಷ್ಟು ಮೊತ್ತವನ್ನು ಭರಿಸಲಿದೆ. ಯೋಜನೆ 45 ತಿಂಗಳಲ್ಲಿ ಪೂರ್ಣಗೊಳ್ಳಬಹುದು ಅಂದಾಜಿಸಲಾಗಿದೆ. ಎಂದು ಬಿ.ಎಸ್. ಯಡಿಯೂರಪ್ಪ ಅವರು ಮುಖ್ಯಮಂತ್ರಿ ಆಗಿದ್ದಾಗ 2008ರಲ್ಲಿ ಸರ್ಕಾರದೊಂದಿಗೆ ಯೋಜನೆ' ಒಪ್ಪಂದ ಈ ಛತ್ತೀಸಗಢ 'ಗೋದ್ನಾ ಮಾಡಿಕೊಳ್ಳಲಾಗಿತ್ತು. ಯೋಜನೆಗಾಗಿ 1,016 ಎಕರೆ ಖಾಸಗಿ ಜಮೀನು ಹಾಗೂ 160 ಎಕರೆ ಸರ್ಕಾಲ ಜಮೀನನ್ನು ಈಗಾಗಲೇ ಸ್ವಾಧೀನಪಡಿಸಿ ಕೊಳ್ಳಲಾಗಿದೆ. ಇದಕ್ಕಾಗಿ ಸುಮಾರು ₹220 ಕೋಟಿ ವೆಚ್ಚವಾಗಿದೆ.
- **<u>ಕಲ್ಲಿದ್ದಲು ಹಂಚಿಕೆ:</u>** ಗೋದ್ನಾದ ಸಮೀಪದಲ್ಲೇ ಎರಡು ಕಲ್ಲಿದ್ದಲು ಗಣಿಗಳನ್ನು ಕೇಂದ್ರ ಸರ್ಕಾರವು 2019ರಲ್ಲಿ ಕೆಪಿಸಿಎಲ್‌ಗೆ ಹಂಚಿಕೆ ಮಾಡಿದೆ. 1,600 ಮೆಗಾವಾಟ್ ವಿದ್ಯುತ್ ಉತ್ಪಾದನೆಗಾಗಿ ವರ್ಷಕ್ಕೆ 70 ಲಕ್ಷ ಟನ್ ಕಲ್ಲಿದ್ದಲು ಬೇಕಾಗುತ್ತದೆ. 21 ಕೋಟಿ ಟನ್ ಕಲ್ಲಿದ್ದಲು ಅಲ್ಲಿ ಲಭ್ಯವಿದ್ದು, 30 ವರ್ಷಗಳವರೆಗೆ ಬಳಸಬಹುದು ಎಂದು ಅಂದಾಜಿಸಲಾಗಿದೆ.
- ಈ ಯೋಜನೆಗೆ ಆಗತ್ಯವಿರುವ ನೀರನ್ನು ಬಳಸಿಕೊಳ್ಳಲಾಗುತ್ತದೆ. ನದಿಯಿಂದ ಮಹಾನದಿಯಿಂದ ಗೋಡಾಗೆ ನೀರು ತರಲು ಬ್ಯಾರೇಜ್ ನಿರ್ಮಾಣಕ್ಕಾಗಿ 264 ಕೋಟಿ ವೆಚ್ಚ ಮಾಡಲಾಗಿದೆ.

## ❖ 'ವಿತ್ತೀಯ ಕೊರತೆ ಮಿತಿ ಮೀರದು'

**ಸಂದರ್ಭ: 'ಪ್ರಸಕ್ತ ಆರ್ಥಿಕ ವರ್ಷದ ಬಜೆಟ್‌ನಲ್ಲಿ ಅಂದಾಜು ಮಾಡಲಾಗಿರುವ ವಿತ್ತೀಯ ಕೊರತೆಯ ಮಿತಿಯನ್ನು ಕೇಂದ್ರ ಸರ್ಕಾರವು ಮೀರುವುದಿಲ್ಲ ಎಂಬ ನಿರೀಕ್ಷೆ ಇದೆ' ಎಂದು ಪಿಡಬ್ಲ್ಯುಸಿ ಪಾಲುದಾರ ರಾನೆನ್ ಬ್ಯಾನರ್ಜಿ ಹೇಳಿದ್ದಾರೆ. ಜಿಡಿಪಿಯ ಶೇ 4.4ರಷ್ಟಕ್ಕೆ ವಿತ್ತೀಯ ಕೊರತೆಯನ್ನು ಮಿತಿಗೊಳಿಸುವ ಉದ್ದೇಶವನ್ನು ಕೇಂದ್ರವು ಬಜೆಟ್‌ನಲ್ಲಿ ಹೇಳಿದೆ.**

- ಇದು ಹಣಕಾಸು ನಿರ್ವಹಣೆಯ ವಿಚಾರವಾಗಿ ದೇಶವು ಹೊಂದಿರುವ ಬದ್ಧತೆಯ ಬಗ್ಗೆ ಜಾಗತಿಕ ಮಟ್ಟದ ಹೂಡಿಕೆದಾರರಿಗೆ ನೀಡಿರುವ ಸಕಾರಾತ್ಮಕ ಸಂದೇಶ ಎಂದು ಅವರು ಹೇಳಿದ್ದಾರೆ.
- ರಾಷ್ಟ್ರೀಯ ಸಾಂಖ್ಯಿಕ ಕಚೇರಿಯು (ಎನ್‌ಎಸ್‌ಒ) ಜಿಡಿಪಿ ಬೆಳವಣಿಗೆಯ ಗುರಿಯನ್ನು (ಹಣದುಬ್ಬರದ ಪರಿಣಾಮವನ್ನು ಪರಿಗಣನೆಗೆ ತೆಗೆದುಕೊಳ್ಳದೆ) ಶೇ 10.1ರಿಂದ ಶೇ 8ಕ್ಕೆ ಪರಿಷ್ಕರಿಸಿತ್ತು. ಇದು ವಿತ್ತೀಯ ಕೊರತೆಯ ಗುರಿಯನ್ನು ಸಾಧಿಸುವ ಸರ್ಕಾರದ ಸಾಮರ್ಥ್ಯದ ಬಗ್ಗೆ ಕಳವಳ ಹುಟ್ಟುಹಾಕಿತ್ತು.
- 2024-25ರ ಆರ್ಥಿಕ ವರ್ಷದಲ್ಲಿ ಕೇಂದ್ರವು ಶೇ 4.8ರಷ್ಟು ವಿತ್ತೀಯ ಕೊರತೆಯ ಗುರಿಯನ್ನು ಸಾಧಿಸಿತ್ತು.
- ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಬಜೆಟ್ ಮಂಡನೆ ವೇಳೆ, 2025-26ರ ಆರ್ಥಿಕ ವರ್ಷದಲ್ಲಿ ವಿತ್ತೀಯ ಕೊರತೆಯನ್ನು ಜಿಡಿಪಿಯ ಶೇ 4.4ಕ್ಕೆ (ಹಣಕಾಸಿನ ಮೌಲ್ಯದ ಲೆಕ್ಕದಲ್ಲಿ ₹15.69 ಲಕ್ಷ ಕೋಟಿ) ತಗ್ಗಿಸಲು ಸರ್ಕಾರ ಬಜೆಟ್‌ನಲ್ಲಿ ಗುರಿನಿಗದಿಮಾಡಲಾಗಿದೆ ಎಂದಿದ್ದರು.

## ❖ ಕ್ರಿಪ್ಟೊ ಕೇಂದ್ರಗಳ ನಿಯಮ ಬಿಗಿ

**ಸಂದರ್ಭ: ಡಿಜಿಟಲ್ ಆಸ್ತಿಗಳ ಮಾರುಕಟ್ಟೆಯಲ್ಲಿ ಅಕ್ರಮ ಚಟುವಟಿಕೆ ಗಳನ್ನು ತಡೆಯುವ ಉದ್ದೇಶದಿಂದ ಕೇಂದ್ರದ ವಿತ್ತೀಯ ಗುಪ್ತದಳವು (ಎಫ್‌ಐಯು) ಕಠಿಣ ನಿಯಮಗಳನ್ನು ಅನಾವರಣ ಮಾಡಿದೆ.**

- ಹಣದ ಅಕ್ರಮ ವರ್ಗಾವಣೆ ತಡೆಯುವ ಉದ್ದೇಶದ ಹಾಗೂ ಕೆವೈಸಿ (ಗ್ರಾಹಕರಿಗೆ ಸಂಬಂಧಿಸಿದ ಅಗತ್ಯ ಮಾಹಿತಿ ಕಲೆಹಾಕುವುದು) ಪ್ರಕ್ರಿಯೆಗಳ ಕುರಿತಾದ ನಿಯಮಗಳು ಇವು. ಕ್ರಿಪ್ಟೊಕರೆನ್ಸಿ ವಿನಿಮಯ ಸೇವೆಗಳನ್ನು ಒದಗಿಸುವವರು ಪಾಲಿಸಬೇಕಿದೆ. ಇವುಗಳನ್ನು
- ಪರಿಷ್ಕೃತ ನಿಯಮಗಳನ್ನು ಜನವರಿ 8ರಂದು ಹೊರಡಿಸಲಾಗಿದೆ. ಇವು ಕ್ರಿಪ್ಟೊ ವಿನಿಮಯ ಕೇಂದ್ರಗಳನ್ನು 'ವಾಸ್ತವೋಪಮ ಡಿಜಿಟಲ್ ಆಸ್ತಿ (ಪಿಡಿಎ) ಸೇವಾದಾತರು' ಎಂದು ಗುರುತಿಸಿದೆ. ನಿಯಮಗಳ ಪ್ರಕಾರ ಇವರು ಸರಳವಾದ ಕೆಲವು ದಾಖಲೆಪತ್ರಗಳನ್ನು ಗ್ರಾಹಕರಿಂದ ಪಡೆಯುವುದಷ್ಟೇ ಅಲ್ಲದೆ, ಇನ್ನೂ ಹಲವು ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕಾಗುತ್ತದೆ.
- ವಿನಿಮಯ ಕೇಂದ್ರಗಳ ಸೇವೆಯನ್ನು ಪಡೆಯಲು ಮುಂದಾಗುವ ಗ್ರಾಹಕರು ತಮ್ಮ ಸೆಲ್ಫಿಯನ್ನು ಕ್ಲಿಕ್ಕಿಸಬೇಕು ಎಂದು ನಿಯಮಗಳಲ್ಲಿ ಹೇಳಲಾಗಿದೆ. ಕ್ಯಾಮೆರಾ ಕಣ್ಣಿನ ಆಚೆಯಲ್ಲಿ ಗ್ರಾಹಕ ನಿಜಕ್ಕೂ ನಿಂತಿದ್ದಾನೆ ಎಂಬುದನ್ನು ತಂತ್ರಾಂಶವು ಆತನ ಕಣ್ಣುರೆಪ್ಪೆಗಳ ಚಲನೆ ಅಥವಾ ತಲೆಯ ಚಲನೆಯ ಮೂಲಕ ಗುರುತಿಸುತ್ತದೆ. ಈ ಪ್ರಕ್ರಿಯೆಯನ್ನು ಅನುಸರಿಸುವುದರಿಂದಾಗಿ ಭಾವಚಿತ್ರ ಅಥವಾ ಡೀಪ್ ಫೇಕ್ ಚಿತ್ರ ಬಳಸಿ ವಂಚನೆ ಎಸಗುವುದನ್ನು ತಡೆಯಲು ಸಾಧ್ಯವಾಗುತ್ತದೆ.
- ಬಿಗಿ ನಿಲುವು: ಕೇಂದ್ರ ಹಣಕಾಸು ಸಚಿವಾಲಯದ ಕೆಲಸ ಅಧೀನದಲ್ಲಿ ಮಾಡುವ ಎಫ್‌ಐಯು, ಕ್ರಿಪ್ಟೊ ಆಸ್ತಿಗಳನ್ನು ಬಳಸಿ ನಡೆಯುವ ವಹಿವಾಟುಗಳು ಇನ್ನೊಬ್ಬರಿಗೆ ಗೊತ್ತಾಗದಂತೆ ಮಾಡುವುದರ ವಿರುದ್ಧ ಕಠಿಣ ನಿಲುವು ತಾಳಿದೆ. ಕೆಲವು ಕಂಪನಿಗಳು ಷೇರುಗಳ ಮಾದರಿಯಲ್ಲಿ ಡಿಜಿಟಲ್ ಟೋಕನ್‌ಗಳನ್ನು ನೀಡು ವುದನ್ನು ನಿರುತ್ತೇಜಿಸುವ ಉದ್ದೇಶವನ್ನು ನಿಯಮಗಳು ಹೊಂದಿವೆ.
- ಭಾರತದಲ್ಲಿ ಕೆಲಸ ನಿರ್ವಹಿಸುತ್ತಿ-ರುವ ಕ್ರಿಪ್ಟೊ ವಿನಿಮಯ ಕೇಂದ್ರಗಳಿಗೆ ಎಫ್‌ಐಯು ಏಕಗವಾಕ್ಷಿ ನಿಯಂತ್ರಣ ನಿಯಂತ್ರಣ ವ್ಯವಸ್ಥೆಯಂತಿದೆ. ಎಲ್ಲ ಕ್ರಿಪ್ಟೊ ವಿನಿಮಯ ಕೇಂದ್ರಗಳು ಎಫ್‌ಐಯು ಬಳಿ ನೋಂದಣಿ ಮಾಡಿಕೊಳ್ಳಬೇಕು, ಅನುಮಾನಕ್ಕೆ ಆಸ್ಪದ ನೀಡುವಂತಹ ವಹಿವಾಟುಗಳ ಬಗ್ಗೆ ಕಾಲಕಾಲಕ್ಕೆ ವರದಿ ಮಾಡಬೇಕು, ಹಣದ ಅಕ್ರಮ ವರ್ಗಾವಣೆ ತಡೆಯಲು, ಭಯೋತ್ಪಾದನಾ

ಚಟುವಟಿಕೆಗಳಿಗೆ ಹಣಕಾಸಿನ ನೆರವು ನೀಡುವುದನ್ನು ತಡೆಯಲು ತಮ್ಮ ಗ್ರಾಹಕರ ದಾಖಲೆ ನಿರ್ವಹಿಸಬೇಕು ಎಂದು ನಿಯಮಗಳಲ್ಲಿ ಹೇಳಲಾಗಿದೆ.

- 'ಹೆಚ್ಚಿನ ರಿಸ್ಕ್' ಇರುವ ವ್ಯಕ್ತಿಗಳ ಕೆವೈಸಿ ಪರಿಷ್ಕರಣೆ ಪ್ರಕ್ರಿಯೆಯನ್ನು ಆರು ತಿಂಗಳಿಗೆ ಒಮ್ಮೆ ನಡೆಸಬೇಕು. ಇತರ ಎಲ್ಲರ ಕೆವೈಸಿ ಪರಿಷ್ಕರಣೆ-ಯನ್ನು ವರ್ಷಕ್ಕೊಮ್ಮೆ ನಡೆಸಬೇಕು ಎಂದು ವಿನಿಮಯ ಕೇಂದ್ರಗಳಿಗೆ ಹೇಳಲಾಗಿದೆ.
- ತೆರಿಗೆಗಳ್ಳರ ಸ್ವರ್ಗ ಎಂದು ಹೆಸರಾಗಿರುವ ದೇಶಗಳ ಜೊತೆ ನಂಟು ಕಲೆಹಾಕಬೇಕು. ಹೊಂದಿರುವವರ, ಹೆಚ್ಚಿನ ರಿಸ್ಕ್ ಇರುವ ವ್ಯಕ್ತಿಗಳು ಮತ್ತು ಸಂಸ್ಥೆಗಳ ವಿಚಾರವಾಗಿ ಮುಕ್ತ ಮೂಲಗಳಿಂದ ಮಾಹಿತಿ ಎಫ್ಎಟಿಎಫ್‌ನ (ಫೈನಾನ್ಶಿಯಲ್ ಆ್ಯಕ್ಷನ್ ಟಾಸ್ಕ್ ಫೋರ್ಸ್) ಬೂದು ಅಥವಾ ಕಪ್ಪುಪಟ್ಟಿ ಯಲ್ಲಿ ಇರುವ ಪ್ರದೇಶಗಳಿಗೆ ಸೇರಿದವರ, ಲಾಭದ ಉದ್ದೇಶವಿಲ್ಲದ ಸಂಘಟನೆಗಳ (ಎನ್‌ಪಿಒ), ಸರ್ಕಾರಗಳಲ್ಲಿ ಮಹತ್ವದ ಹುದ್ದೆ ಹೊಂದಿರುವ ವ್ಯಕ್ತಿಗಳ ಬಗ್ಗೆಯೂ ಹೆಚ್ಚಿನ ಮಾಹಿತಿಯನ್ನು ಒಗ್ಗೂಡಿಸಬೇಕು ಎಂದು ನಿಯಮಗಳು ಹೇಳಿವೆ.
- ಷೇರುಗಳ ಬದಲು ಡಿಜಿಟಲ್ ಟೋಕನ್‌ಗಳನ್ನು ನೀಡುವ ಪ್ರಕ್ರಿಯೆ-ಯಲ್ಲಿ ಹೆಚ್ಚಿನ ಮಟ್ಟದ ಹಣದ ಅಕ್ರಮ ವರ್ಗಾವಣೆ ಹಾಗೂ ಭಯೋತ್ಪಾದಕ ಚಟುವಟಿಕೆಗಳಿಗೆ ಹಣದ ನೆರವು ಒದಗಿಸುವ ಅಯಾಮಗಳೂ ಇರುತ್ತವೆ. ಹೀಗೆ ಡಿಜಿಟಲ್ ಟೋಕನ್ ನೀಡುವುದನ್ನು ಸಮರ್ಥಿಸಿಕೊಳ್ಳಲು ಆರ್ಥಿಕ ತರ್ಕ ಇರುವುದಿಲ್ಲ ಎಂದು ನಿಯಮಗಳಲ್ಲಿ ಹೇಳಲಾಗಿದೆ.
- ವಿನಿಮಯ ಕೇಂದ್ರಗಳು ಗ್ರಾಹಕರ ಗುರುತು. ವಿಳಾಸ ಮತ್ತು ವಹಿವಾಟಿನ ವಿವರವನ್ನು ಕನಿಷ್ಠ ಐದು ವರ್ಷಗಳವರೆಗೆ ಹಾಗೇ ಇರಿಸಬೇಕು, ತನಿಖೆ ನಡೆಯುತ್ತಿದ್ದರೆ ಅದು ಪೂರ್ಣ-ಗೊಳ್ಳುವವರೆಗೆ ಉಳಿಸಿಕೊಳ್ಳಬೇಕು ಎಂದು ನಿಯಮಗಳಲ್ಲಿ ತಾಕೀತು ಮಾಡಲಾಗಿದೆ.

## ❖ ಟೆನಿಸ್: ಸಬಲೆಂಕಾ, ಮೆಡ್ವೆಡೇವ್‌ಗೆ ಪ್ರಶಸ್ತಿ

**ಸಂದರ್ಭ: ವಿಶ್ವದ ಅಗ್ರ ಶ್ರೇಯಾಂಕದ ಟೆನಿಸ್ ಆಟಗಾರ್ತಿ ಆರಿನಾ ಸಬಲೆಂಕಾ ಅವರು ನೇರ ಸೆಟ್‌ಗಳಲ್ಲಿ ಉಕ್ರೇನ್‌ನ ಮಾರ್ತಾ ಕೊಪ್ಪಿಯುಕ್ ಅವರನ್ನು ಮಣಿಸಿ ಸತತ ಎರಡನೇ ಬಾರಿಗೆ ಬ್ರಿಸ್ಬೇನ್ ಇಂಟರ್‌ನ್ಯಾಷನಲ್ ಪ್ರಶಸ್ತಿ ಗೆದ್ದುಕೊಂಡರು.**

- ಕ್ವೀನ್ಸ್‌ಲ್ಯಾಂಡ್ ಟೆನಿಸ್ ಸೆಂಟರ್ ಹಂಪಾನುವಾರ ನಡೆದ ಫೈನಲ್‌ನಲ್ಲಿ aaਸ 6-4, 6-3 ರಿಂದ ಗೆದ್ದರು. ಅದರೊಂದಿಗೆ, ಇದೇ 18ರಂದು ಆರಂಭವಾಗಲಿರುವ ವರ್ಷದ ಮೊದಲ ಗ್ರಾನ್‌ಸ್ಲಾಮ್ ಟೂರ್ನಿ 'ಆಸ್ಟ್ರೇಲಿಯಾ ಓಪನ್'ಗೆ ಭರ್ಜರಿ ಯಾಗಿಯೇ ಸಿದ್ಧತೆ ಆರಂಭಿಸಿದರು.
- ವಿಶ್ವ ಕ್ರಮಾಂಕದಲ್ಲಿ 13ನೇ ಸ್ಥಾನದ ಲ್ಲಿರುವ ರಷ್ಯಾದ ಆಟಗಾರ ಡೇನಿಯಲ್ ಮೆಡ್ವೆಡೇವ್ ಅವರು ಪುರುಷರ ಸಿಂಗಲ್ಸ್ ಪ್ರಶಸ್ತಿ ಗೆದ್ದುಕೊಂಡರು. 96 ನಿಮಿಷ ನಡೆದ ಪ್ರಶಸ್ತಿ ಸುತ್ತಿನ ಹಣಾಹಣಿಯಲ್ಲಿ 6-2, 7-6 (7-1) 505 ಅಮೆರಿಕದ ಬ್ರ್ಯಾಂಡನ್ ನಕಾಶಿಮಾ ಅವರನ್ನು ಮಣಿಸಿದರು.
- ಅಗ್ರ 10ರಲ್ಲಿ ಬುಬ್ಲಿಕ್: ಕಜಕಸ್ತಾನದ ಅಲೆಕ್ಸಾಂಡರ್ ಬುಬ್ಲಿಕ್ ಅವರು ಭಾನುವಾರ ನಡೆದ ಹಾಂಗ್ ಕಾಂಗ್ ಓಪನ್ ಟೆನಿಸ್ ಟೂರ್ನಿಯ ಫೈನಲ್‌ನಲ್ಲಿ 7-6 (7-2),6-3505 ಸೆಟ್ಗಳಲ್ಲಿ ಇಟಲಿಯ ಲೊರೆಂಜೊ ಮುಸೆಟ್ಟಿ ವಿರುದ್ಧ ಗೆದ್ದರು. ಈ ಟ್ರೋಫಿಯೊಂದಿಗೆ ಅವರು ಮೊದಲ ಬಾರಿಗೆ ವಿಶ್ವ ಯಾಂಕಿಂಗ್‌ನ ಅಗ್ರ 10ರಲ್ಲಿ ಸ್ಥಾನ ಪಡೆದರು.

Dr. Rajkumar's KAS Academy

## ❖ ಇಸ್ರೋ: ವರ್ಷದ ಮೊದಲ ಉಪಗ್ರಹ ಉಡಾವಣೆ ನಿಷ್ಫಲ: ಕಕ್ಷೆ ತಲುಪಲು ಮತ್ತು ವಿಫಲ

**ಸಂದರ್ಭ: ವಿದೇಶದ ಭೂ ಸರ್ವೇಕ್ಷಣಾ ಉಪಗ್ರಹ ಸೇರಿದಂತೆ 16 ಉಪಗ್ರಹಗಳನ್ನು ಹೊತ್ತು ನಭಕ್ಕೆ ಚಿಮ್ಮಿದ್ದ ಪಿಎಸ್‌ಎಲ್‌ವಿ-ಸಿ62 ರಾಕೆಟ್‌ನಲ್ಲಿ ತಾಂತ್ರಿಕ ದೋಷವುಂಟಾಗಿ ಯೋಜನೆಯು ವಿಫಲವಾಗಿದೆ ಎಂದು ಇಸ್ರೋ ತಿಳಿಸಿದೆ.**




- “ನಿಗದಿತ ಕಕ್ಷೆಗೆ ಉಪಗ್ರಹಗಳನ್ನು ಸೇರಿಸುವ ಉದ್ದೇಶದ ಯೋಜನೆಯು ವಿಫಲವಾಗಿದೆ. ಎಲ್ಲಾ 16 ಉಪಗ್ರಹಗಳು ಸಂಪರ್ಕ ಕಳೆದುಕೊಂಡಿವೆ' ಎಂದು ಅದು ಮಾಹಿತಿ ನೀಡಿದೆ.
- ಇದರೊಂದಿಗೆ ಇಸ್ರೋದ ವರ್ಷದ ಮೊದಲ ಉಪ ಗ್ರಹ ಉಡಾವಣೆ ಯೋಜನೆ ವಿಫಲವಾದಂತಾಗಿದೆ.
- “ಪೂರ್ವನಿಗದಿಯಂತೆ ಆಂಧ್ರಪ್ರದೇಶದ ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ರಾಕೆಟ್ ಉಡಾವಣೆ ಮಾಡಲಾಗಿತ್ತು. ಉಪಗ್ರಹಗಳನ್ನು ಭೂಮಿಯಿಂದ 512ಕಿ.ಮೀ. ದೂರದ 'ಸೂರ್ಯ ಸಮನ್ವಯ ಕಕ್ಷೆ'ಗೆ ಸೇರಿಸುವ ಉದ್ದೇಶದ ಮಹತ್ವದ ಯೋಜನೆ ಇದಾಗಿತ್ತು. ಒಟ್ಟು 4 ಹಂತಗಳಲ್ಲಿ ಯೋಜನೆಯನ್ನು ರೂಪಿಸಲಾಗಿತ್ತು. 3ನೇಹಂತದ ಕೊನೆಯಲ್ಲಿ ಕಾರ್ಯಾಚರಣೆ ವಿಫಲವಾಯಿತು' ಎಂದು ಇಸ್ರೋ ತಿಳಿಸಿದೆ. 'ಯೋಜನಾ ನಿರ್ದೇಶಕರ ಅನುಮತಿಯ ಬಳಿಕ ಸ್ವಯಂಚಾಲಿತವಾಗಿ ಉಪಗ್ರಹವು ಉಡಾವಣೆಗೊಂಡಿತು' ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದರು.
- 'ಇಸ್ರೋ ವಿಜ್ಞಾನಿಗಳು ಉಡಾವಣಾ ವಾಹಕದ ಕ್ಷಣ ಕ್ಷಣದ ಮಾಹಿತಿ ನೀಡುತ್ತಿದ್ದರು. ಆರಂಭಿಕ ಹಂತವು ನಿರೀಕ್ಷೆಯಂತೆಯೇ ಸಾಗಿತ್ತು. ಆದರೆ ಮೂರನೇ ಹಂತದ ಕೊನೆಯಲ್ಲಿ ದೋಷ ಕಾಣಿಸಿಕೊಂಡಿತು. ಬಳಿಕ ರಾಕೆಟ್ ಪಥ ಬದಲಿಸಿತು. ತಾಂತ್ರಿಕ ದೋಷದ ಕಾರಣ ಪತ್ತೆಗಾಗಿ ಲಭ್ಯವಿರುವ ದತ್ತಾಂಶವನ್ನು ವಿಶ್ಲೇಷಿಸಲಾಗುತ್ತಿದೆ' ಎಂದು ಇಸ್ರೋ ಅಧ್ಯಕ್ಷ ವಿ.ನಾರಾಯಣನ್ ತಿಳಿಸಿದರು.

## ❖ ಬಹಿಷ್ಕಾರ:3ವರ್ಷಜೈಲು,₹1ಲಕ್ಷದಂಡ

**ಸಂದರ್ಭ: ಸಾಮಾಜಿಕ ಬಹಿಷ್ಕಾರಕ್ಕೆ ಸಂಪೂರ್ಣ ನಿಷೇಧ ಹೇರಲು ನಿರ್ಧರಿಸಿ ರುವ ರಾಜ್ಯ ಸರ್ಕಾರ, ಇನ್ನು ಮುಂದೆ ಯಾವುದೇ ವ್ಯಕ್ತಿ, ಕುಟುಂಬ ಅಥವಾ ಕುಟುಂಬದ ಸದಸ್ಯರನ್ನು ಸಾಮಾಜಿಕ ವಾಗಿ ಬಹಿಷ್ಕರಿಸಿದರೆ ಮೂರು ವರ್ಷದ ವರೆಗೆ ಜೈಲು ಶಿಕ್ಷೆ ಮತ್ತು 1 ಲಕ್ಷ ದಂಡ ವಿಧಿಸುವ ಕಾನೂನು ಜಾರಿಗೆ ತಂದಿದೆ.**

- ಸಾಮಾಜಿಕ ಬಹಿಷ್ಕಾರವನ್ನು ಅಪರಾಧವೆಂದು ಪರಿಗಣಿಸಿ ಶಿಕ್ಷೆ ವಿಧಿಸಲು ಅವಕಾಶ ನೀಡುವ 'ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ. ನಿಷೇಧ ಮತ್ತು ಪರಿಹಾರ) ಮಸೂದೆಗೆ ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು ಅಂಕಿತ ಹಾಕಿದ್ದಾರೆ. ಈ ಕುರಿತು ರಾಜ್ಯ ಸರ್ಕಾರ ಸೋಮವಾರ ಅಧಿಸೂಚನೆ ಹೊರಡಿಸಿದ್ದ ಕಾಯ್ದೆ ರೂಪದಲ್ಲಿ ಜಾರಿಗೆ ಬಂದಿದೆ.
- ಬಹಿಷ್ಕರಿಸುವ ತೀರ್ಮಾನ ತೆಗೆದುಕೊಂಡವರು, ಈ ಉದ್ದೇಶದಿಂದ ಸಭೆ, ಪಂಚಾಯಿತಿ, ಜಮಾವಣೆ, ಅಭಿಪ್ರಾಯ ಸಂಗ್ರಹಿಸುವುದು, ಬಹಿಷ್ಕಾರಕ್ಕೆ ಪ್ರತ್ಯಕ್ಷ, ಪರೋಕ್ಷ ಸಹಾಯ, ನೀಡುವವರನ್ನೂ ಅಪರಾಧಿಗಳೆಂದು ಪರಿಗಣಿಸಿ ಜೈಲು ಅಥವಾ ದಂಡ ಅಥವಾ ಎರಡನ್ನೂ ವಿಧಿಸಲು ಕೂಡಾ ಈ ಕಾಯ್ದೆಯಲ್ಲಿ ಅವಕಾಶ ಕಲ್ಪಿಸಲಾಗಿದೆ.

- ಒತ್ತಡ, ಪ್ರಚೋದನೆ ಈ ಕಾಯ್ದೆಯ ಅನ್ವಯ, ಬಹಿಷ್ಕಾರಕ್ಕೆ ಒಳಗಾದವರು ಪೊಲೀಸ್ ಠಾಣೆ, ನ್ಯಾಯಾಧೀಶರಿಗೆ ದೂರು ನೀಡ ಬಹುದು. ಪ್ರಥಮ ದರ್ಜೆ ನ್ಯಾಯಾಧೀಶ ರಿಗೆ ವಿಚಾರಣೆಯ ಅಧಿಯಾತ ನೀಡಲಾಗಿದೆ.
- ಸಂತ್ರಸ್ತರಿಗೆ ಸಹಾಯ ಒದಗಿಸಲು ಮತ್ತು ದಂಡದ ಮೊತ್ತವನ್ನು ಪರಿಹಾರ ವಾಗಿ ನೀಡಲು ನಿರ್ದೇಶನ ನೀಡ ಬಹುದು. ಸಾಮಾಜಿಕ ಬಹಿಷ್ಕಾರ ದಂತಹ ನಿರ್ಧಾರ ತೆಗೆದುಕೊಳ್ಳಲು ನಡೆಸುವ ಸಭೆಗಳ ಕುರಿತು ಮಾಹಿತಿ ಬಂದರೆ ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿ ಗಳು ನಿಷೇಧಿಸಿ ಆದೇಶಿಸಬಹುದು. ಸಾಮಾಜಿಕ ಬಹಿಷ್ಕಾರ ತಡೆ ಅಧಿಕಾರಿ ಗಳಾಗಿ ಗ್ರೂಪ್ 'ಎ' ಅಧಿಕಾರಿಗಳನ್ನು ಸರ್ಕಾರ ನಿಯೋಜಿಸಲಿದೆ.

## ❖ ಖಗೋಳ ವಿಜ್ಞಾನಿ ಶ್ರೀನಿವಾಸ ಕುಲಕರ್ಣಿಗೆ ರಾಯಲ್ ಸೊಸೈಟಿಯ ಚಿನ್ನದ ಪದಕ

**ಸಂದರ್ಭ: ಅಮೆರಿಕದಲ್ಲಿ ನೆಲಸಿರುವ ಭಾರತ ಮೂಲದ ಖಗೋಳ ವಿಜ್ಞಾನಿ ಪ್ರೊಫೆಸರ್ ಶ್ರೀನಿವಾಸ ಕುಲಕರ್ಣಿ ಅವರಿಗೆ ಇಂಗ್ಲೆಂಡ್ ರಾಯಲ್ ಅಸ್ಟ್ರನಾಮಿಕಲ್ ಸೊಸೈಟಿಯ ಶ್ರೀನಿವಾಸ (ಆರ್‌ಎಎಸ್) ಚಿನ್ನದ ಪದಕ ಕುಲಕರ್ಣಿ ಲಭಿಸಿದೆ.**

- ಖಗೋಳ ವಿಜ್ಞಾನಕ್ಕೆ ಸಂಬಂಧಿಸಿದಂತೆ ಹಲವು ಮಹತ್ವದ ಸಂಶೋಧನೆಗಳನ್ನು ಕೈಗೊಂಡಿರುವ ಶ್ರೀನಿವಾಸ್ ಕುಲಕರ್ಣಿ ಅವರು, ರಾಜ್ಯಸಭಾ ಸದಸ್ಯೆ ಸುಧಾ ಮೂರ್ತಿ ಅವರ ಸಹೋದರ.
- ಮಹಾರಾಷ್ಟ್ರದಲ್ಲಿ ಜನಿಸಿರುವ ಕುಲಕರ್ಣಿ ಅವರು, ಕ್ಯಾಲಿಫೋರ್ನಿಯಾ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ ಪ್ರಾಧ್ಯಾಪಕರಾಗಿದ್ದಾರೆ. ಖಗೋಳ ವಸ್ತುಗಳು ಮತ್ತು ಗಾಮಾ ಕಿರಣಗಳ ಸ್ವಯಂಸ್ಫೋಟ ಸೇರಿದಂತೆ ಖಗೋಳ ಕ್ಷೇತ್ರಕ್ಕೆ ಸಂಬಂಧಿಸಿದ ಹಲವು ವಿಷಯಗಳ ಬಗ್ಗೆ ಸಂಶೋಧನೆ ಕೈಗೊಂಡು ಯಶಸ್ವಿಯಾಗಿದ್ದಾರೆ.
- ಬಹುತರಂಗಾಂತರದ 'ಖಗೋಳ ಭೌತಶಾಸ್ತ್ರದಲ್ಲಿ ಕ್ಷಣಿಕ ಕುರಿತಾದ ಸುಸ್ಥಿರ, ನವೀನ ಮತ್ತು ಅಭೂತಪೂರ್ವ ಅನ್ವೇಷಣೆ'ಯ ಕೊಡುಗೆಯನ್ನು ಚಿನ್ನದ ಪದಕ ಆಯ್ಕೆಗೆ ಪರಿಗಣಿಸಲಾಗಿದೆ.
- 1984ರಿಂದಲೂ ರಾಯಲ್ ಸಂಸ್ಥೆಯು ಚಿನ್ನದ ಪದಕವನ್ನು ನೀಡುತ್ತಿದೆ. ಖ್ಯಾತ ವಿಜ್ಞಾನಿಗಳಾದ ಸ್ಟೀಫನ್ ಹಾಕಿಂಗ್, ಜಾನ್ ಬೆಲ್ ಬರ್ನೆಲ್, ಅಲ್ಬರ್ಟ್ ಐನ್‌ಸ್ಟೀನ್ ಮತ್ತು ಎಡ್ವಿನ್ ಹಬಲ್ ಅವರು ಈ ಪದಕ ಪಡೆದಿದ್ದಾರೆ. ಇವರ ಸಾಲಿಗೆ ಸೇರಿದ್ದಾರೆ. ಕುಲಕರ್ಣಿ
- 'ಈ ಪದಕವನ್ನು ಪಡೆದ ಖ್ಯಾತನಾಮರ ಪಟ್ಟಿಗೆ ನನ್ನನ್ನು ಸೇರಿಸಿರುವುದು ನನಗೆ ಆಶ್ಚರ್ಯವಾಗಿದೆ. ಇದು ನನ್ನ ಜೀವನದಲ್ಲಿ ಅತ್ಯಂತ ಖುಷಿಕೊಡು ವಂಥದ್ದು' ಎಂದು ಕುಲಕರ್ಣಿ ಅವರು ಸಂತಸ ಹಂಚಿಕೊಂಡಿದ್ದಾರೆ.
- 2024ರಲ್ಲಿ ಖಗೋಳ ಕ್ಷೇತ್ರದ ಪ್ರಶಸ್ತಿ) ಅನ್ವೇಷಣೆಗಾಗಿ 'ಶಾ' ಪುರಸ್ಕಾರವನ್ನೂ (ಹಾಂಕಾಂಗ್ ನೀಡುವ ಕುಲಕರ್ಣಿ ಪಡೆದಿದ್ದಾರೆ. ಖಗೋಳ ವಿಜ್ಞಾನದ ಸಾಧನಗಳ ಅನ್ವೇಷಕರಾಗಿ ರುವ ಕುಲಕರ್ಣಿ ಅವರು, ಈವರೆಗೆ 10 ಸಾಧನಗಳನ್ನು ರೂಪಿಸಿದ್ದಾರೆ.
- ಸದ, ಕುಲಕರ್ಣಿ ಅವರು ನಾಸಾದ ನೇರಳಾತೀತ ಕಿರಣಗಳ ಅನ್ವೇಷಣೆಗೆ ಸಂಬಂಧಿಸಿದ (ಯುವಿಎಕ್ಸ್) ಸಂಶೋಧನೆಯ ಕಾರ್ಯಯೋಜನೆಯ ಭಾಗವಾಗಿದ್ದಾರೆ.ನೇರಳಾತೀತ ಕಿರಣಗಳ ಕುರಿತಾದ ಅತ್ಯಂತ ಸೂಕ್ಷ್ಮ ಸಂಶೋಧನೆ ಇದಾಗಿದೆ.

ಕುಲಕರ್ಣಿ ಅವರು 1978ರಲ್ಲಿ ದೆಹಲಿಯ ಭಾರತೀಯ ತಾಂತ್ರಿಕ ಸಂಸ್ಥೆಯಲ್ಲಿ (ಐಐಟಿ) ಸ್ನಾತಕೋತ್ತರ ಪದವಿ, 1983ರಲ್ಲಿ ಬಾರ್ಕ್‌ಲೆಯಲ್ಲಿ ಪಿಎಚ್.ಡಿ ಪದವಿ ಪಡೆದಿದ್ದಾರೆ.

## ❖ ಚಿಲ್ಲರೆ ಹಣದುಬ್ಬರ ಏರಿಕೆ

**ಸಂದರ್ಭ: ಆಹಾರ ಪದಾರ್ಥಗಳ ಬೆಲೆಯಲ್ಲಿನ ಹೆಚ್ಚಳದಿಂದ ಚಿಲ್ಲರೆ ಹಣದುಬ್ಬರವು ಡಿಸೆಂಬರ್ ತಿಂಗಳಿನಲ್ಲಿ ಶೇ 1.33ಕ್ಕೆ ಏರಿಕೆಯಾಗಿದೆ ಎಂದು ರಾಷ್ಟ್ರೀಯ ಸಾಂಖ್ಯಿಕ ಕಚೇರಿ (ಎನ್ಎಸ್ಒ) ಸೋಮವಾರ ತಿಳಿಸಿದೆ. ಇದು ಮೂರು ತಿಂಗಳ ಗರಿಷ್ಠ ಮಟ್ಟದ ಏರಿಕೆ ಆಗಿದೆ.**

- ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ) ಆಧಾರಿತ ಚಿಲ್ಲರೆ ಹಣದುಬ್ಬರವು ನವೆಂಬರ್‌ನಲ್ಲಿ ಶೇ 0.71ರಷ್ಟಿತ್ತು. 2024ರ ಡಿಸೆಂಬರ್‌ನಲ್ಲಿ ಶೇ 5.22ರಷ್ಟು ದಾಖಲಾಗಿತ್ತು.
- ತರಕಾರಿಗಳು, ಮೊಟ್ಟೆ, ಮಾಂಸ ಮತ್ತು ಮೀನು, ಮಸಾಲೆ ಪದಾರ್ಥಗಳು, ಧಾನ್ಯಗಳ ಬೆಲೆಯಲ್ಲಿನ ಹೆಚ್ಚಳವೇ ಹಣದುಬ್ಬರ ಏರಿಕೆಗೆ ಕಾರಣ ಎಂದು ತಿಳಿಸಿದೆ. ನಗರ ಪ್ರದೇಶದಲ್ಲಿ ಹಣದುಬ್ಬರ ಪ್ರಮಾಣ ಶೇ 2.03ರಷ್ಟಿದ್ದರೆ, ಗ್ರಾಮೀಣ ಪ್ರದೇಶದಲ್ಲಿ ಶೇ.0.76ರಷ್ಟಿದೆ.
- ಚಿಲ್ಲರೆ ಹಣದುಬ್ಬರ ಪ್ರಮಾಣವು ಶೇ 4ರ ಹಂತದಲ್ಲಿ ಇರಬೇಕು. ಅದು ಶೇ 2ಕ್ಕಿಂತ ಕಡಿಮೆ ಆಗಬಾರದು ಎಂಬುದು ಆರ್‌ಬಿಐಗೆ ಕೇಂದ್ರ ಸರ್ಕಾರ ನಿಗದಿ ಮಾಡಿರುವ ಗುರಿ. ಡಿಸೆಂಬರ್ ತಿಂಗಳಿನಲ್ಲೂ ಇದೇ ಮಟ್ಟದಲ್ಲಿ ಚಿಲ್ಲರೆ ಹಣದುಬ್ಬರ ಇದೆ.
- ಕೇರಳದಲ್ಲಿ ಚಿಲ್ಲರೆ ಹಣದುಬ್ಬರ ಹೆಚ್ಚಿನ ಪ್ರಮಾಣದಲ್ಲಿದ್ದು, ಶೇ9.19ರಷ್ಟಿದೆ. ಕರ್ನಾಟಕದಲ್ಲಿ ಶೇ 2.99, ಆಂಧ್ರಪ್ರದೇಶ ಶೇ 2.71, ತಮಿಳುನಾಡು ಶೇ 2.67 ಮತ್ತು ಜಮ್ಮು ಕಾಶ್ಮೀರದಲ್ಲಿ ಶೇ 2.26ರಷ್ಟು ದಾಖಲಾಗಿದೆ ಎಂದು ತಿಳಿಸಿದೆ.

## ❖ ಶಕ್ಸ್‌ಗಾಮ್ ಕಣಿವೆ ಚೀನಾದ ಭಾಗ'

**ಸಂದರ್ಭ: ಶಕ್‌ಗಾಮ್ ಕಣಿವೆಯು ತನ್ನ ಭೂಭಾಗವಾಗಿದೆ ಎಂದು ಚೀನಾ ಪುನರುಚ್ಚರಿಸಿದ್ದು, ಅಲ್ಲಿ ಕೈಗೊಂಡಿರುವ ಮೂಲಸೌಕರ್ಯ ಯೋಜನೆಗಳು ಆಕ್ಷೇಪಕ್ಕೆ ಹೊರತಾಗಿವೆ ಎಂದು ಪ್ರತಿಪಾದಿಸಿದೆ.**

- ಶಕ್ಸ್‌ಗಾಮ್ ಕಣಿವೆಯಲ್ಲಿ ಚೀನಾ ಕೈಗೊಂಡಿರುವ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳ ಕುರಿತು ಭಾರತ ಕಳೆದ ಶುಕ್ರವಾರ ಆಕ್ಷೇಪ ವ್ಯಕ್ತಪಡಿಸಿತ್ತು.
- ಇದು ಭಾರತದ ಪ್ರದೇಶವಾಗಿರುವುದರಿಂದ ತನ್ನ ಹಿತಾಸಕ್ತಿ ಕಾಪಾಡಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವ ಹಕ್ಕುಗಳನ್ನು ಕಾಯ್ದಿರಿಸಿಕೊಂಡಿದೆ ಎಂದು ಹೇಳಿತ್ತು, 'ಶಕ್ಸ್ ಗಾಮ್ ಕಣಿವೆ ಭಾರತದ ಭೂಪ್ರದೇಶ, 1963ರಲ್ಲಿ ಸಹಿ ಹಾಕಿದ ಚೀನಾ-ಪಾಕಿಸ್ತಾನ ಗಡಿ ಒಪ್ಪಂದವೆಂದು ಕರೆಯಲಾಗುವ ಒಪ್ಪಂದವನ್ನು ನಾವು ಎಂದಿಗೂ ಒಪ್ಪಿಲ್ಲ ಮತ್ತು ಮಾನ್ಯತೆ ನೀಡಿಲ್ಲ. ಈ ಒಪ್ಪಂದವು ಕಾನೂನುಬಾಹಿರ' ಎಂದು ವಿದೇಶಾಂಗ ಸಚಿವಾಲಯದ ವಕ್ತಾರರಣಧೀರ್ ಜೈಸ್ವಾಲ್ ತಿಳಿಸಿದ್ದರು.
- ಜೈಸ್ವಾಲ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಚೀನಾ ವಿದೇಶಾಂಗ ಸಚಿವಾಲಯದ ವಕ್ತಾರೆ ಮಾವೋ ನಿಂಗ್, 'ನೀವು ಹೇಳಿದ ಪ್ರದೇಶವು ಚೀನಾದ ಪ್ರದೇಶದ ಭಾಗವಾಗಿದೆ. ನಮ್ಮ ಭೂಪ್ರದೇಶದಲ್ಲಿ ಮೂಲಸೌಕರ್ಯ ಚಟುವಟಿಕೆಗಳನ್ನು ಕೈಗೊಂಡಿದೆ.ಚೀನಾ ಮತ್ತು ಪಾಕಿಸ್ತಾನ ಗಡಿ ಒಪ್ಪಂದಕ್ಕೆ ಸಹಿ ಹಾಕಿವೆ' ಎಂದಿದ್ದಾರೆ.

## ❖ ಗುಜರಾತ್‌ನಲ್ಲಿ ಭೇಟಿಯಾದ ಮೋದಿ-ಫ್ರೆಡರಿಕ್ ಮೆರ್ಜ್ : 19 ಒಪ್ಪಂದಗಳಿಗೆ ಉಭಯ ದೇಶಗಳು ಸಹಿ: 'ಭಾರತ-ಜರ್ಮನಿ ನಡುವಿನ ಸಂಬಂಧಕ್ಕೆ ನವ ಶಕ್ತಿ'

- ಗುಜರಾತ್‌ನ ಗಾಂಧಿನಗರದಲ್ಲಿರುವ ಮಹಾತ್ಮ ಮಂದಿರದಲ್ಲಿ ಭಾರತ ಮತ್ತು ಜರ್ಮನಿ ನಡುವೆ ಮಹತ್ವದ ದ್ವಿಪಕ್ಷೀಯ ಮಾತುಕತೆಗಳು ನಡೆದವು.
- ಮಾತುಕತೆ ಮುಗಿದ ಬಳಿಕ ಪತ್ರಕರ್ತರಿಗೆ ಮಾಹಿತಿ ನೀಡಿದ ಪ್ರಧಾನಿ ನರೇಂದ್ರ ಮೋದಿ ಅವರು, 'ಎರಡೂ ರಾಷ್ಟ್ರಗಳು ಇತ್ತೀಚೆಗಷ್ಟೇ ಪಾಲುದಾರಿಕೆಯ 25ನೇ ವರ್ಷ ಹಾಗೂ 75 ವರ್ಷಗಳ ರಾಜತಾಂತ್ರಿಕ ಸಂಬಂಧವನ್ನು ಪೂರೈಸಿವೆ. ಇಂತಹ ಮಹತ್ವದ ಘಟ್ಟದಲ್ಲಿ ಜರ್ಮನಿಯ ಚಾನ್ಸಲರ್ ಫ್ರೆಡರಿಕ್ ಮೆರ್ಜ್ ಅವರು ಭೇಟಿ ನೀಡಿದ್ದಾರೆ' ಎಂದು ಹೇಳಿದ್ದಾರೆ.

- 'ಫ್ರೆಡರಿಕ್ ಮೆರ್ಜ್ ಅವರ ಭೇಟಿಯು ಭಾರತ ಮತ್ತು ಜರ್ಮನಿ ನಡುವಿನ ಬೆಳೆಯುತ್ತಿರುವ ಆರ್ಥಿಕತೆ ಮತ್ತು ಕಾರ್ಯತಂತ್ರದ ಸಂಬಂಧಕ್ಕೆ ನವ ಶಕ್ತಿ ನೀಡಲಿದೆ' ಎಂದು ಮೋದಿ ಬಣ್ಣಿಸಿದ್ದಾರೆ.
- 'ನಮ್ಮ ದ್ವಿಪಕ್ಷೀಯ ವ್ಯಾಪಾರ 50 ಶತಕೋಟಿ ಜರ್ಮನಿಯ ಡಾಲರ್‌ಗಳನ್ನು ದಾಟಿ ಸಾರ್ವಕಾಲಿಕ ಎತ್ತರಕ್ಕೇರಿದೆ. 2,000 ಅಧಿಕ ಕಂಪನಿಗಳು ಭಾರತದಲ್ಲಿ ಕಾರ್ಯಾಚರಿಸುತ್ತಿವೆ. ನಮ್ಮ ದೇಶದ ಮೇಲೆ ಅವರಿಗಿರುವ ವಿಶ್ವಾಸವನ್ನು ಇದು ತೋರಿಸುತ್ತದೆ' ಎಂದಿದ್ದಾರೆ.
- ಆರ್ಥಿಕತೆ, ರಕ್ಷಣಾ ಕ್ಷೇತ್ರ. ಔಷಧ ವಲಯ, ಕಾರ್ಯತಂತ್ರಗಳ ಪಾಲುದಾರಿಕೆ, ಶಿಕ್ಷಣ, ಕಾನೂನುಬದ್ಧ ವಲಸೆ ಸೇರಿದಂತೆ 19 ಒಪ್ಪಂದಗಳಿಗೆ ಭಾರತ ಮತ್ತು ಜರ್ಮನಿ ಸಹಿ ಹಾಕಿವೆ.
- ಭಾರತೀಯ ಪಾಸ್‌ಪೋರ್ಟ್ ಹೊಂದಿರುವವರಿಗೆ ವೀಸಾ ಮುಕ್ತ ಸಾರಿಗೆ, ಇಂಡೊ-ಪೆಸಿಫಿಕ್ ಕುರಿತ ಮಾತುಕತೆಗೆ ವೇದಿಕೆ ರೂಪಿಸುವುದು, ನವೀಕರಿಸಬಹುದಾದ ಇಂಧನ ಕ್ಷೇತ್ರದ ಹೂಡಿಕೆ (1.24 ಶತಕೋಟಿ ಯುರೊ ಮೊತ್ತದ ಪಾಲುದಾರಿಕೆಯ
- ಕಾರ್ಯಕ್ರಮ), ಗ್ರೀನ್ ಹೈಡ್ರೋಜನ್ ಪಾಲುದಾರಿಕೆ, ಪಿಎಂ ಇ ಬಸ್ ಸೇವೆ. ಅಹಮದಾಬಾದ್‌ನಲ್ಲಿ ಜರ್ಮನಿಯ ಕಾನ್ಸುಲ್ ಸ್ಥಾಪನೆ ವಿಚಾರ ಗಳನ್ನೂ ಈ ವೇಳಘೋಷಿಸಲಾಯಿತು.

## ❖ ಒಲಿಂಪಿಕ್ ಅಕಾಡೆಮಿಗೆ ಮರುಜೀವ: ಅಹಮದಾಬಾದಿನಲ್ಲಿರುವ ರಾಷ್ಟ್ರೀಯ ಒಲಿಂಪಿಕ್

**ಸಂದರ್ಭ: ಅಕಾಡೆಮಿಯನ್ನು (ಎನ್‌ಒಎ) 'ವಿಧ್ಯುಕ್ತವಾಗಿ ಕ್ರಿಯಾಶೀಲಗೊಳಿಸಲಾಗಿದೆ ಎಂದು ಭಾರತ ಒಲಿಂಪಿಕ್ ಸಮಿತಿ (ಐಒಎ) ಸೋಮವಾರ ಘೋಷಿಸಿದೆ. ಭಾರತದಲ್ಲಿ ಒಲಿಂಪಿಕ್ ಆಂದೋಲನವನ್ನು ಬಲಪಡಿಸುವ ನಿಟ್ಟಿನಲ್ಲಿ ಇದನ್ನು ದೊಡ್ಡಹೆಜ್ಜೆ ಎಂದು ಐಒಎ ಬಣ್ಣಿಸಿದೆ.**

- ಈ ಅಕಾಡೆಮಿಗೆ ದಿಗ್ಗಜ ಅಸ್ಲೀಟ್ ಹಾಗೂ ಐಒಎ ಹಾಲಿ ಅಧ್ಯಕ್ಷೆ ಪಿ.ಟಿ.ಉಷಾ ಅವರೇ ಮುಖ್ಯಸ್ಥರಾಗಿರುತ್ತಾರೆ. ರಾಷ್ಟ್ರೀಯ ಒಲಿಂಪಿಕ್ ಶಿಕ್ಷಣ ಮತ್ತು ಅಭಿವೃದ್ಧಿ ಕಾರ್ಯಕ್ರಮವನ್ನೂ (ಎನ್ ಒಇಡಿಪಿ) ಆರಂಭಿಸಲಾಗುತ್ತಿದೆ ಎಂದೂ ಐಒಎ ತಿಳಿಸಿದೆ.
- 'ರಾಷ್ಟ್ರೀಯ ಒಲಿಂಪಿಕ್ ಅಕಾಡೆಮಿಗೆ ಪಿ.ಟಿ.ಉಷಾ ಅವರನ್ನು ಅಧ್ಯಕ್ಷರನ್ನಾಗಿ ಮತ್ತು ಐಒಎ ಉಪಾಧ್ಯಕ್ಷ ಹಾಗೂ ಒಲಿಂಪಿಕ್ ಪದಕ ವಿಜೇತ ಗಗನ್ ನಾರಂಗ್ ಅವರನ್ನು ನಿರ್ದೇಶಕನ್ನರಾಗಿ ಮಾಡಲು ಐಒಎ ಸಭೆಯಲ್ಲಿ ಸರ್ವಾನುಮತದಿಂದ ಒಪ್ಪಿಗೆ ನೀಡಲಾಯಿತು' ಎಂದು ಪ್ರಕಟಣೆ ತಿಳಿಸಿದೆ.
- ಅಹಮದಾಬಾದಿನಲ್ಲಿ ಜನವರಿ 8ರಂದು ನಡೆದ ಐಒಎ ಕಾರ್ಯನಿರ್ವಾಹಕ ಮಂಡಳಿಯಲ್ಲಿ ಈ ನಿರ್ಧಾರ ಕೈಗೊಳ್ಳಲಾಯಿತು. ಜನವರಿ 9ರಂದು ಐಒಎ ವಾರ್ಷಿಕ ಮಹಾಸಭೆಯಲ್ಲಿ ಇದನ್ನು ಅನುಮೋದಿಸಲಾಯಿತು.

Dr. Rajkumar IAS Academy

## ❖ ರಸ್ತೆಯಲ್ಲಿ 200 ಅಡಿಗೆ ಎರಡು ಜಾಹೀರಾತು

**ಸಂದರ್ಭ: ಬೆಂಗಳೂರು ರಸ್ತೆಗಳಲ್ಲಿ ಪ್ರತಿ 200 ಅಡಿಗೆ ಎರಡು ಜಾಹೀರಾತಿಗೆ ಅವಕಾಶ ನೀಡುವ 'ಗ್ರೇಟರ್ ಬೆಂಗಳೂರು ಪ್ರದೇಶ ಜಾಹೀರಾತು ನಿಯಮಗಳು-2025' ಅನ್ನು ಅಂತಿಮಗೊಳಿಸಿ ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ.**

# ‘ಗ್ರೇಟರ್ ಬೆಂಗಳೂರು ಪ್ರದೇಶ ಜಾಹೀರಾತು ನಿಯಮಗಳು– 2025’ ಅಂತಿಮ ಅಧಿಸೂಚನೆ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ರಸ್ತೆಗಳಲ್ಲಿ ಪ್ರತಿ 200 ಅಡಿಗೆ ಎರಡು ಜಾಹೀರಾತು ಪ್ರದರ್ಶಿಸಲು ಅವಕಾಶ ಮಾಡಿಕೊಡುವ ‘ಗ್ರೇಟರ್ ಬೆಂಗಳೂರು ಪ್ರದೇಶ ಜಾಹೀರಾತು ನಿಯಮಗಳು– 2025’ ಅನ್ನು ಅಂತಿಮಗೊಳಿಸಿ ನಗರಾಭಿವೃದ್ಧಿ ಇಲಾಖೆ ಅಧಿಸೂಚನೆ ಹೊರಡಿಸಿದೆ.

2025ರ ನವೆಂಬರ್ 13ರಂದು ಕರಡು ಅಧಿಸೂಚನೆ ಹೊರಡಿಸಲಾಗಿತ್ತು. 30 ದಿನದಲ್ಲಿ ಬಂದ ಸಾರ್ವಜನಿಕ ಸಲಹೆ, ಆಕ್ಷೇಪಗಳನ್ನು ಪರಿಗಣಿಸಿ, ಜ.13ರಂದು ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ ಎಂದು ತಿಳಿಸಲಾಗಿದೆ.

ಆಯಾ ಪ್ರದೇಶದ ಸ್ಥಿರಾಸ್ತಿ ಮಾರ್ಗಸೂಚಿ ದರದ ಆಧಾರದಲ್ಲಿ ಜಾಹೀರಾತು ಶುಲ್ಕವನ್ನು ನಿಗದಿಪಡಿಸಿ, ರಸ್ತೆಯ ಅಗಲಕ್ಕೆ ಅನುಗುಣವಾಗಿ ಪ್ರತಿ 100 ಮೀಟರ್‌ಗೆ ಜಾಹೀರಾತು ಪ್ರದರ್ಶಿಸಬಹುದು ಎಂದು 2025ರ ಜುಲೈ 15ರಂದು ‘ಬಿಬಿಎಂಪಿ (ಜಾಹೀರಾತು) ಬೈ-ಲಾ 2024’ ಅನ್ನು ಅಧಿಸೂಚಿಸಲಾಗಿತ್ತು. ಜಿಬಿಎ, ಐದು ನಗರ ಪಾಲಿಕೆಗಳು ರಚನೆಯಾದ ಮೇಲೆ, ಬಹುತೇಕ ಅದೇ ನಿಯಮಗಳು ನಗರ ಪಾಲಿಕೆಗಳಿಗೆ ಅನ್ವಯವಾಗುವಂತೆ ಬದಲಾವಣೆ ಮಾಡಿ ‘ಗ್ರೇಟರ್ ಬೆಂಗಳೂರು ಪ್ರದೇಶ ಜಾಹೀರಾತು ನಿಯಮಗಳನ್ನು ಜಾರಿ ಮಾಡಲಾಗಿದೆ. ಕಳೆದ ಬಾರಿಗಿಂತ ಜಾಹೀರಾತು ಶುಲ್ಕ ಕಡಿಮೆ ಮಾಡುವ ಜೊತೆಗೆ, ರಸ್ತೆಯ ಅಕ್ಕಪಕ್ಕ 100 ಅಡಿಗೆ ಎರಡು ಜಾಹೀರಾತು ಪ್ರದರ್ಶಿಸಲು ನೀಡಲಾಗಿದ್ದ ಅವಕಾಶವನ್ನು 200 ಅಡಿಗೆ ಹೆಚ್ಚಿಸಲಾಗಿದೆ.

ರಸ್ತೆಗಳು, ವೃತ್ತಗಳು ಹಾಗೂ ಪ್ರದೇಶಗಳ ಮುಕ್ತ ಹರಾಜು ಅಥವಾ ಟೆಂಡರ್ ಅನ್ನು ಪ್ರತ್ಯೇಕ ಅಥವಾ ಲಾಟ್‌ಗಳಲ್ಲಿ ಒಟ್ಟುಗೂಡಿಸಿ ಏಜೆನ್ಸಿಗಳಿಗೆ ಪರವಾನಗಿ ನೀಡುವ ನಿರ್ಧಾರವನ್ನು ಜಿಬಿಎ ಮುಖ್ಯ ಆಯುಕ್ತರ ನೇತೃತ್ವದ ಜಾಹೀರಾತು ನಿಯಂತ್ರಣ ಸಮಿತಿಗೆ ನೀಡಲಾಗಿದೆ. ಅಲ್ಲದೆ ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ನೇತೃತ್ವದಲ್ಲಿ ಜಾಹೀರಾತು ಸಲಹಾ ಸಮಿತಿ ರಚಿಸಲಾಗಿದೆ. ಹೊಸ ಜಾಹೀರಾತು ನೀತಿಯಿಂದ ಒಟ್ಟಾರೆ ವಾರ್ಷಿಕ ₹800 ಕೋಟಿ ಸಂಗ್ರಹಿಸುವ ನಿರೀಕ್ಷೆ ಇದೆ.

**ಪಿಲ್ಲರ್ ಶುಲ್ಕ ಹಂಚಿಕೆ:** ಬಿಎಂಆರ್‌ಸಿಎಲ್, ಬಿಎಂಟಿಸಿ, ಕೆಎಸ್‌ಆರ್‌ಟಿಸಿ ಬಸ್‌ಗಳು, ಸರ್ಕಾರಿ ಸ್ವಾಮ್ಯದ ಸಾರ್ವಜನಿಕ ವಲಯದ ಕಟ್ಟಡ, ಆವರಣದಲ್ಲಿ ಪ್ರದರ್ಶಿಸುವ ಜಾಹೀರಾತುಗಳಿಗೆ ಆಯಾ ಸಂಸ್ಥೆಗಳು ಅವರ ನಿಯಮಗಳಂತೆ ಕ್ರಮ ಕೈಗೊಳ್ಳಬಹುದು. ಆದರೆ, ಸಾರ್ವಜನಿಕ ಸ್ಥಳ, ರಸ್ತೆಯಲ್ಲಿ ಜಾಹೀರಾತು ಪ್ರದರ್ಶಿಸಿದರೆ ಅದರ ಸಂಪೂರ್ಣ ಶುಲ್ಕವನ್ನು ನಗರ ಪಾಲಿಕೆಗೆ ಪಾವತಿಸಬೇಕು. ಇನ್ನು, ನಮ್ಮ ಮೆಟ್ರೊ ಪಿಲ್ಲರ್, ನಿಲ್ದಾಣ, ಮೂಲಸೌಕರ್ಯಗಳಲ್ಲಿ ಬಿಎಂಆರ್‌ಸಿಎಲ್, ‘ಗ್ರೇಟರ್ ಬೆಂಗಳೂರು ಪ್ರದೇಶ ಜಾಹೀರಾತು ನಿಯಮ–2025’ರಂತೆಯೇ ಟೆಂಡರ್ ಕರೆದು ಅವಕಾಶ ನೀಡಬಹುದು. ಮೆಟ್ರೊ ಪಿಲ್ಲರ್‌ಗಳ ಜಾಹೀರಾತಿನಿಂದ ಬರುವ ಶುಲ್ಕ ಬಿಎಂಆರ್‌ಸಿಎಲ್ ಹಾಗೂ ಆಯಾ ನಗರ ಪಾಲಿಕೆಗಳ ಜಂಟಿ ಖಾತೆಯಲ್ಲಿ ಜಮೆಯಾಗಬೇಕು. ಇದನ್ನು ಎರಡೂ ಸಂಸ್ಥೆಗಳು ಸಮನಾಗಿ ಉಪಯೋಗಿಸಿಕೊಳ್ಳಬೇಕು.

‘ಸಂಚಾರಿ ಜಾಹೀರಾತು’ಗಳನ್ನು ಪ್ರದರ್ಶಿಸಲು ಆಯಾ ನಗರ ಪಾಲಿಕೆಗಳಿಂದ ಆನ್‌ಲೈನ್‌ನಲ್ಲಿ ಪೂರ್ವಾನುಮತಿ ಪಡೆದುಕೊಳ್ಳಬೇಕು. ಪ್ರದರ್ಶನದ ಅವಧಿ, ಉದ್ದೇಶ, ವಾಹನ ಸಂಖ್ಯೆ, ವಾಹನಗಳ ಪಟ್ಟಿಯನ್ನು ನೀಡಿ, ಜಾಹೀರಾತು ಪ್ರದರ್ಶನಕ್ಕೆ ನಗರ ಪಾಲಿಕೆಯಿಂದ ನಿರಾಕ್ಷೇಪಣಾ ಪತ್ರ ಪಡೆದುಕೊಳ್ಳಬೇಕು. ಬಿಎಂಟಿಸಿ ಸೇರಿದಂತೆ ಎಲ್ಲ ವಾಹನಗಳಲ್ಲಿ ಪ್ರದರ್ಶಿಸು ವಾಹನಗಳಿಗೆ ಅನುಗುಣವಾದ ಶು ಪಾವತಿಸಬೇಕು.

Publication Date
14/01/2026

### ಮುಖ್ಯಾಂಶಗಳು

- ಮನೆಗಳಲ್ಲಿ ಮಿನುಗುವ ಫಲಕ ಅಳವಡಿಕೆ ನಿರ್ಬಂಧ
- ವಸತಿ ಪ್ರದೇಶಗಳಲ್ಲಿ ರಾತ್ರಿ 11ರ ನಂತರ ಪ್ರಕಾಶಮಾನ ಜಾಹೀರಾತು ಪ್ರದರ್ಶನ ಇಲ್ಲ

### ‘ಬಿ’ ಖಾತಾ ಆಸ್ತಿಯಲ್ಲಿ ಅವಕಾಶ ಇಲ್ಲ

ಐದೂ ನಗರ ಪಾಲಿಕೆ ವ್ಯಾಪ್ತಿಯಲ್ಲಿ ವಸತಿ ಪ್ರದೇಶ ಅಥವಾ ವಾಣಿಜ್ಯ ಪ್ರದೇಶದಲ್ಲಿರುವ ನಿವೇಶನಗಳು ‘ಬಿ’ ಖಾತಾ ಹೊಂದಿದ್ದರೆ ಅಥವಾ ಯಾವುದೇ ರೀತಿಯ ಖಾತಾ ಹೊಂದಿರದಿದ್ದರೆ ಜಾಹೀರಾತು ಪ್ರದರ್ಶನವನ್ನು ನಿರ್ಬಂಧಿಸಲಾಗಿದೆ. ಖಾತಾ ಇಲ್ಲದ ಹಾಗೂ ತೆರಿಗೆ ಪಾವತಿಸದ ಆಸ್ತಿಯಲ್ಲಿರುವ ಜಾಹೀರಾತನ್ನು ನಗರ ಪಾಲಿಕೆ ತೆರವುಗೊಳಿಸುತ್ತದೆ. ಅಲ್ಲದೆ, ಜಾಹೀರಾತು ಪ್ರದರ್ಶಿಸಿದ ಅವಧಿಗೆ ನಿಯಮದಲ್ಲಿ ತಿಳಿಸಲಾಗಿರುವ ಶುಲ್ಕದ ದುಪ್ಪಟ್ಟು ದಂಡವನ್ನೂ ವಿಧಿಸಲಾಗುತ್ತದೆ.

### ಜಾಹೀರಾತು ಎಲ್ಲೆಲ್ಲಿ ನಿಷೇಧ?

ದೇವಾಲಯ, ಮಸೀದಿ, ಗುರುದ್ವಾರ, ಚರ್ಚ್ ಮತ್ತು ಇತರ ಧಾರ್ಮಿಕ ಸ್ಥಳಗಳಿಂದ ನೂರು ಮೀಟರ್ ಒಳಗೆ, ಮೇಲ್ಸೇತುವೆ, ಎಲಿವೇಟೆಡ್ ಕಾರಿಡಾರ್, ಸಂವಹನ ಗೋಪುರ, ವಿಶ್ವ ಪಾರಂಪರಿಕ ತಾಣ, ರಾಷ್ಟ್ರೀಯ ಉದ್ಯಾನಗಳು, ಅರಣ್ಯ, ಜಲಮೂಲ, ಜಲಮಂಡಳಿಯ ನೀರು ಸಂಗ್ರಹಾಗಾರ, ಸ್ಮಾರಕಗಳಿರುವ 50 ಮೀಟರ್ ಒಳಗೆ ಜಾಹೀರಾತು ಪ್ರದರ್ಶನವನ್ನು ನಿಷೇಧಿಸಲಾಗಿದೆ.

ವಾಹನ ಚಾಲಕರ ಏಕಾಗ್ರತೆಗೆ ಭಂಗವನ್ನು ಉಂಟು ಮಾಡುವ ಜಾಹೀರಾತು, ಸಂಚಾರ ಸಿಗ್ನಲ್ ದೀಪಗಳ ಬಣ್ಣ, ನಗರದ ವಿರೂಪಕ್ಕೆ ಕಾರಣವಾಗಬಹುದಾದ ಭಿತ್ತಿಪತ್ರ, ಗೀಚುಬರಹ, ಮರದ ಮೇಲೆ ಅಂಟಿಸಲಾದ, ಮೊಳೆ ಹೊಡೆದ, ಕಟ್ಟಿದ, ಲಗತ್ತಿಸಿದ, ಜೋಡಿಸಿದ ಜಾಹೀರಾತನ್ನು ನಿಷೇಧಿಸಲಾಗಿದೆ. ಹೈಮಾಸ್ಟ್, ಬೀದಿ ದೀಪ, ವಿದ್ಯುತ್ ಕಂಬಗಳ ಮೇಲೆ ಜಾಹೀರಾತು ಪ್ರದರ್ಶನಕ್ಕೆ ಅವಕಾಶ ಇಲ್ಲ.

### ಜಾಹೀರಾತು ಎಲ್ಲಿ ಎಷ್ಟು?

| ರಸ್ತೆ/ ವೃತ್ತದ ವಿಸ್ತೀರ್ಣ | ರಸ್ತೆಯ ಪ್ರತಿ 200 ಮೀಟರ್‌ಗೆ ಎರಡೂ ಕಡೆ ಜಾಹೀರಾತು |
|---|---|
| 18 ಮೀ.ನಿಂದ 24 ಮೀ | 1,000 ಚದರಡಿ |
| 24 ಮೀ.ನಿಂದ 30 ಮೀ | 1,200 ಚದಡಿ |
| 30 ಮೀ.ನಿಂದ 60 ಮೀ | 1,500 ಚದಡಿ |
| 60 ಮೀಟರ್‌ಗಿಂತ ಹೆಚ್ಚು | 1,600 ಚದರಡಿ |
| 50 ಸಾವಿರ ಚದರಡಿಯ ವೃತ್ತ | 3,000 ಚದರಡಿ |
| ಇತರೆ ವಾಣಿಜ್ಯ/ ಕೈಗಾರಿಕೆ ಪ್ರದೇಶಗಳಲ್ಲಿ 18 ಮೀಟರ್‌ಗಿಂತ ಕಡಿಮೆ ರಸ್ತೆ | 600 ಚದರಡಿ |
| ಇತರೆ ವಾಣಿಜ್ಯ/ ಕೈಗಾರಿಕೆ ಪ್ರದೇಶಗಳಲ್ಲಿ 12 ಮೀಟರ್‌ಗಿಂತ ಕಡಿಮೆ ರಸ್ತೆ | 500 ಚದರಡಿ |

### ಜಾಹೀರಾತಿ ದರ ಎಲ್ಲೆಲ್ಲಿ ಎಷ್ಟು?

ಕರ್ನಾಟಕ ನೋಂದಣಿ ಕಾಯ್ದೆ 1957ರ ಸೆಕ್ಷನ್ 45 ಬಿ ಅಡಿಯಲ್ಲಿ ನೋಂದಣಿ ಮತ್ತು ಮುದ್ರಾಂಕ ಇಲಾಖೆ ನಿಗದಿಪಡಿಸಿರುವ ಮಾರ್ಗಸೂಚಿ ದರದಂತೆ ಆಯಾ ರಸ್ತೆ, ಪ್ರದೇಶ, ವೃತ್ತಗಳಿಗೆ ಜಾಹೀರಾತು ಪ್ರದರ್ಶನಕ್ಕೆ ಪ್ರತಿ ತಿಂಗಳಿಗೆ ಶುಲ್ಕ ನಿಗದಿ ಮಾಡಲಾಗಿದೆ.

| ಮಾರ್ಗಸೂಚಿ ದರ (ಪ್ರತಿ ಚದರಡಿ) | ಜಾಹೀರಾತು ಶುಲ್ಕ (ಪ್ರತಿ ಚದರಡಿಗೆ/ ಪ್ರತಿ ತಿಂಗಳಿಗೆ) |
|---|---|
| ₹4,000ಕ್ಕಿಂತ ಕಡಿಮೆ | ₹45 |
| ₹4,000ದಿಂದ ₹6,000 | ₹55 |
| ₹6,000ದಿಂದ ₹8,000 | ₹60 |
| ₹8,000ದಿಂದ ₹15,000 | ₹65 |
| ₹15,000ದಿಂದ ₹25,000 | ₹70 |
| ₹42,500ರಷ್ಟು/ ಅದಕ್ಕಿಂತ ಹೆಚ್ಚು | ₹75 |

### ಎಲ್ಲೆಲ್ಲಿ ಜಾಹೀರಾತಿಗೆ ಅವಕಾಶ ಇಲ್ಲ?

- ಕುಮಾರಕೃಪಾ ರಸ್ತೆ, ವಿಂಡ್ಸರ್ ಮ್ಯಾನರ್ ಜಂಕ್ಷನ್‌ನಿಂದ ಶಿವಾನಂದ ವೃತ್ತ
- ರಾಜಭವನ ರಸ್ತೆ, ಹೈಗ್ರೌಂಡ್ಸ್‌ನಿಂದ ಮಿನ್ಸ್ ಸ್ಕ್ವೇರ್
- ಸ್ಯಾಂಕಿ ರಸ್ತೆ, ಹೈಗ್ರೌಂಡ್ಸ್‌ನಿಂದ ವಿಂಡ್ಸರ್ ಹಿಲ್ಡ್ ಸಿಗ್ನಲ್
- ಅಂಬೇಡ್ಕರ್ ವೀಧಿ, ಕೆ.ಆರ್. ವೃತ್ತದಿಂದ ಇನ್‌ಫೆಂಟ್ರ ಜಂಕ್ಷನ್
- ಪೋಸ್ಟ್ ಆಫೀಸ್ ರಸ್ತೆ, ಕೆ.ಆರ್. ವೃತ್ತದಿಂದ ಎಸ್‌ಬಿಐ ವೃತ್ತ (ಕೆ.ಜಿ ರಸ್ತೆ)
- ಚಾಲುಕ್ಯ ವೃತ್ತ
- ಮಹಾರಾಣಿ ಕಾಲೇಜ್ ರಸ್ತೆ/ ಶೇಷಾದ್ರಿ ರಸ್ತೆ
- ಕೆ.ಆರ್. ವೃತ್ತ
- ಕಬ್ಬನ್ ಪಾರ್ಕ್ ಹಾಗೂ ಲಾಲ್‌ಬಾಗ್ ಆವರಣ
- ನೃಪತುಂಗ ರಸ್ತೆ, ಕೆ.ಆರ್. ವೃತ್ತದಿಂದ ಪೊಲೀಸ್ ಕಾರ್ನರ್ ಜಂಕ್ಷನ್
- ಪ್ಯಾಲೇಸ್ ರಸ್ತೆ, ಎಸ್‌ಬಿಐ ವೃತ್ತದಿಂದ ಚಾಲುಕ್ಯ ವೃತ್ತ

**₹7.5 ಲಕ್ಷ**
83 ಅಡಿ ಅಗಲವಿರುವ 3 ಕಿ.ಮೀ ಉದ್ದದ ರಸ್ತೆಯಿಂದ ಪ್ರತಿ ತಿಂಗಳಿಗೆ ನಿರೀಕ್ಷಿಸಲಾಗಿರುವ ಜಾಹೀರಾತಿನ ಕನಿಷ್ಠ ಶುಲ್ಕ

### ಜಾಹೀರಾತು ನಿಯಂತ್ರಣ ಸಮಿತಿ

ಜಿಬಿಎ ಮುಖ್ಯ ಆಯುಕ್ತ– ಅಧ್ಯಕ್ಷ; ಬೆಂಗಳೂರು ನಗರ ಪೊಲೀಸ್ ಕಮಿಷನರ್, ಬೆಸ್ಕಾಂ ವ್ಯವಸ್ಥಾಪಕ ನಿರ್ದೇಶಕ– ಸದಸ್ಯರು; ಜಿಬಿಎ ಮುಖ್ಯ ಆಯುಕ್ತರು ಸೂಚಿಸುವ ವಿಶೇಷ ಆಯುಕ್ತ– ಸದಸ್ಯ ಕಾರ್ಯದರ್ಶಿ

### ಜಾಹೀರಾತು ಸಲಹಾ ಸಮಿತಿ

ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ– ಅಧ್ಯಕ್ಷ; ಜಿಬಿಎ ಮುಖ್ಯ ಆಯುಕ್ತ, ಜಾಹೀರಾತು ಉದ್ಯಮದ ಸಂಘಟನೆಯ ಪ್ರತಿನಿಧಿ, ಯಾವುದಾದರೂ ಎರಡು ನಗರ ಪಾಲಿಕೆ ಆಯುಕ್ತರು (ಪ್ರತಿ ವರ್ಷ ಬದಲು)– ಸದಸ್ಯರು; ಜಿಬಿಎ ಮುಖ್ಯ ಆಯುಕ್ತರು ಸೂಚಿಸುವ ವಿಶೇಷ ಆಯುಕ್ತ– ಸದಸ್ಯ ಕಾರ್ಯದರ್ಶಿ

Presented by



# ಗಿಗ್ ಕಾರ್ಮಿಕರು: ತ್ವರಿತ ಸೇವೆ, ಬಸವಳಿದ ಬದುಕು

**10 ನಿಮಿಷಗಳಲ್ಲಿ ಗ್ರಾಹಕರಿಗೆ ಸರಕುಗಳನ್ನು ತಲುಪಿಸುವ ಪ್ರತಿಪಾದನೆಯನ್ನು ಕೈಬಿಡುವುದಾಗಿ ಬ್ಲಿಂಕಿಟ್ ಹೇಳಿದೆ. ಸ್ವಿಗ್ಗಿ ಮತ್ತು ಜೆಪ್ಟೊ ಕೂಡ ಇದನ್ನೇ ಅನುಸರಿಸುವ ಸಾಧ್ಯತೆ ಇದೆ. ಇದರಿಂದ ಗಿಗ್ ಕಾರ್ಮಿಕರ ಪ್ರಮುಖ ಬೇಡಿಕೆಯೊಂದು ಈಡೇರಿದಂತಾಗಿದೆ. ಕೇಂದ್ರ ಸರ್ಕಾರದ ಮಧ್ಯಪ್ರವೇಶದಿಂದ ಇದು ಸಾಧ್ಯವಾಗಿದೆ. ತಮ್ಮ ಕೆಲಸದ ಸ್ಥಿತಿ ಮತ್ತು ಬದುಕಿನ ಸ್ಥಿತಿ ಉತ್ತಮಗೊಳ್ಳುವ ದಿಸೆಯಲ್ಲಿ ರಾಷ್ಟ್ರಮಟ್ಟದ ಹೋರಾಟಕ್ಕಿಳಿದಿದ್ದ ಗಿಗ್ ಕಾರ್ಮಿಕರಿಗೆ ಸಿಕ್ಕ ಆರಂಭದ ಜಯ ಇದಾಗಿದೆ. ಆದರೆ, ಅವರ ಒಟ್ಟಾರೆ ಸ್ಥಿತಿ ಅಷ್ಟೇನೂ ಆಶಾದಾಯಕವಾಗಿಲ್ಲ**

ಪ್ರಜಾವಾಣಿ ವಾರ್ತೆ

**ಕ್ರಿಸ್‌ಮಸ್ ಹಬ್ಬದಂದು** ಮತ್ತು ಹೊಸ ವರ್ಷದ ಆಚರಣೆಯ ವೇಳೆ (2025 ಡಿ.31) ಇ-ಕಾಮರ್ಸ್ ವಲಯದಲ್ಲಿ ತೊಡಗಿಕೊಂಡಿರುವ ಕಾರ್ಮಿಕರು (ಗಿಗ್ ಕಾರ್ಮಿಕರು) ರಾಷ್ಟ್ರ ವ್ಯಾಪಿ ಹೋರಾಟಕ್ಕೆ ಮುಂದಾಗಿದ್ದರು. ಉತ್ತಮ ವೇತನ, ಸುರಕ್ಷಿತ ಕೆಲಸದ ವಾತಾವರಣ, ಸಾಮಾಜಿಕ ಭದ್ರತಾ ಸೌಲಭ್ಯ ನೀಡುವುದು, 10 ನಿಮಿಷಗಳಲ್ಲಿ ಗ್ರಾಹಕರಿಗೆ ಸರಕು ಪೂರೈಸುವುದನ್ನು ನಿಲ್ಲಿಸುವುದು ಸೇರಿದಂತೆ ತಮ್ಮ ವಿವಿಧ ಬೇಡಿಕೆಗಳನ್ನು ಈಡೇರಿಸಬೇಕು ಎಂದು ಮುಷ್ಕರಕ್ಕೆ ಇಳಿದಿದ್ದರು. ಕೆಲವು ನಗರಗಳಲ್ಲಿ ಮಾತ್ರ ಮುಷ್ಕರ ಯಶಸ್ವಿಯಾಗಿತ್ತು. ಹೊಸ ವರ್ಷದ ವ್ಯಾಪಾರಕ್ಕೆ ಧಕ್ಕೆಯಾಗದಿರಲಿ ಎಂದು ಕೆಲವು ಕ್ವಿಕ್-ಕಾಮರ್ಸ್ ಕಂಪನಿಗಳು ಕಾರ್ಮಿಕರ ವೇತನದಲ್ಲಿ ಅಲ್ಪ ಹೆಚ್ಚಳ ಮಾಡಿದ್ದವು.

ತ್ವರಿತವಾಗಿ ಅಂದರೆ 10ರಿಂದ 30 ನಿಮಿಷಗಳಲ್ಲಿ ಗ್ರಾಹಕರ ಮನೆ ಬಾಗಿಲಿಗೆ ಅಥವಾ ಅವರು ಇದ್ದಲ್ಲಿಗೇ ಸರಕುಗಳನ್ನು ಪೂರೈಸುವ ಉದ್ಯೋಗದಲ್ಲಿ ತೊಡಗಿರುವ ಕೋಟಿಗೂ ಹೆಚ್ಚು ಮಂದಿ ಗಿಗ್ ಕಾರ್ಮಿಕರು ದೇಶದಲ್ಲಿದ್ದಾರೆ. ಇ-ಕಾಮರ್ಸ್ ವಲಯದಲ್ಲಿ ಕ್ವಿಕ್ ಕಾಮರ್ಸ್ ಅತ್ಯಂತ ವೇಗವಾಗಿ ಬೆಳೆಯುತ್ತಿದ್ದು, ಬ್ಲಿಂಕಿಟ್, ಸ್ವಿಗ್ಗಿ, ಇನ್‌ಸ್ಟಾಮಾರ್ಟ್, ಜೆಪ್ಟೊ, ಬಿಗ್ ಬ್ಯಾಸ್ಕೆಟ್ ಸೇರಿದಂತೆ ಹಲವು ಕಂಪನಿಗಳು ಇಂಥ ಸೇವೆಯನ್ನು ಒದಗಿಸುತ್ತಿವೆ. ಮಳೆ, ಗಾಳಿ, ಬಿಸಿಲು ಮುಂತಾದ ವ್ಯತಿರಿಕ್ತ ಸನ್ನಿವೇಶಗಳಲ್ಲಿಯೂ ಗಿಗ್ ಕಾರ್ಮಿಕರು ಅತ್ಯಂತ ವೇಗವಾಗಿ ಸರಕುಗಳನ್ನು ಪೂರೈಸಲು ಸಾಹಸವನ್ನೇ ಮಾಡುತ್ತಿದ್ದಾರೆ. ನಗರಗಳಲ್ಲಿ ಸಂಚಾರ ದಟ್ಟಣೆ ಹೆಚ್ಚಾಗಿರುವ ಸಂದರ್ಭಗಳಲ್ಲಿ ಅವರು ಭಾರಿ ಒತ್ತಡ ಎದುರಿಸುತ್ತಾರೆ. ತ್ವರಿತ ಸೇವೆ ಒದಗಿಸುವುದಕ್ಕಾಗಿ ಸಂಚಾರಿ ನಿಯಮಗಳನ್ನು ಉಲ್ಲಂಘಿಸಿ ಬೇಕಾಬಿಟ್ಟಿ ದ್ವಿಚಕ್ರವಾಹನಗಳನ್ನು ಓಡಿಸುವುದು, ಅಪಘಾತಕ್ಕೀಡಾದ ಉದಾಹರಣೆಗಳು ಇವೆ. ಬೆಂಗಳೂರಿನಲ್ಲಿ ಸಂಚಾರ ನಿಯಮ ಉಲ್ಲಂಘಿಸುವವರಲ್ಲಿ ಡೆಲಿವರಿ ಬಾಯ್‌ಗಳ ಸಂಖ್ಯೆಯೇ ಅಧಿಕವಾಗಿದ್ದು, ಮೂರು ವರ್ಷದಲ್ಲಿ 1.46 ಲಕ್ಷ ಪ್ರಕರಣಗಳು ಅವರ ವಿರುದ್ಧ ದಾಖಲಾಗಿವೆ ಎಂದು ಕಳೆದ ವರ್ಷದ ನವೆಂಬರ್‌ನಲ್ಲಿ ಸಂಚಾರ ಪೊಲೀಸರು ಮಾಹಿತಿ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು.

ಅಷ್ಟೆಲ್ಲ ಶ್ರಮ ಪಟ್ಟರೂ ತಮಗೆ ಸಿಗುವ ವೇತನ ತೀರಾ ಕಡಿಮೆ. ದಿನಕ್ಕೆ 12ರಿಂದ 16 ಗಂಟೆ ದುಡಿದರೂ ದುಡಿಮೆ ಸಾವಿರದ ಆಸುಪಾಸಿನಲ್ಲಿಯೇ ಇರುತ್ತದೆ ಎನ್ನುವುದು ಅವರ ಅಳಲು. ಗಿಗ್ ಕಾರ್ಮಿಕರ ದುಡಿಮೆಯಲ್ಲಿ ಒಂದು ಪಾಲು ವಾಹನದ ಪೆಟ್ರೋಲ್‌ಗೆ ಮೀಸಲಿಡಬೇಕು. ಜತೆಗೆ, ಮಳೆ, ಗಾಳಿ ತಡೆಯಲು ರೈನ್ ಕೋಟ್ ಇತ್ಯಾದಿ ಕೊಂಡುಕೊಳ್ಳಬೇಕು. ಇಂಥ ಹಲವು ವೆಚ್ಚಗಳನ್ನು ಅವರು ಕೈಯಿಂದಲೇ ಭರಿಸಬೇಕು. ಹೀಗೆ ತಿಂಗಳು ಪೂರ್ತಿ ದುಡಿದ ಹಣ ಬೈಕ್ ರಿಪೇರಿ, ಫೋನ್ ರಿಪೇರಿ ಇತ್ಯಾದಿಗಳಿಗೆ ವೆಚ್ಚವಾದ ಉದಾಹರಣೆಗಳೂ ಹೇರಳವಾಗಿವೆ. ಒಂದು ಕಡೆ ಅಸುರಕ್ಷಿತ ಕೆಲಸದ ವಾತಾವರಣ. ಮತ್ತೊಂದು ಕಡೆ ಕಂಪನಿಗಳ ಕಡೆಯಿಂದಾಗಲಿ, ಸರ್ಕಾರದ ಕಡೆಯಿಂದಾಗಲಿ ತಮಗೆ ಯಾವ ಸೌಲಭ್ಯಗಳೂ ಸಿಗುತ್ತಿಲ್ಲ. ವೈದ್ಯಕೀಯ ವಿಮೆ, ಇಎಸ್‌ಐ, ಪಿಎಫ್ ಸೌಲಭ್ಯಗಳನ್ನು ಕಲ್ಪಿಸಬೇಕು ಎನ್ನುವುದು ಅವರ ಬೇಡಿಕೆ. ಕೇಂದ್ರ ಸರ್ಕಾರ ಹಾಗೂ ಕೆಲವು ರಾಜ್ಯ ಸರ್ಕಾರಗಳು ಗಿಗ್ ಕಾರ್ಮಿಕರನ್ನು ಈಗ ಸಾಮಾಜಿಕ ಭದ್ರತಾ ಯೋಜನೆಗಳ ವ್ಯಾಪ್ತಿಗೆ ಸೇರಿಸಿದ್ದರೂ, ಅವರಿಗೆ ಅದರ ಪ್ರಯೋಜನ ಸಿಕ್ಕಿಲ್ಲ.


**ಆಧಾರ:** ಪಿಟಿಐ, ಪಿಐಬಿ, ಸಂಸತ್ತಿನಲ್ಲಿ ಸಚಿವರ ಉತ್ತರ, ಏಷ್ಯನ್ ಲೇಬರ್ ರಿವೀವ್

### ಗಿಗ್ ಕಾರ್ಮಿಕರು

ಪ್ಲಾಟ್‌ಫಾರ್ಮ್ (ಆ್ಯಪ್) ಆಧಾರಿತ ಸೇವೆಗಳಾದ ಸ್ವಿಗ್ಗಿ, ಜೊಮಾಟೊ, ಜೆಪ್ಟೊ, ಓಲಾ, ಉಬರ್, ಇ-ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಪ್‌ಕಾರ್ಟ್, ಬಿಗ್ ಬ್ಯಾಸ್ಕೆಟ್ ಮತ್ತಿತರ ಕ್ಷೇತ್ರಗಳಲ್ಲಿ ಪೂರ್ಣಕಾಲಿಕ ಅಥವಾ ಅರೆಕಾಲಿಕ ಡೆಲಿವರಿ ನೌಕರರಾಗಿ ಕಾರ್ಯ ನಿರ್ವಹಿಸುತ್ತಿರುವವರು

Publication Date
14/01/2026

### ದೇಶದಲ್ಲಿ ಗಿಗ್ ಕಾರ್ಮಿಕರು





* ನೀತಿ ಆಯೋಗ ಮಾಡಿರುವ ಅಂದಾಜು

**₹38.42 ಲಕ್ಷ ಕೋಟಿ**
ದೇಶದ ಗಿಗ್ ಆರ್ಥಿಕತೆಯ ಅಂದಾಜು ಗಾತ್ರ

### ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಣಿಯಾದ ಕಾರ್ಮಿಕರು

(2025ರ ಡಿ.2ರವರೆಗೆ)




## ಕರ್ನಾಟಕ ಸೇರಿ 4 ರಾಜ್ಯಗಳಲ್ಲಿ ಕಾನೂನು

ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವುದಕ್ಕಾಗಿ ಕರ್ನಾಟಕ ಸೇರಿದಂತೆ ನಾಲ್ಕು ರಾಜ್ಯಗಳು ಕಾನೂನನ್ನು ರೂಪಿಸಿವೆ.

ರಾಜ್ಯದಲ್ಲಿ 'ಕರ್ನಾಟಕ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ಮಸೂದೆ–2025'ಗೆ ಕಳೆದ ವರ್ಷದ ಆಗಸ್ಟ್‌ನಲ್ಲಿ ವಿಧಾನಮಂಡಲ ಅಂಗೀಕಾರ ನೀಡಿತ್ತು. ಇದು ಕಾನೂನು ಕೂಡ ಆಗಿದೆ.

ಇದರಡಿ ಗಿಗ್ ಕಾರ್ಮಿಕರು ಕೂಡ ಭವಿಷ್ಯ ನಿಧಿ, ಅಪಘಾತ ವಿಮೆ ಸೌಲಭ್ಯ, ವಸತಿ, ಮಕ್ಕಳಿಗೆ ಶೈಕ್ಷಣಿಕ ಸೌಲಭ್ಯ, ಕಾರ್ಮಿಕ ಕೌಶಲಾಭಿವೃದ್ಧಿ, ಅಂತ್ಯಸಂಸ್ಕಾರ ಧನ ಸಹಾಯ ಸೌಲಭ್ಯಕ್ಕೆ ಅರ್ಹರಾಗಲಿದ್ದಾರೆ. ಇದಕ್ಕಾಗಿ ಪ್ರತಿ ವಹಿವಾಟಿನ ಮೇಲೆ ಶೇ 1ರಿಂದ ಶೇ 2 ಮೀರದಂತೆ ಕ್ಷೇಮಾಭಿವೃದ್ಧಿ ಶುಲ್ಕವನ್ನು ಸರ್ಕಾರ ಸಂಗ್ರಹಿಸಲಿದೆ.

ನಿಧಿ ಸಂಗ್ರಹಣೆ, ನಿರ್ವಹಣೆ ಹಾಗೂ ಫಲಾನುಭವಿಗಳಿಗೆ ಮತ್ತು ಅವರ ಅವಲಂಬಿತರಿಗೆ ಸಾಮಾಜಿಕ ಭದ್ರತಾ ಸೌಲಭ್ಯಗಳ 'ಕರ್ನಾಟಕ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕ ಕಲ್ಯಾಣ ಮಂಡಳಿ' ಸ್ಥಾಪಿಸಲಾಗುವುದು ಎಂದೂ ಸರ್ಕಾರ ಹೇಳಿತ್ತು. ಆದರೆ ಮಂಡಳಿ ಸ್ಥಾಪನೆ ಇನ್ನೂ ಆಗಿಲ್ಲ.



**ರಾಜಸ್ಥಾನ:** ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಕಾನೂನು ರೂಪಿಸಿದ ಮೊದಲ ರಾಜ್ಯ ರಾಜಸ್ಥಾನ. 2023ರಲ್ಲೇ ಕಾನೂನು ಜಾರಿಗೆ ಬಂದಿದ್ದರೂ ಅನುಷ್ಠಾನವಾಗಿಲ್ಲ. ಹೊಸ ಸರ್ಕಾರ ಬಂದ ನಂತರ ಈ ಕಾನೂನು ನನೆಗುದಿಗೆ ಬಿದ್ದಿದೆ

**ಬಿಹಾರ:** ಕಳೆದ ವರ್ಷ ಬಿಹಾರದಲ್ಲೂ ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ನೋಂದಣಿ, ಸಾಮಾಜಿಕ ಭದ್ರತೆ ಮತ್ತು ಕಲ್ಯಾಣ) ಮಸೂದೆಗೆ ಶಾಸನ ಸಭೆ ಅಂಗೀಕಾರ ನೀಡಿದೆ. ಇದರ ಅಡಿಯಲ್ಲಿ ಪಿಂಚಣಿ, ವಿಮೆ, ಅಪಘಾತ ವಿಮೆ ಸೇರಿದಂತೆ ವಿವಿಧ ಸೌಲಭ್ಯಗಳು ಗಿಗ್ ಕಾರ್ಮಿಕರಿಗೆ ಲಭ್ಯವಿವೆ. ಆದರೆ, ಅನುಷ್ಠಾನ ನಿಧಾನವಾಗಿದೆ.

**ಜಾರ್ಖಂಡ್:** ಕಳೆದ ವರ್ಷದ ಆಗಸ್ಟ್‌ನಲ್ಲಿ ಜಾರ್ಖಂಡ್ ವಿಧಾನಸಭೆಯು ಪ್ಲಾಟ್‌ಫಾರ್ಮ್ ಆಧಾರಿತ ಗಿಗ್ ಕಾರ್ಮಿಕರ (ನೋಂದಣಿ ಮತ್ತು ಕಲ್ಯಾಣ) ಮಸೂದೆಯನ್ನು ಅಂಗೀಕರಿಸಿತ್ತು. ಡಿಸೆಂಬ್ 19ರಂದು ರಾಜ್ಯಪಾಲರೂ ಮಸೂದೆಗೆ ಸಹಿ ಹಾಕಿದ್ದರು. ಕಾಯ್ದೆಯು ಕಡ್ಡಾಯ ನೋಂದಣಿ, ಕನಿಷ್ಠ ವೇತನ ಹಾಗೂ ಇತರ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಗಿಗ್ ಕಾರ್ಮಿಕರಿಗೆ ನೀಡುತ್ತದೆ.

## ಸೌಲಭ್ಯಕ್ಕೆ 90 ದಿನ ಕೆಲಸ ಕಡ್ಡಾಯ

ಕಳೆದ ವರ್ಷದ ಬಜೆಟ್‌ನಲ್ಲಿ ದೇಶದಲ್ಲಿರುವ ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತಾ ಯೋಜನೆಯನ್ನು ಕೇಂದ್ರ ಸರ್ಕಾರ ಘೋಷಿಸಲಾಗಿತ್ತು. 'ಇ-ಶ್ರಮ್ ಪೋರ್ಟಲ್‌ನಲ್ಲಿ ಅವರ ನೋಂದಣಿಗೆ ಅವಕಾಶ ನೀಡುವುದರ ಜೊತೆಗೆ, ಎಲ್ಲ ಕಾರ್ಮಿಕರಿಗೂ ಗುರುತಿನ ಚೀಟಿ ಹಾಗೂ ಪ್ರಧಾನಮಂತ್ರಿ ಆರೋಗ್ಯ ಯೋಜನೆಯ ಅಡಿಯಲ್ಲಿ ಆರೋಗ್ಯ ಸೇವೆಯನ್ನು ನೀಡಲಾಗುವುದು' ಎಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದರು.

**ಕಾರ್ಮಿಕ ಸಂಹಿತೆ ವ್ಯಾಪ್ತಿಗೆ:** ಅಸಂಘಟಿತ ವಲಯದಲ್ಲಿ ಬರುವ ಗಿಗ್ ಕಾರ್ಮಿಕರನ್ನು ಕೇಂದ್ರ ಸರ್ಕಾರವು ಕಳೆದ ವರ್ಷದ ನವೆಂಬರ್‌ನಲ್ಲಿ ಜಾರಿಗೆ ತಂದಿರುವ ನಾಲ್ಕು ಕಾರ್ಮಿಕ ಸಂಹಿತೆಗಳಲ್ಲಿ ಒಂದಾದ ಸಾಮಾಜಿಕ ಭದ್ರತೆ ಕುರಿತ ಸಂಹಿತೆ –2020 ವ್ಯಾಪ್ತಿಗೆ ಸೇರಿಸಲಾಗಿದೆ.

ಗಿಗ್ ಕಾರ್ಮಿಕರು ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಪಡೆಯಬೇಕಾದರೆ ಅವರು ಆರ್ಥಿಕ ವರ್ಷವೊಂದರಲ್ಲಿ ನಿರ್ದಿಷ್ಟ ಕಂಪನಿಯಲ್ಲಿ ಕನಿಷ್ಠ 90 ದಿನ ಕೆಲಸ ಮಾಡಬೇಕು ಎಂದು ಕೇಂದ್ರದ ಹೊಸ ಕರಡು ನಿಯಮ ಹೇಳುತ್ತದೆ.

ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯದ ಇ-ಶ್ರಮ್ ಪೋರ್ಟಲ್‌ನಲ್ಲಿ ನೋಂದಣಿಗೆ ಗಿಗ್ ಕಾರ್ಮಿಕರಿಗೆ ಅವಕಾಶ ನೀಡಿದ್ದರೂ ರಾಷ್ಟ್ರ ಮಟ್ಟದಲ್ಲಿ 2025ರ ಡಿ.2ರವರೆಗೆ 5.14 ಲಕ್ಷ ಮತ್ತು ಕರ್ನಾಟಕದಲ್ಲಿ 17,124 ಮಂದಿ ಮಾತ್ರ ನೋಂದಣಿ ಮಾಡಿಕೊಂಡಿದ್ದಾರೆ

## ಗೋಯಲ್ ಹೇಳಿದ್ದೇನು?

ತ್ವರಿತ ಸೇವೆ ಆಧಾರಿತ ಗಿಗ್ ಮಾದರಿಯು ಕಾರ್ಮಿಕರಿಗೆ ಹೆಚ್ಚು ಒತ್ತಡ ಹೇರುವುದಿಲ್ಲ ಎನ್ನುವುದು ಗಿಗ್ ಉದ್ಯಮಿಗಳ ವಾದ.

ಇತ್ತೀಚೆಗೆ ಇದೇ ವಿಚಾರದ ಬಗ್ಗೆ ಮಾತನಾಡಿದ್ದ ಜೊಮಾಟೊ ಮತ್ತು ಬ್ಲಿಂಕಿಟ್‌ನ ಮಾಲೀಕತ್ವ ಹೊಂದಿರುವ ಎಟೆರ್ನಲ್ ಸಂಸ್ಥಾಪಕ ಮತ್ತು ಸಿಇಒ ದೀಪಿಂದರ್ ಗೋಯಲ್, 'ಸಮಯದಲ್ಲಿ ಮಾಡಬಹುದಾದ ಹೊಂದಾಣಿಕೆ ಮತ್ತು ಗಿಗ್ ಕಾರ್ಮಿಕರಿಗೆ ಕಂಪನಿಗಳು ನೀಡುವ ಸೌಲಭ್ಯಗಳು ಹಲವು ಕಾರ್ಮಿಕರಿಗೆ ಭರವಸೆದಾಯಕ ಆದಾಯದ ಮೂಲವಾಗಿದೆ' ಎಂದು ಹೇಳಿದ್ದರು.

'2025ರಲ್ಲಿ ಜೊಮಾಟೊ ಮತ್ತು ಬ್ಲಿಂಕಿಟ್‌ಗಳು ವಿತರಣೆ ಪಾಲುದಾರರ (ಗಿಗ್ ಕಾರ್ಮಿಕರು) ವಿಮಾ ಸೌಲಭ್ಯಕ್ಕಾಗಿ ₹100 ಕೋಟಿ ವ್ಯಯಿಸಿವೆ. ಕಳೆದ ವರ್ಷ ಇವರ ಒಂದು ಗಂಟೆಯ ಸರಾಸರಿ ಗಳಿಕೆ (ಟಿಪ್ಸ್ ಹೊರತುಪಡಿಸಿ) ₹102 ಇತ್ತು. 2024ರಲ್ಲಿ ಅದು ₹92 ಆಗಿತ್ತು' ಎಂದು ಗೋಯಲ್ ಹೇಳಿದ್ದರು. ಅವರ ಪ್ರಕಾರ, 'ದಿನಕ್ಕೆ 10 ಗಂಟೆ, ತಿಂಗಳಿಗೆ 26 ದಿನ ದುಡಿದರೆ ತಿಂಗಳಿಗೆ ₹26,500 ಸಂಪಾದಿಸಬಹುದು. ಇಂಧನ ಮತ್ತು ನಿರ್ವಹಣಾ ವೆಚ್ಚ (ಶೇ 20) ಕಳೆದರೆ, ತಿಂಗಳಿಗೆ ಅವರ ಬಳಿ ₹21 ಸಾವಿರ ಇರುತ್ತದೆ.'




Presented by

## ❖ ಶಕ್ಸ್‌ಗಾಮ್ ಮಾತ್ರವಲ್ಲ, ಪಿಒಕೆಯೂ ನಮ್ಮದೇ: ಕವಿಂದರ್ ಗುಪ್ತಾ

**ಸಂದರ್ಭ: ಶಕ್‌ಗಾಮ್ ಕಣಿವೆಯು ತನ್ನ ಭೂಭಾಗವಾಗಿದೆ ಎಂಬ ಚೀನಾ ದೇಶದ ವಾದವನ್ನು ಲಡಾಖ್‌ನ ಲೆಫ್ಟಿನೆಂಟ್ ಗವರ್ನರ್ ಕವಿಂದರ್ ಗುಪ್ತಾ ಬಲವಾಗಿ ತಿರಸ್ಕರಿಸಿದ್ದಾರೆ.**

- ಶಕ್‌ಗಾಮ್ ಕಣಿವೆ ತನ್ನ ಭೂಭಾಗವಾಗಿದೆ ಎಂದು ಸೋಮವಾರ ಚೀನಾ ಪ್ರತಿಪಾದಿಸಿದಕ್ಕೆ ಪ್ರತಿಕ್ರಿಯಿಸಿರುವ ಅವರು, 'ಪಾಕ್ ಆಕ್ರಮಿತ ಕಾಶ್ಮೀರದ(ಪಿಒಕೆ) ಅಷ್ಟೂ ಪ್ರದೇಶ ಕೂಡ ಭಾರತಕ್ಕೆ ಸೇರಿದೆ' ಎಂದು ಪ್ರಪಾದಿಸಿದರು.
- 'ಈ ಪ್ರದೇಶದಲ್ಲಿ ಯಾರೇ ಭೂ ವಿಸ್ತರಣೆ ಮಾಡುವ ಪ್ರಯತ್ನವನ್ನು ಸಹಿಸಲಾಗುವುದಿಲ್ಲ' ಎಂದು ಅವರು ಇದೇ ಸಂದರ್ಭದಲ್ಲಿ ಎಚ್ಚರಿಸಿದರು. 'ಶಕ್ಸ್ ಗಾವ್ ಪ್ರದೇಶದಲ್ಲಿ ಚೀನಾ ಕೈಗೊಂಡಿರುವ ಮೂಲಸೌಕರ್ಯ ಯೋಜನೆಗಳು ಖಂಡನೀಯ' ಎಂದು ಒತ್ತಿ ಹೇಳಿದರು.
- 'ಇಡೀ ಕಾಶ್ಮೀರವೇ(ಪಿಒಕೆ) ನಮ್ಮದು. ಪಾಕಿಸ್ತಾನವು ಚೀನಾದೊಂದಿಗೆ ಯಾವ ರೀತಿಯ ವ್ಯವಹಾರ ನಡೆಸಿದೆ ಎಂದು ನಮಗೆ ಗೊತ್ತಿಲ್ಲ. ಇಂಥ ವಿಸ್ತರಣಾವಾದಿ ನೀತಿಯಿಂದ ಏನನ್ನೂ ಸಾಧಿಸಲಾಗುವುದಿಲ್ಲ ಎಂಬುದನ್ನು ಚೀನಾ ಅರ್ಥ ಮಾಡಿಕೊಳ್ಳಬೇಕು' ಎಂದು ಕವಿಂದರ್ ತಿಳಿಸಿದರು.
- 'ಇಂಥವನ್ನು ಎದುರಿಸಲು ಭಾರತ ಸಮರ್ಥವಾಗಿದೆ. ಇದು 1962ರ ಭಾರತವಲ್ಲ, 2026ರ ಭಾರತ, ಇಂತಹ ಯಾವುದೇ ಪ್ರಯತ್ನಗಳನ್ನು ವಿಫಲಗೊಳಿಸುತ್ತೇವೆ. ಇದನ್ನೆಲ್ಲ ವಿದೇಶಾಂಗ ಸಚಿವಾಲಯ ಗಮನಿಸುತ್ತಿದೆ' ಎಂದು ಅವರು ಎಚ್ಚರಿಸಿದರು.
- 'ಚೀನಾ ಈ ಹಿಂದೆ ಅರುಣಾಚಲ ಪ್ರದೇಶದ ಕೆಲವು ಭಾಗಗಳ ಮೇಲೆ ಹಕ್ಕು ಸಾಧಿಸಿತ್ತು. ಇನ್ನು ಇಂಥ ಯಾವುದೇ ಕೃತ್ಯವನ್ನು ನಾವು ಸಹಿಸುವುದಿಲ್ಲ. ಭಾರತ ಹಿಂದೆ ಇದ್ದುದಕ್ಕಿಂತ ಈಗ ಬಹಳ ಬಲಿಷ್ಠವಾಗಿದೆ ಎಂಬುದನ್ನು ಚೀನಾ ಅರಿತುಕೊಳ್ಳಬೇಕು' ಎಂದು ಗುಪ್ತಾ ಹೇಳಿದರು.
- ಪಾಕಿಸ್ತಾನದ ವಿರುದ್ಧ ಹರಿಹಾಯ್ದ ಗುಪ್ತಾ ಅವರು, 'ಪಾಕಿಸ್ತಾನ ಮಾರಾಟಕ್ಕಿರುವ ದೇಶವಾಗಿದೆ. ತನ್ನ ಸಾರ್ವಭೌಮತ್ವ ಅಥವಾ ತನ್ನ ಜನರ ಬಗ್ಗೆ ಯಾವುದೇ ಕಾಳಜಿ ಇಲ್ಲದ ರಾಷ್ಟ್ರವಾಗಿದೆ. ಬಲೂಚಿಸ್ತಾನ, ಸಿಂದ್ ಮತ್ತು ಕರಾಚಿಯಲ್ಲಿ, ಪಾಕ್ ಸೇನೆಯಿಂದ ದೌರ್ಜನ್ಯ ನಡೆಯುತ್ತಿದೆ ಎಂಬ ಕೂಗು ಕೇಳಿಬರುತ್ತಿದೆ.ಆ ಎಲ್ಲ ಪ್ರದೇಶಗಳನ್ನು ಪರೋಕ್ಷವಾಗಿ ಸೇನೆಯೇ ನಡೆಸುತ್ತಿದೆ' ಎಂದರು.

## ❖ ಸೆಕ್ಷನ್ 17ಎ: ಭಿನ್ನಮತದ ತೀರ್ಪು ಪ್ರಕಟಿಸಿದ 'ಸುಪ್ರೀಂ'

**ಸಂದರ್ಭ: ಭ್ರಷ್ಟಾಚಾರ ತಡೆ (ತಿದ್ದುಪಡಿ) ಕಾಯ್ದೆ-2018ರ ಸಾಂವಿಧಾನಿಕ ಸಿಂಧುತ್ವ ಕುರಿತಂತೆ ಸುಪ್ರೀಂ ಕೋರ್ಟ್ ಭಿನ್ನಮತದ ತೀರ್ಪು ಪ್ರಕಟಿಸಿದೆ.**

- ನ್ಯಾಯಮೂರ್ತಿ ಬಿ.ವಿ. ನಾಗರತ್ನ ಅವರು, 'ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 17ಎ ಅಸಾಂವಿಧಾನಿಕ. ಅದನ್ನು ತೆಗೆದುಹಾಕಬೇಕಿದೆ' ಎಂದರು.
- ನ್ಯಾಯಮೂರ್ತಿ ಕೆ.ವಿ. ವಿಶ್ವನಾಥನ್ ಅವರು, 'ಆ ಸೆಕ್ಷನ್ ಸಾಂವಿಧಾನಿಕ ಮಾನ್ಯತೆಯನ್ನು ಎತ್ತಿಹಿಡಿದು, ಪ್ರಾಮಾಣಿಕ ಅಧಿಕಾರಿಗಳನ್ನು ರಕ್ಷಿಸಬೇಕಿದೆ' ಎಂದು ಒತ್ತಿ ಹೇಳಿದರು.
- ಸಕ್ಷಮ ಪ್ರಾಧಿಕಾರದ ಅನುಮತಿಯ ಅಗತ್ಯವು ಭ್ರಷ್ಟಾಚಾರ ತಡೆ ಕಾಯ್ದೆಗೆ ವಿರುದ್ಧವಾಗಿದೆ. ಇದು ಭ್ರಷ್ಟರನ್ನು ರಕ್ಷಿಸುತ್ತದೆ ಎಂದು ನ್ಯಾಯಮೂರ್ತಿ ನಾಗರತ್ನ ಅಭಿಪ್ರಾಯಪಟ್ಟರು.
- ನ್ಯಾಯಮೂರ್ತಿ ವಿಶ್ವನಾಥನ್ ಅವರು, 'ಸೆಕ್ಷನ್ 17ಎ ಕೈಬಿಡುವುದು, ಸ್ನಾನದ ನೀರಿನ ಜೊತೆಗೆ ಮಗುವನ್ನೂ ಎಸೆದಂತೆ. ಚಿಕಿತ್ಸೆಯೇ ಕಾಯಿಲೆಗಿಂತಲೂ ಭಯಾನಕ ಎಂದು ಹೇಳಿದ ಹಾಗಾಗುತ್ತದೆ' ಎಂದರು.
- ಪ್ರಕರಣದ ಕುರಿತ ಅಂತಿಮ ನಿರ್ಣಯಕ್ಕಾಗಿ ಮುಖ್ಯ ನ್ಯಾಯ ಮೂರ್ತಿ ಸೂರ್ಯಕಾಂತ್ ಅವರು ವಿಸ್ತೃತ ನ್ಯಾಯಪೀಠ ರಚಿಸಲಿದ್ದಾರೆ.




Dr. Rajkumar IAS/KAS Academy

- ಭ್ರಷ್ಟಾಚಾರ ನಿಗ್ರಹ ಕಾಯ್ದೆಯ ಸೆಕ್ಷನ್ 17ಎ ಪ್ರಕಾರ, ಈ ಕಾಯ್ದೆಯಡಿ ಜನಪ್ರತಿನಿಧಿಗಳು ಸಾರ್ವಜನಿಕ ಸೇವೆ/ಕರ್ತವ್ಯದಲ್ಲಿದ್ದ ಸಂದರ್ಭದಲ್ಲಿ ಮಾಡಿರುವ ಯಾವುದೇ ಶಿಫಾರಸುಗಳು ಮತ್ತು ನಿರ್ಧಾರಗಳ ಕುರಿತ ಆರೋಪಗಳ ಮೇಲೆ ತನಿಖೆ ಅಥವಾ ವಿಚಾರಣೆ ಮಾಡುವ ಮೊದಲು ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆಯುವುದು ಕಡ್ಡಾಯ.


## ❖ ರಷ್ಯಾದಿಂದ ತೈಲ ಆಮದು ಇಳಿಕೆ

**ಸಂದರ್ಭ: ರಷ್ಯಾದಿಂದ ಕಚ್ಚಾ ತೈಲವನ್ನು ಖರೀದಿಸುವ ದೇಶಗಳ ಸಾಲಿನಲ್ಲಿ ಭಾರತವು ಡಿಸೆಂಬರ್‌ನಲ್ಲಿ ಮೂರನೆಯ ಸ್ಥಾನಕ್ಕೆ ಇಳಿದಿದೆ ಎಂದು ಯುರೋಪಿನ 'ಇಂಧನ ಮತ್ತು ಶುದ್ಧಗಾಳಿ ಕುರಿತ ಸಂಶೋಧನಾ ಕೇಂದ್ರ' (ಸಿಆರ್‌ಇಎ) ಹೇಳಿದೆ.**

- ಸಿಆರ್‌ಇಎ ಅಂದಾಜಿನ ಪ್ರಕಾರ ಡಿಸೆಂಬರ್‌ನಲ್ಲಿ ಭಾರತವು ರಷ್ಯಾದಿಂದ ಆಮದು ಮಾಡಿಕೊಂಡ ಕಚ್ಚಾ ತೈಲ, ಕಲ್ಲಿದ್ದಲಿನ ಮೊತ್ತವು 2.3 ಬಿಲಿಯನ್ ಯೂರೊ (ಸರಿಸುಮಾರು ₹24 ಸಾವಿರ ಕೋಟಿ) ಆಗಿದೆ. ನವೆಂಬರ್ ತಿಂಗಳಲ್ಲಿ ಇದು 3.3 ಬಿಲಿಯನ್ ಯೂರೊ (ಸರಿಸುಮಾರು ₹34 ಸಾವಿರ ಕೋಟಿ) ಆಗಿತ್ತು.
- ಎರಡನೆಯ ಸ್ಥಾನಕ್ಕೆ ಟರ್ಕಿ ದೇಶ ಬಂದಿದೆ ಎಂದು ಅದು ಹೇಳಿದೆ. ಮೊದಲ ಸ್ಥಾನದಲ್ಲಿ ಚೀನಾ ಮುಂದುವರಿದಿದೆ.
- ಅಮೆರಿಕವು ರಷ್ಯಾದ ರೊಸ್ನೆಫ್ಟ್ ಮತ್ತು ಲುಕಾಯಿಲ್ ಕಂಪನಿಗಳ ಮೇಲೆ ನಿರ್ಬಂಧ ಹೇರಿದೆ. ಇವೆರಡು ರಷ್ಯಾದ ಅತಿದೊಡ್ಡ ತೈಲ ಉತ್ಪಾದನಾ ಕಂಪನಿಗಳಾಗಿವೆ. ಈ ನಿರ್ಬಂಧದ ಕಾರಣದಿಂದಾಗಿ ರಿಲಯನ್ಸ್ ಇಂಡಸ್ಟ್ರೀಸ್, ಹಿಂದುಸ್ತಾನ್ ಪೆಟ್ರೋಲಿಯಂ ಕಾರ್ಪೊರೇಷನ್, ಎಚ್‌ಪಿಸಿಎಲ್-ಮಿತ್ತಲ್ ಎನರ್ಜಿ ಲಿ. ಮತ್ತು ಎಂಆರ್‌ಪಿಎಲ್ ಲಿಮಿಟೆಡ್ ರಷ್ಯಾದಿಂದ ಕಚ್ಚಾ ತೈಲ ಆಮದುಮಾಡಿಕೊಳ್ಳುವುದನ್ನು ಒಂದೋ ನಿಲ್ಲಿಸಿವೆ ಅಥವಾ ಆಮದು ಪ್ರಮಾಣವನ್ನು ತಗ್ಗಿಸಿವೆ.

## ❖ ಬೊಕ್ಕಸ: ₹13 ಸಾವಿರ ಕೋಟಿ ನಷ್ಟ



### ರಾಜ್ಯದ ಸ್ವಂತ ತೆರಿಗೆ ಆದಾಯ ● ಡಿಸೆಂಬರ್ ಅಂತ್ಯಕ್ಕೆ ಶೇ 68ರಷ್ಟೇ ಗುರಿ ಸಾಧನೆ ● 3 ತಿಂಗಳಲ್ಲಿ ₹65,000 ಕೋಟಿ ಸಂಗ್ರಹ ಸವಾಲು

● ಜಯಸಿಂಹ ಆರ್.

**ಆದಾಯ ಲೆಕ್ಕಾಚಾರ: ಏನು, ಎತ್ತ**

₹2.03 ಲಕ್ಷ ಕೋಟಿ — ತೆರಿಗೆ ರೂಪದ ಆದಾಯ ಸಂಗ್ರಹ ಗುರಿ

₹1.38 ಲಕ್ಷ ಕೋಟಿ — 2025ರ ಏಪ್ರಿಲ್‌ನಿಂದ ಡಿಸೆಂಬರ್ ಅಂತ್ಯದವರೆಗೆ ಸಂಗ್ರಹವಾದ ಆದಾಯ

₹65,000 ಕೋಟಿ — 2026ರ ಜನವರಿಯಿಂದ ಮಾರ್ಚ್ ಅಂತ್ಯದವರೆಗೆ ಸಂಗ್ರಹಿಸಬೇಕಿರುವ ಆದಾಯ

**ಬೆಂಗಳೂರು:** ರಾಜ್ಯ ಸರ್ಕಾರವು ಈ ಆರ್ಥಿಕ ವರ್ಷದಲ್ಲಿ ₹2.03 ಲಕ್ಷ ಕೋಟಿ ಆದಾಯ ಸಂಗ್ರಹಿಸುವ ಗುರಿ ಹಾಕಿಕೊಂಡಿದ್ದು, ಒಂಬತ್ತು ತಿಂಗಳಲ್ಲಿ ₹1.38 ಲಕ್ಷ ಕೋಟಿಯಷ್ಟೇ ಸಂಗ್ರಹವಾಗಿದೆ. ವರ್ಷದ ಅಂತ್ಯಕ್ಕೆ ಒಟ್ಟು ತೆರಿಗೆ ಸಂಗ್ರಹದಲ್ಲಿ ₹9,000 ಕೋಟಿಯಿಂದ ₹13,000 ಕೋಟಿ ಖೋತಾ ಆಗುವ ಅಂದಾಜಿದೆ.

2025ರ ಮಾರ್ಚ್‌ನಲ್ಲಿ ಮಂಡಿಸಲಾಗಿದ್ದ ಬಜೆಟ್‌ನಲ್ಲಿ ಸ್ವಂತ ತೆರಿಗೆ ಮೂಲಗಳಿಂದ ಇಷ್ಟು ಮೊತ್ತದ ಆದಾಯ ಕ್ರೋಡೀಕರಣ ಆಗಬಹುದು ಎಂದು ಅಂದಾಜಿಸಲಾಗಿತ್ತು. ಅದರ ಆಧಾರದಲ್ಲಿ, ಖರ್ಚನ್ನು ಲೆಕ್ಕ ಹಾಕಲಾಗಿತ್ತು.

ಆಸ್ತಿ ಮತ್ತು ದಸ್ತಾವೇಜುಗಳ ನೋಂದಣಿಯಲ್ಲಿನ ಸಮಸ್ಯೆ ಮತ್ತು ಕೇಂದ್ರ ಸರ್ಕಾರವು ಜಿಎಸ್‌ಟಿಯಲ್ಲಿ ಮಾಡಿದ ಬದಲಾವಣೆಯಿಂದಾಗಿ ಗಣನೀಯ ಪ್ರಮಾಣದಲ್ಲಿ ಆದಾಯ ಖೋತಾ ಆಗಿದೆ. ಇವುಗಳ ಮಧ್ಯೆಯೇ ರಾಜ್ಯ ಸರ್ಕಾರವು ಆದಾಯ ಗಳಿಕೆಯಲ್ಲಿ ಶೇ 68ರಷ್ಟು ಗುರಿ ಸಾಧಿಸಿದೆ. ಉಳಿದ ಮೂರು ತಿಂಗಳಲ್ಲಿ ಇನ್ನೂ ₹65,000 ಕೋಟಿ ಸಂಗ್ರಹಿಸುವ ಸವಾಲು ಸರ್ಕಾರದ ಮುಂದಿದ್ದು, ಗರಿಷ್ಠ ₹56,000 ಕೋಟಿಯಷ್ಟೇ ಸಂಗ್ರಹ ಆಗಬಹುದು ಎಂದು ಅಂದಾಜಿಸಲಾಗಿದೆ.

ಈ ಆರ್ಥಿಕ ವರ್ಷದ ಮೊದಲ ಐದು ತಿಂಗಳಲ್ಲಿ ವಾಣಿಜ್ಯ ತೆರಿಗೆ ಇಲಾಖೆಯು ಆದಾಯ ಗಳಿಕೆಯಲ್ಲಿ ಸರಾಸರಿ ಶೇ 16–17ರಷ್ಟು ಪ್ರಗತಿ ಸಾಧಿಸಿತ್ತು. ಆದರೆ, ಜಿಎಸ್‌ಟಿ ಸ್ಲ್ಯಾಬ್‌ಗಳ ಬದಲಾವಣೆಯ ನಂತರ ಈ ಬೆಳವಣಿಗೆ ದರ ಕುಸಿದಿದೆ. ಆರ್ಥಿಕ ಇಲಾಖೆ ಅಧಿಕಾರಿಗಳ ಅಂದಾಜಿನ ಪ್ರಕಾರ ವಾಣಿಜ್ಯ ತೆರಿಗೆ ಸಂಗ್ರಹದಲ್ಲೇ ₹7,000 ಕೋಟಿಯಿಂದ ₹9,000 ಕೋಟಿ ನಷ್ಟ ಆಗಬಹುದು.

'ಮೋಟಾರು ವಾಹನ ತೆರಿಗೆ ಸಂಗ್ರಹದಲ್ಲಿ, ಆಯಾ ತ್ರೈಮಾಸಿಕದ ಅಂತ್ಯಕ್ಕೆ ಸರಾಸರಿ ಶೇ 90–93ರಷ್ಟು ಗುರಿ ಸಾಧಿಸಲಾಗಿದೆ. ಇನ್ನು ಮೂರು ತಿಂಗಳಲ್ಲಿ ಒಟ್ಟು, ₹13,500 ಕೋಟಿಯಷ್ಟು ಮೋಟಾರು ವಾಹನ ತೆರಿಗೆ ಸಂಗ್ರಹ ವಾಗಬಹುದು ಎಂದು ನಿರೀಕ್ಷಿಸಲಾಗಿದೆ. ಹೀಗಿದ್ದೂ ಗುರಿಯಲ್ಲಿ ಶೇ 10ರಷ್ಟು ಖೋತಾ ಆಗಬಹುದು' ಎಂಬ ಅಂದಾಜು ಸಾರಿಗೆ ಇಲಾಖೆ ಅಧಿಕಾರಿಯೊಬ್ಬರದು.

'ಬಿಯರ್ ಮಾರಾಟದಲ್ಲಿ ಕುಸಿತದ ಮಧ್ಯೆಯೂ ಅಬಕಾರಿ ತೆರಿಗೆಯ ಸಂಗ್ರಹದಲ್ಲಿ ನಿರೀಕ್ಷಿತ ಮಟ್ಟದ ಬೆಳವಣಿಗೆ ದಾಖಲಾಗಿದೆ. ಇಲಾಖೆಯು ಪ್ರತಿ ತಿಂಗಳು ಸರಾಸರಿ ₹3,500 ಕೋಟಿ ಆದಾಯ ಗಳಿಸಿದೆ. ಒಂಬತ್ತು ತಿಂಗಳಲ್ಲಿ ಸುಮಾರು ₹30,000 ಕೋಟಿ ಸಂಗ್ರಹಿಸಲಾಗಿದೆ. ಉಳಿದ ಮೂರು ತಿಂಗಳಲ್ಲಿ ಬಜೆಟ್ ಗುರಿ ದಾಟುತ್ತೇವೆ. ಸನ್ನದುಗಳ ಹರಾಜಿನ ಮೂಲಕ ₹40,000 ಕೋಟಿಯ ಗುರಿ ಮುಟ್ಟುತ್ತೇವೆ' ಎಂದು ಅಬಕಾರಿ ಇಲಾಖೆಯ ಅಧಿಕಾರಿ ಒಬ್ಬರು ವಿಶ್ವಾಸ ವ್ಯಕ್ತಪಡಿಸಿದರು.

ಈ ಒಂಬತ್ತು ತಿಂಗಳಲ್ಲಿ ಕಡಿಮೆ ಪ್ರಗತಿ ಸಾಧಿಸಿರುವುದು ನೋಂದಣಿ ಮತ್ತು ಮುದ್ರಾಂಕ ಇಲಾಖೆ. ಒಟ್ಟು ಗುರಿಯಲ್ಲಿ ಶೇ 65ರಷ್ಟು ಮಾತ್ರ ಆದಾಯ ಸಂಗ್ರಹವಾಗಿದೆ. ಕಾವೇರಿ ತಂತ್ರಾಂಶದಲ್ಲಿನ ಸಮಸ್ಯೆಗಳು, ಕಾವೇರಿ 2.0 ಮತ್ತು ಇ–ಸ್ವತ್ತು ಜಾರಿಯ ನಂತರ ನೋಂದಣಿ ಕೆಲಸ ನಿಧಾನವಾಗುತ್ತಿದೆ. ಸರ್ವರ್ ಸಮಸ್ಯೆಯಿಂದ ನೋಂದಣಿಯಾಗುತ್ತಿಲ್ಲ. ಇದರಿಂದಾಗಿ ನಿರೀಕ್ಷಿತ ಪ್ರಗತಿ ಸಾಧ್ಯವಾಗಿಲ್ಲ. ಆರ್ಥಿಕ ವರ್ಷಾಂತ್ಯದ ವೇಳೆಗೆ ₹24,000 ಕೋಟಿಯಷ್ಟು ಆದಾಯ ಸಂಗ್ರಹವಾಗಬಹುದು ಎಂಬುದು ಇಲಾಖೆಯ ಅಧಿಕಾರಿಯೊಬ್ಬರ ಅಂದಾಜು.

ಆರ್ಥಿಕ ಇಲಾಖೆ ಅಧಿಕಾರಿಗಳ ಪ್ರಕಾರ ಮೋಟಾರು ವಾಹನ ತೆರಿಗೆ, ನೋಂದಣಿ ಮತ್ತು ಮುದ್ರಾಂಕ ಶುಲ್ಕದಿಂದಲೇ ಸುಮಾರು ₹5,000 ಕೋಟಿ ಆದಾಯ ಖೋತಾ ಆಗಲಿದೆ. ಕೇಂದ್ರ ಸರ್ಕಾರದ ಸಹಾಯಾನುದಾನವೂ ಗಣನೀಯ ಪ್ರಮಾಣದಲ್ಲಿ ಕಡಿಮೆ ಆಗಿರುವುದರಿಂದ, ರಾಜ್ಯವು ತುಸು ಆರ್ಥಿಕ ಬಿಕ್ಕಟ್ಟು ಎದುರಿಸಬೇಕಾಗುತ್ತದೆ.

- ಬಿಯರ್ ಮಾರಾಟ ಕುಸಿತದ ಮಧ್ಯೆಯೂ ಅಬಕಾರಿ ಮೂಲದ ಆದಾಯ ಸಂಗ್ರಹದಲ್ಲಿ ನಿರೀಕ್ಷಿತ ಮಟ್ಟದ ಪ್ರಗತಿ
- ಮೋಟಾರು ವಾಹನ ತೆರಿಗೆ ಸಂಗ್ರಹದಲ್ಲಿ ಶೇ 10ರಷ್ಟು ಖೋತಾ ಸಾಧ್ಯತೆ
- ಕಾವೇರಿ2.0, ಇ–ಸ್ವತ್ತು ಜಾರಿಯಿಂದ ನೋಂದಣಿ ಮತ್ತು ಮುದ್ರಾಂಕ ಮೂಲದ ಆದಾಯದಲ್ಲಿ ಕುಂಠಿತ ಪ್ರಗತಿ
- ಜಿಎಸ್‌ಟಿ ಸ್ಲ್ಯಾಬ್‌ಗಳ ಬದಲಾವಣೆಯಿಂದ ವಾಣಿಜ್ಯ ತೆರಿಗೆ ಸಂಗ್ರಹದಲ್ಲಿ ಭಾರಿ ಕುಸಿತ

| | ಗುರಿ | ಸಂಗ್ರಹ (2025ರ ಡಿಸೆಂಬರ್ ಅಂತ್ಯಕ್ಕೆ |
|---|---|---|
| ವಾಣಿಜ್ಯ | ₹1.20 ಲಕ್ಷ ಕೋಟಿ | ₹81,091 ಕೋಟಿ |
| ಅಬಕಾರಿ | ₹40,000 ಕೋಟಿ | ₹29,907 ಕೋಟಿ |
| ನೋಂದಣಿ–ಮುದ್ರಾಂಕ | ₹28,000 ಕೋಟಿ | ₹18,297 ಕೋಟಿ |
| ಮೋಟಾರು ವಾಹನ | ₹15,000 ಕೋಟಿ | ₹9,355 ಕೋಟಿ |

## ❖ 'ನೋಂದಣಿಗಷ್ಟೇ ಪೌರತ್ವ ದೃಢೀಕರಣ'

**ಸಂದರ್ಭ: 'ಮತದಾರರನ್ನು ನೋಂದಣಿ ಮಾಡುವ ಉದ್ದೇಶದಿಂದ ಮಾತ್ರ ಅವರ ಪೌರತ್ವವನ್ನು ನಿರ್ಧರಿಸಬ-ಹುದು. ಯಾರನ್ನಾದರೂ ಗಡಿಪಾರು ಮಾಡಬಹುದೇ ಎಂಬುದನ್ನು ನಾವು ನಿರ್ಧರಿಸಲು ಸಾಧ್ಯವಿಲ್ಲ' ಎಂದು ಚುನಾವಣಾ ಆಯೋಗವು (ಇ.ಸಿ) ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.**

- ಚುನಾವಣಾ ಆಯೋಗದ ಪರ ಹಾಜರಾದ ವಕೀಲ ರಾಕೇಶ್ ದ್ವಿವೇದಿ ಅವರು ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜಾಯ್‌ಮಾಲ್ಯ ಬಾಗ್ಚಿ ಅವರ ಪೀಠಕ್ಕೆ ಈ ವಿಷಯ ತಿಳಿಸಿದರು.
- ವಿವಿಧ ರಾಜ್ಯಗಳಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಗೆ ಸಂಬಂಧಿಸಿದಂತೆ ಚುನಾವಣಾ ಆಯೋಗದ ಅಧಿಕಾರದ ವ್ಯಾಪ್ತಿಯನ್ನು ಪ್ರಶ್ನಿಸಿ ಸಲ್ಲಿಕೆಯಾಗಿರುವ ಅರ್ಜಿಗಳ ಅಂತಿಮ ವಿಚಾರಣೆಯನ್ನು ಪೀಠವು ಪುನರಾರಂಭಿಸಿದೆ.
- ಆಯೋಗ ನಡೆಸುತ್ತಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಸಮರ್ಥಿಸಲು ದ್ವಿವೇದಿ ಅವರು ವಿಚಾರಣೆಯ ಆರಂಭದಲ್ಲಿ ಸಂವಿಧಾನದ 326ನೇ ವಿಧಿಯನ್ನು ಉಲ್ಲೇಖಿಸಿದರು. ಚುನಾವಣೆಯು ವಯಸ್ಕರ ಮತಾಧಿಕಾರವನ್ನು ವಿಧಿಯು ಸಾರುತ್ತದೆ ಎಂದರು. ಆಧರಿಸಿರಬೇಕು ಎಂಬುದನ್ನು 326ನೇ 'ವಯಸ್ಕರ ಮತದಾನದ ಹಕ್ಕು ಮೂರು ವಿಭಿನ್ನ ಅಂಶಗಳನ್ನು ಒಳಗೊಂಡಿದೆ' ಎಂದು ಹೇಳಿದರು.
- ಅಲ್ಲದೇ 'ಮತದಾರರ ನೋಂದಣಿ ಹಂತದಲ್ಲಿ ಇವೆಲ್ಲವನ್ನೂ ದೃಢಪಡಿಸಬೇಕು. ಈ ಮೂರೂ ಷರತ್ತು. ಗಳನ್ನು ಪೂರೈಸದ ಹೊರತು, ಒಬ್ಬರು ಮತದಾರರಾಗಿ ನೋಂದಾಯಿಸಲು ಅರ್ಹರಾಗಿರುವುದಿಲ್ಲ' ಎಂದು ದ್ವಿವೇದಿ ವಾದಿಸಿದರು.
- ಒಬ್ಬ ವ್ಯಕ್ತಿಯ ಪೌರತ್ನ ದೃಢಪಡದಿ, ದ್ದರೂ ಆತನನ್ನು ಮತದಾರರ ಪಟ್ಟಿಯಲ್ಲಿ ಸೇರಿಸಿದರೆ, ಅದು ಸಂವಿಧಾನದ ಆಶಯಕ್ಕೆ ವಿರುದ್ಧವಾಗುತ್ತದೆ ಎಂದು ಹೇಳಿದರು.

- ಅರ್ಜಿದಾರರಲ್ಲಿ ಒಬ್ಬರಾದ 'ಅಸೋಸಿಯೇಷನ್ ಆಫ್ ಡೆಮಾಕ್ರಟಿಕ್ ರಿಫಾರ್ಮ್ಸ್' (ಎಡಿಆರ್) ಪರ ಹಾಜರಾದ ವಕೀಲ ಪ್ರಶಾಂತ್ ಭೂಷಣ್, 'ಮತದಾನಕ್ಕೆ ಪೌರತ್ವವು ಪೂರ್ವಭಾವಿ ಷರತ್ತು ಎಂಬುದು ನಿರ್ವಿವಾದ, ಆದರೆ, ಪೌರತ್ವವನ್ನು ನಿರ್ಧರಿಸುವ ಅಧಿಕಾರ ಚುನಾವಣಾ ಆಯೋಗಕ್ಕೆ ಇದೆಯೇ ಎಂಬುದು ಪ್ರಮುಖ ಪ್ರಶ್ನೆಯಾಗಿದೆ' ಎಂದರು.
- ಅದಕ್ಕೆ ಸಿಜೆಐ, 'ನಾಗರಿಕರನ್ನು ಗುರುತಿಸುವುದಷ್ಟೇ ಆಯೋಗದ ಕೆಲಸ: ಪೌರತ್ವವನ್ನು ಅದರ ವಿಶಾಲ ಅರ್ಥದಲ್ಲಿ ನಿರ್ಣಯಿಸುವುದು ಅಲ್ಲ' ಎಂದರು.
- ಈ ವಿಚಾರದಲ್ಲಿ ಚುನಾವಣಾ ಆಯೋಗವು ಸೀಮಿತ ಅಧಿಕಾರವನ್ನು ಹೊಂದಿದೆ. ಮತದಾರರಾಗಿ ನೋಂದಣಿ ಮಾಡಿಕೊಳ್ಳಲು ಮಾತ್ರ ಆಯೋಗವು ಪೌರತ್ವವನ್ನು ನಿರ್ಧರಿಸುತ್ತದೆ. ನಾವು ಯಾರನ್ನೂ ಗಡಿಪಾರು ಮಾಡಲು ಸಾಧ್ಯವಿಲ್ಲ ಅಥವಾಭಾರತದಲ್ಲಿನೆಲಸಲು ವ್ಯಕ್ತಿಗೆ ವೀಸಾ ಇದೆಯೇ ಎಂಬುದನ್ನು ನಿರ್ಧರಿಸಲು ಸಾಧ್ಯವಿಲ್ಲ. ಆ ವಿಷಯ ನಮ್ಮ ವ್ಯಾಪ್ತಿಗೆ ಬರುವುದಿಲ್ಲ' ಎಂದು ದ್ವಿವೇದಿಸ್ಪಷ್ಟಪಡಿಸಿದರು.
- ಚುನಾವಣಾ ಆಯೋಗವು ಪೌರತ್ವವನ್ನು ನೀಡುವ ಪ್ರಾಧಿಕಾರವಾಗಿ ಕಾರ್ಯನಿರ್ವಹಿಸಲು ಸಾಧ್ಯವಿಲ್ಲದಿದ್ದರೂ ಮತದಾರರ ಪಟ್ಟಿಯಲ್ಲಿ ನೋಂದಣಿ ಮಾಡಿಕೊಳ್ಳುವ ವ್ಯಕ್ತಿ ನಿಜವಾಗಿಯೂ ಈ ದೇಶದ ಪ್ರಜೆಯೇ ಎಂಬುದನ್ನು ಪರಿಶೀಲಿಸುವ ಅಧಿಕಾರ ಹೊಂದಿದೆ ಎಂದು ಹೇಳಿದ ಪೀಠ, ವಿಚಾರಣೆಯನ್ನು ಜನವರಿ 20ಕ್ಕೆ ಮುಂದೂಡಿತು.

## ❖ ಕಡಲೆಗೆ ಬೆಂಬಲ ಬೆಲೆ: ಕೇಂದ್ರಕ್ಕೆ ಸಿ.ಎಂ ಪತ್ರ

**ಸಂದರ್ಭ: ಮಾರುಕಟ್ಟೆಯಲ್ಲಿ ದರ ಕುಸಿತದಿಂದ ಸಂಕಷ್ಟದಲ್ಲಿ ರುವ ಕಡಲೆ ಬೆಳೆಗಾರರ ನೆರವಿಗಾಗಿ ಕೂಡಲೇ ಬೆಂಬಲ ಬೆಲೆಯಡಿ ಖರೀದಿ ಕೇಂದ್ರ ಆರಂಭಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.**

- 'ಕರ್ನಾಟಕದ ಪ್ರಮುಖ ದ್ವಿದಳ ಧಾನ್ಯ ಬೆಳೆಗಳಲ್ಲಿ ಕಡಲೆ ಒಂದಾಗಿದೆ. 9.24 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆಯಾಗಿದ್ದು, 6.27 ಲಕ್ಷ ಟನ್ ಉತ್ಪಾದನೆ ನಿರೀಕ್ಷಿಸಲಾಗಿದೆ. ಧಾರವಾಡ, ಗದಗ, ಬೆಳಗಾವಿ, ವಿಜಯಪುರ, ಕಲಬುರಗಿ, ಯಾದಗಿರಿ, ಬೀದರ್, ರಾಯಚೂರು, ಕೊಪ್ಪಳ, ಬಳ್ಳಾರಿ, ಚಿತ್ರದುರ್ಗ, ಬಾಗಲಕೋಟೆ, ದಾವಣಗೆರೆ, ಚಿಕ್ಕಮಗಳೂರು ಮುಂತಾದ ಪ್ರದೇಶಗಳ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಇದು ಆದಾಯದ ಮೂಲವಾಗಿದೆ. ಅನಿಶ್ಚಿತ ಹವಾಮಾನ ಪರಿಸ್ಥಿತಿಗಳ ಬಳಿಕವೂ ಅನೇಕ ತಿಂಗಳ ಕಠಿಣ ಪರಿಶ್ರಮದ ಮೂಲಕ ಕಡಲೆ ಫಸಲು ರೈತರ ಕೈ ಸೇರುತ್ತಿದೆ. ಆದರೆ, ಮಾರುಕಟ್ಟೆಯಲ್ಲಿ ಬೆಲೆ ಕುಸಿತವಾಗಿ ರೈತರಿಗೆ. ಅನ್ಯಾಯವಾಗುತ್ತಿದೆ' ಎಂದು ಪತ್ರದಲ್ಲಿ ಅವರು ವಿವರಿಸಿದ್ದಾರೆ.

Dr. Rajkumar Academy

## ❖ ಸರಿದೂಗುವುದೇ ಟ್ರಂಪ್ ಸುಂಕ ಹೇರಿಕೆಯ ನಷ್ಟ?

### ಭಾರತ–ಐರೋಪ್ಯ ಒಕ್ಕೂಟ ಎಫ್‌ಟಿಎ ಸನ್ನಿಹಿತ

# ಸರಿದೂಗುವುದೇ ಟ್ರಂಪ್ ಸುಂಕ ಹೇರಿಕೆಯ ನಷ್ಟ?

**ಡೊನಾಲ್ಡ್ ಟ್ರಂಪ್ ಅವರು ಹೆಚ್ಚುವರಿ ಸುಂಕ ಹೇರಿದ ನಂತರ ಭಾರತ–ಅಮೆರಿಕ ಸಂಬಂಧ ಹದಗೆಟ್ಟಿದೆ. ಉಭಯ ದೇಶಗಳಿಗೆ ವ್ಯಾಪಾರ ಒಪ್ಪಂದದ ಮಾತುಕತೆಯನ್ನು ಅಂತಿಮಗೊಳಿಸಲು ಇನ್ನೂ ಸಾಧ್ಯವಾಗಿಲ್ಲ. ಈ ಮಧ್ಯೆ ಮುಕ್ತ ವ್ಯಾಪಾರ ಒಪ್ಪಂದಕ್ಕೆ ಸಹಿ ಹಾಕಲು ಭಾರತ ಮತ್ತು ಐರೋಪ್ಯ ಒಕ್ಕೂಟ ಸಜ್ಜುಗೊಂಡಿವೆ. ಇದೇ 27ರಂದು ಉಭಯ ಪಕ್ಷಗಳೂ ಒಪ್ಪಂದಕ್ಕೆ ಸಹಿ ಹಾಕಲಿವೆ ಎಂದು ಹೇಳಲಾಗಿದೆ. ಟ್ರಂಪ್ ಸುಂಕ ರಂಪಾಟವು ಭಾರತ ಮಾತ್ರವಲ್ಲದೆ ಜಾಗತಿಕ ವ್ಯಾಪಾರದ ಮೇಲೆ ಪರಿಣಾಮ ಬೀರಿರುವ ಸಂದರ್ಭದಲ್ಲಿ ಈ ಒಪ್ಪಂದಕ್ಕೆ ಹೆಚ್ಚಿನ ಪ್ರಾಮುಖ್ಯ ಇದೆ**



### ಐರೋಪ್ಯ ಒಕ್ಕೂಟ ಸದಸ್ಯ ರಾಷ್ಟ್ರಗಳು

ಆಸ್ಟ್ರಿಯಾ, ಬೆಲ್ಜಿಯಂ, ಬಲ್ಗೇರಿಯಾ, ಕ್ರೊವೇಶಿಯಾ, ಸೈಪ್ರಸ್, ಜೆಕ್ ರಿಪಬ್ಲಿಕ್, ಡೆನ್ಮಾರ್ಕ್, ಎಸ್ಟೋನಿಯಾ, ಫಿನ್ಲೆಂಡ್, ಫ್ರಾನ್ಸ್, ಜರ್ಮನಿ, ಗ್ರೀಸ್, ಹಂಗರಿ, ಐರ್ಲೆಂಡ್, ಇಟಲಿ, ಲಾಟ್ವಿಯಾ, ಲಿಥುವೇನಿಯಾ, ಲಕ್ಸೆಂಬರ್ಗ್, ಮಾಲ್ಟ, ನೆದರ್ಲೆಂಡ್ಸ್, ಪೋಲೆಂಡ್, ಪೋರ್ಚುಗಲ್, ರೊಮೇನಿಯಾ, ಸ್ಲೊವಾಕಿಯಾ, ಸ್ಲೊವೇನಿಯಾ, ಸ್ಪೇನ್, ಸ್ವೀಡನ್

**45** ಕೋಟಿ ಒಟ್ಟು ಜನಸಂಖ್ಯೆ

ಜರ್ಮನಿ, ಇಟಲಿ, ಫ್ರಾನ್ಸ್, ಸ್ಪೇನ್, ಬೆಲ್ಜಿಯಂ, ನೆದರ್ಲೆಂಡ್ಸ್, ಡೆನ್ಮಾರ್ಕ್‌ಗಳೊಂದಿಗೆ ಭಾರತವು ಉತ್ತಮ ವ್ಯಾಪಾರ ಸಂಬಂಧ ಹೊಂದಿದೆ.

**19.5** ಲಕ್ಷ ಕೋಟಿ ಡಾಲರ್ ಐರೋಪ್ಯ ಒಕ್ಕೂಟದ ಜಿಡಿಪಿ ಗಾತ್ರ

**2.9** ಲಕ್ಷ ಕೋಟಿ ಡಾಲರ್ ವಿವಿಧ ದೇಶಗಳಿಗೆ ಮಾಡುವ ವಾರ್ಷಿಕ ರಫ್ತಿನ ಮೌಲ್ಯ

**2.6** ಲಕ್ಷ ಕೋಟಿ ಡಾಲರ್ ಹೊರದೇಶಗಳಿಂದ ವಾರ್ಷಿಕವಾಗಿ ಮಾಡುವ ಆಮದು ಮೌಲ್ಯ

ಪ್ರಜಾವಾಣಿ ವಾರ್ತೆ



ಭಾರತ ಮತ್ತು 27 ರಾಷ್ಟ್ರಗಳನ್ನೊಳಗೊಂಡ ಐರೋಪ್ಯ ಒಕ್ಕೂಟದ ನಡುವೆ ಮುಕ್ತ ವ್ಯಾಪಾರ ಒಪ್ಪಂದ (ಎಫ್‌ಟಿಎ) ನಡೆಯುವುದು ನಿಚ್ಚಳವಾಗಿದೆ. ಇದೇ 27ರಂದು ನವದೆಹಲಿಯಲ್ಲಿ ನಡೆಯಲಿರುವ ಭಾರತ–ಐರೋಪ್ಯ ಒಕ್ಕೂಟ ಶೃಂಗಸಭೆಯಲ್ಲಿ ಒಪ್ಪಂದಕ್ಕೆ ಸಹಿ ಬೀಳುವುದು ಬಹುತೇಕ ಖಚಿತವಾಗಿದೆ. ಐರೋಪ್ಯ ಕಮಿಷನ್‌ನ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಮತ್ತು ಐರೋಪ್ಯ ಕೌನ್ಸಿಲ್‌ನ ಅಧ್ಯಕ್ಷ ಆ್ಯಂಟೋನಿಯೊ ಕೋಸ್ಟಾ ಅವರು 26ರಂದು ನಡೆಯಲಿರುವ ಗಣರಾಜ್ಯೋತ್ಸವ ಸಮಾರಂಭದಲ್ಲಿ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಮರು ದಿನವೇ ಶೃಂಗಸಭೆ ಆರಂಭವಾಗಲಿದೆ.

## ಮಹತ್ವ ಏಕೆ?

ಮುಕ್ತ ವ್ಯಾಪಾರ ಒಪ್ಪಂದಕ್ಕಾಗಿ ಭಾರತ ಮತ್ತು ಐರೋಪ್ಯ ಒಕ್ಕೂಟಗಳು 2007ರಲ್ಲೇ ಮಾತುಕತೆ ಆರಂಭಿಸಿದ್ದವು. ಆದರೆ, ಮುಕ್ತ ಮಾರುಕಟ್ಟೆಯ ಲಭ್ಯತೆ ಯಾವ ಪ್ರಮಾಣದಲ್ಲಿ ಇರಬೇಕು ಎಂಬುದೂ ಸೇರಿದಂತೆ ವಿವಿಧ ವಿಚಾರಗಳಲ್ಲಿ ಭಿನ್ನಾಭಿಪ್ರಾಯ ಉಂಟಾಗಿದ್ದರಿಂದ 2013ರಲ್ಲಿ ಮಾತುಕತೆ ನಿಂತಿತ್ತು. 9 ವರ್ಷಗಳ ಬಳಿಕ, 2022ರ ಜೂನ್‌ನಲ್ಲಿ ಮಾತುಕತೆ ಪುನರಾರಂಭಗೊಂಡಿತ್ತು. ಈವರೆಗೆ ಉಭಯ ಪಕ್ಷಗಳು 16 ಸುತ್ತು ಮಾತುಕತೆ ನಡೆಸಿವೆ.

ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಭಾರತದ ಮೇಲೆ ಶೇ 50ರಷ್ಟು ಸುಂಕ ಹೇರಿದ ನಂತರ ಎರಡೂ ದೇಶಗಳ ನಡುವಿನ ಬಾಂಧವ್ಯ ಹಳಸಿರುವುದು ಮತ್ತು ವ್ಯಾಪಾರ ಒಪ್ಪಂದ ಮಾತುಕತೆಯು ಫಲಪ್ರದವಾಗದ ಸಂದರ್ಭದಲ್ಲಿ ಈ ಒಪ್ಪಂದ ನಡೆಯುತ್ತಿರುವುದು ಹೆಚ್ಚು ಮಹತ್ವ ಪಡೆದಿದೆ.

ಒಪ್ಪಂದವು ಐರೋಪ್ಯ ಸದಸ್ಯ ರಾಷ್ಟ್ರಗಳಿಗೆ ಭಾರತ ಮಾಡುವ ರಫ್ತಿನ ಪ್ರಮಾಣವನ್ನು ಇನ್ನಷ್ಟು ಹೆಚ್ಚಿಸಲಿದೆ ಮತ್ತು ಚೀನಾದ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡಲಿದೆ ಎಂದು ನಿರೀಕ್ಷಿಸಲಾಗಿದೆ.

## ನಾಲ್ಕನೇ ಒಪ್ಪಂದ

ರಷ್ಯಾದಿಂದ ತೈಲ ಖರೀದಿಸುತ್ತಿದೆ ಎಂಬ ನೆಪದಲ್ಲಿ ಭಾರತದ ಮೇಲೆ ಟ್ರಂಪ್ ಆಡಳಿತ ಹೇರಿರುವ ಹೆಚ್ಚುವರಿ ಸುಂಕದಿಂದಾಗಿ ಭಾರತದ ರಫ್ತು ಉದ್ಯಮಕ್ಕೆ ಹೊಡೆತ ಬಿದ್ದಿದೆ. ಟ್ರಂಪ್ ಸುಂಕವು ಜಾಗತಿಕ ಮಟ್ಟದಲ್ಲಿ ಸರಕುಗಳ ಪೂರೈಕೆಯ ಮೇಲೂ ಪರಿಣಾಮ ಬೀರಿದೆ. ಸುಂಕದ ಕಾರಣಕ್ಕೆ ಅಮೆರಿಕದೊಂದಿಗಿನ ವ್ಯಾಪಾರದಲ್ಲಿ ಆಗುತ್ತಿರುವ ನಷ್ಟವನ್ನು ಬೇರೆ ದೇಶಗಳೊಂದಿಗೆ ಹೆಚ್ಚು ವ್ಯಾಪಾರ ನಡೆಸಿ ಸರಿದೂಗಿಸಲು ಭಾರತ ಪ್ರಯತ್ನಿಸುತ್ತಿದೆ. ಇದಕ್ಕಾಗಿ ಬೇರೆ ದೇಶಗಳೊಂದಿಗೆ ವ್ಯಾಪಾರ ಮಾತುಕತೆಯನ್ನು ತೀವ್ರಗೊಳಿಸಿದೆ.


ಕಳೆದ ವರ್ಷದ ಅಕ್ಟೋಬರ್‌ನಿಂದ ಭಾರತವು ಮೂರು ಎಫ್‌ಟಿಎಗಳನ್ನು (ಯುರೋಪಿನ ಮುಕ್ತ ವ್ಯಾಪಾರ ಒಕ್ಕೂಟ, ಒಮಾನ್, ನ್ಯೂಜಿಲೆಂಡ್) ಅಂತಿಮಗೊಳಿಸಿದೆ (ಕಳೆದ ವರ್ಷದ ಜುಲೈನಲ್ಲಿ ಬ್ರಿಟನ್ ಜೊತೆಗೂ ಒಪ್ಪಂದ ಮಾಡಿಕೊಂಡಿದೆ). ಐರೋಪ್ಯ ಒಕ್ಕೂಟದೊಂದಿಗೆ ಒಪ್ಪಂದ ಏರ್ಪಟ್ಟರೆ ನಾಲ್ಕನೆಯದ್ದಾಗುತ್ತದೆ.

ಆಧಾರ: ಪಿಟಿಐ, ಐರೋಪ್ಯ ಒಕ್ಕೂಟ ವೆಬ್‌ಸೈಟ್, ಯುರಾಕ್ಟಿವ್.ಕಾಂ

## ಏನಿದು ಎಫ್‌ಟಿಎ?

ಮುಕ್ತ ವ್ಯಾಪಾರ ಒಪ್ಪಂದ– ಫ್ರೀ ಟ್ರೇಡ್ ಅಗ್ರಿಮೆಂಟ್ ಅಥವಾ ಎಫ್‌ಟಿಎ ಎನ್ನುವುದು ಎರಡು ಅಥವಾ ಅದಕ್ಕಿಂತ ಹೆಚ್ಚಿನ ರಾಷ್ಟ್ರಗಳೊಂದಿಗೆ ನಡೆಯುವ ವ್ಯಾಪಾರ ಒಪ್ಪಂದ. ರಾಷ್ಟ್ರಗಳ ನಡುವಿನ ವ್ಯಾಪಾರದಲ್ಲಿ ಇರುವ ಹೆಚ್ಚಿನ ಸುಂಕ, ತೆರಿಗೆ ಸೇರಿದಂತೆ ಇನ್ನಿತರ ಅಡೆತಡೆಗಳನ್ನು ನಿವಾರಿಸುವ ಪ್ರಯತ್ನವೂ ಹೌದು. ಒಪ್ಪಂದದ ಅಡಿಯಲ್ಲಿ ಸುಂಕ/ತೆರಿಗೆಗೆ ಸಂಪೂರ್ಣ ವಿನಾಯಿತಿ ನೀಡಲಾಗುತ್ತದೆ ಅಥವಾ ಗಣನೀಯ ಪ್ರಮಾಣದಲ್ಲಿ ಕಡಿಮೆ ಮಾಡಲಾಗುತ್ತದೆ. ಉಭಯ ದೇಶಗಳ ನಡುವೆ ದ್ವಿಪಕ್ಷೀಯ ವ್ಯಾಪಾರ ಹೆಚ್ಚಿಸುವುದಕ್ಕಾಗಿ ನಿಯಮಗಳನ್ನೂ ಸರಳಗೊಳಿಸಲಾಗುತ್ತದೆ.

### ಭಾರತ –ಐರೋಪ್ಯ ಒಕ್ಕೂಟ ದ್ವಿಪಕ್ಷೀಯ ಸರಕು ವ್ಯಾಪಾರ




**17%** ಭಾರತವು ಮಾಡುತ್ತಿರುವ ಒಟ್ಟು ರಫ್ತಿನಲ್ಲಿ ಐರೋಪ್ಯ ಒಕ್ಕೂಟಕ್ಕೆ ಮಾಡಲಾಗುತ್ತಿರುವ ರಫ್ತಿನ ಪ್ರಮಾಣ

**9%** ಐರೋಪ್ಯ ಒಕ್ಕೂಟ ಮಾಡುವ ರಫ್ತಿನಲ್ಲಿ ಭಾರತಕ್ಕೆ ಮಾಡಲಾಗುತ್ತಿರುವ ರಫ್ತಿನ ಪ್ರಮಾಣ

## ಎಫ್‌ಡಿಐ ಹೆಚ್ಚಳ ನಿರೀಕ್ಷೆ

ಒಪ್ಪಂದ ನಡೆದರೆ ಎರಡೂ ಕಡೆಗಳಲ್ಲಿ ವಿದೇಶಿ ನೇರ ಬಂಡವಾಳ ಹೂಡಿಕೆ (ಎಫ್‌ಡಿಐ) ಹರಿವು ಇನ್ನಷ್ಟು ಹೆಚ್ಚಾಗಬಹುದು ಎಂದು ಅಂದಾಜಿಸಲಾಗಿದೆ.




ಐರೋಪ್ಯ ಒಕ್ಕೂಟದ ಸುಮಾರು 6,000 ಕಂಪನಿಗಳು ಭಾರತದಲ್ಲಿ ಕಾರ್ಯಾಚರಿಸುತ್ತಿದ್ದು, 2000ದ ಏಪ್ರಿಲ್‌ನಿಂದ 2024ರ ಸೆಪ್ಟೆಂಬರ್ ವರೆಗೆ ₹10.59 ಲಕ್ಷ ಕೋಟಿ (ಡಾಲರ್ ಎದುರು ಈಗಿನ ರೂಪಾಯಿ ಮೌಲ್ಯದ ಅಂದಾಜು) ಬಂಡವಾಳ ಹೂಡಿವೆ. ಈ ಅವಧಿಯಲ್ಲಿ ಭಾರತಕ್ಕೆ ಬಂದ ಎಫ್‌ಡಿಐನಲ್ಲಿ ಐರೋಪ್ಯ ಒಕ್ಕೂಟದ ಪಾಲು ಶೇ 16.6.

ಚಿಂತಕರ ಚಾವಡಿ ಜಿಟಿಆರ್‌ಐ ಪ್ರಕಾರ 2000 ಏಪ್ರಿಲ್‌ನಿಂದ 2024ರ ಮಾರ್ಚ್‌ವರೆಗೆ ಭಾರತದ ಕಂಪನಿಗಳು ಯೂರೋಪ್ ರಾಷ್ಟ್ರಗಳಿಗೆ ₹3.61 ಲಕ್ಷ ಕೋಟಿ ನೇರ ಹೂಡಿಕೆ ಮಾಡಿವೆ.

### 2014ರ ನಂತರ ಏಳು ಎಫ್‌ಟಿಎ

2014ರ ನಂತರ ಭಾರತವು ಏಳು ರಾಷ್ಟ್ರಗಳೊಂದಿಗೆ ಮುಕ್ತ ವ್ಯಾಪಾರ ಒಪ್ಪಂದಗಳನ್ನು ಅಂತಿಮಗೊಳಿಸಿದೆ.

1. ಮಾರಿಷಸ್ (2021 ಏಪ್ರಿಲ್)
2. ಆಸ್ಟ್ರೇಲಿಯಾ (2022 ಡಿಸೆಂಬರ್)
3. ಯುಎಇ (2022 ಮೇ)
4. ಒಮಾನ್ (2025 ಡಿಸೆಂಬರ್)
5. ಬ್ರಿಟನ್ (2025 ಜುಲೈ)
6. ಯುರೋಪಿನ ಮುಕ್ತ ವ್ಯಾಪಾರ ಒಕ್ಕೂಟ (ಇಎಫ್‌ಟಿಎ) (ಸ್ವಿಟ್ಜರ್ಲೆಂಡ್, ಐಸ್‌ಲೆಂಡ್, ಲಿಕ್ಟೆನ್‌ಸ್ಟೈನ್, ನಾರ್ವೆ) (2025–ಅಕ್ಟೋಬರ್)
7. ನ್ಯೂಜಿಲೆಂಡ್ (2025 ಡಿಸೆಂಬರ್‌ನಲ್ಲಿ ಮಾತುಕತೆ ಅಂತಿಮವಾಗಿದೆ)

ಮಾರಿಷನ್, ಆಸ್ಟ್ರೇಲಿಯಾ, ಯುಎಇಯೊಂದಿಗಿನ ಒಪ್ಪಂದ ಜಾರಿಯಾಗಿದೆ. ನ್ಯೂಜಿಲೆಂಡ್ ಬಿಟ್ಟು ಉಳಿದ ರಾಷ್ಟ್ರಗಳೊಂದಿಗೆ ಒಪ್ಪಂದಕ್ಕೆ ಸಹಿ ಹಾಕಲಾಗಿದೆ

**2014ಕ್ಕೂ ಮೊದಲು ಭಾರತವು ಶ್ರೀಲಂಕಾ, ದಕ್ಷಿಣ ಏಷ್ಯಾ ಮುಕ್ತ ವ್ಯಾಪಾರ ಒಪ್ಪಂದ (ಎಸ್‌ಎಎಫ್‌ಟಿಎ) (ಪಾಕಿಸ್ತಾನ, ನೇಪಾಳ, ಶ್ರೀಲಂಕಾ, ಬಾಂಗ್ಲಾದೇಶ, ಭೂತಾನ್, ಮಾಲ್ದೀವ್ಸ್ ಮತ್ತು ಅಫ್ಗಾನಿಸ್ತಾನ), ನೇಪಾಳ, ಭೂತಾನ್, ಥಾಯ್ಲೆಂಡ್, ಸಿಂಗಪುರ, ಆಸಿಯಾನ್ (ಬ್ರೂನೈ, ಕಾಂಬೋಡಿಯಾ, ಇಂಡೊನೇಷ್ಯಾ, ಲಾವೋಸ್, ಮಲೇಷ್ಯಾ, ಮ್ಯಾನ್ಮಾರ್, ಫಿಲಿಪ್ಪೀನ್ಸ್, ಸಿಂಗಪುರ, ಥಾಯ್ಲೆಂಡ್ ಮತ್ತು ವಿಯೆಟ್ನಾಂ) ರಾಷ್ಟ್ರಗಳೊಂದಿಗೆ ವ್ಯಾಪಾರ ಒಪ್ಪಂದ ಮಾಡಿಕೊಂಡಿತ್ತು.**

## ಒಪ್ಪಂದದಿಂದಾಗುವ ಲಾಭ ಏನು?

ಸರಕು ವ್ಯಾಪಾರದಲ್ಲಿ ಐರೋಪ್ಯ ಒಕ್ಕೂಟವು ಭಾರತದ ಅತಿ ದೊಡ್ಡ ಪಾಲುದಾರ. ಆಮದು ಮಾಡುತ್ತಿರುವ ವಸ್ತುಗಳ ಮೇಲೆ ಹೇರಲಾಗುತ್ತಿರುವ ಸುಂಕಗಳು ಒಪ್ಪಂದದಿಂದಾಗಿ ಕಡಿಮೆಯಾಗಲಿವೆ, ಇಲ್ಲವೇ ಸಂಪೂರ್ಣವಾಗಿ ರದ್ದಾಗಲಿವೆ. ಇದರಿಂದಾಗಿ ತಂತ್ರಜ್ಞಾನ, ಔಷಧಿ, ವಾಹನೋದ್ಯಮ ಮತ್ತು ಜವಳಿ ಸೇರಿದಂತೆ ಹಲವು ಕೈಗಾರಿಕಾ ಕ್ಷೇತ್ರಗಳಿಗೆ ಪ್ರಯೋಜನ ಸಿಗಲಿದೆ.

ಜವಳಿ, ಚರ್ಮೋದ್ಯಮ, ಔಷಧ, ಉಕ್ಕು, ಪೆಟ್ರೋಲಿಯಂ ಉತ್ಪನ್ನಗಳು, ಎಲೆಕ್ಟ್ರಿಕಲ್ ಯಂತ್ರೋಪಕರಣಗಳು ಸೇರಿದಂತೆ ಕಾರ್ಮಿಕರ ಶ್ರಮವನ್ನು ಹೆಚ್ಚು ಬೇಡುವ ಉದ್ದಿಮೆಗಳ ಉತ್ಪನ್ನಗಳಿಗೆ ಸುಂಕ ವಿಧಿಸಬಾರದು ಎಂಬ ಬೇಡಿಕೆಯನ್ನು ಭಾರತ ಮುಂದಿಟ್ಟಿದೆ. ಸುಂಕ ಕಡಿಮೆಯಾದರೆ, ಈ ಉತ್ಪನ್ನಗಳಿಗೆ ಯುರೋಪ್ ಮಾರುಕಟ್ಟೆಯಲ್ಲಿ ಬೇಡಿಕೆ ಸೃಷ್ಟಿಯಾಗಲಿದೆ.

### ಕೃಷಿ ಹೊರಕ್ಕೆ

ಎಫ್‌ಟಿಎನಿಂದ ಕೃಷಿ ಉತ್ಪನ್ನಗಳನ್ನು ಕೈಬಿಡಲಾಗಿದೆ ಎಂದು ಐರೋಪ್ಯ ಕಮಿಷನ್‌ನ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಹೇಳಿರುವುದಾಗಿ ಯುರೋಪಿನ ಮಾಧ್ಯಮಗಳು ವರದಿ ಮಾಡಿವೆ. ಮಾತುಕತೆಯ ಆರಂಭದಿಂದಲೂ ಕೃಷಿ ಕ್ಷೇತ್ರವನ್ನು ಹೊರಗಿಡಲಾಗಿತ್ತು ಎಂದು ಅವರು ಹೇಳಿದ್ದಾರೆ

ಜವಳಿ ಉತ್ಪನ್ನಗಳಿಗೆ ಸದ್ಯ ಅಲ್ಲಿ ಶೇ 12–ಶೇ 13 ಸುಂಕ ವಿಧಿಸಲಾಗುತ್ತಿದೆ.

ಐರೋಪ್ಯ ಒಕ್ಕೂಟವು ವಾಹನಗಳು, ವೈದ್ಯಕೀಯ ಸಲಕರಣೆಗಳು, ವೈನ್, ಸ್ಪಿರಿಟ್‌ಗಳು, ಮಾಂಸ, ಕುಕ್ಕುಟೋದ್ಯಮ ಮತ್ತು ಬೌದ್ಧಿಕ ಆಸ್ತಿ ಹಕ್ಕಿನ ಸಂರಕ್ಷಣೆಗೆ ಸಂಬಂಧಿಸಿದಂತೆ ಹೆಚ್ಚು ಸುಂಕ ಕಡಿತ ಮಾಡುವಂತೆ ಒತ್ತಾಯ ಮಾಡುತ್ತಿದೆ ಎಂದು ಮೂಲಗಳು ತಿಳಿಸಿವೆ.

ಭಾರತವು ಅಲ್ಲಿಂದ ಯಂತ್ರೋಪಕರಣಗಳು, ಕಂಪ್ಯೂಟರ್‌ಗಳು, ಎಲೆಕ್ಟ್ರಾನಿಕ್ಸ್, ವಿಮಾನಗಳು ಮತ್ತು ಬಿಡಿಭಾಗಗಳು, ವೈದ್ಯಕೀಯ ಸಲಕರಣೆಗಳು, ವೈಜ್ಞಾನಿಕ ಉಪಕರಣಗಳು, ಪಾಲಿಷ್ ಮಾಡದ ವಜ್ರ, ಇಂಗಾಲಯುಕ್ತ ರಾಸಾಯನಿಕಗಳು, ಪ್ಲಾಸ್ಟಿಕ್, ಕಬ್ಬಿಣ ಮತ್ತು ಉಕ್ಕು, ಕಾರುಗಳು ಹಾಗೂ ವಾಹನಗಳ ಬಿಡಿ ಭಾಗಗಳನ್ನು ಆಮದು ಮಾಡಿಕೊಳ್ಳುತ್ತದೆ.

ಸೇವಾ ವಲಯದಲ್ಲಿ ಭಾರತವು ಉದ್ಯಮ ಸೇವೆಗಳು, ದೂರ ಸಂಪರ್ಕ ಮತ್ತು ಐಟಿ, ಸಾರಿಗೆ ಸೇವೆಗಳನ್ನು ರಫ್ತು ಮಾಡಿದರೆ, ಬೌದ್ಧಿಕ ಆಸ್ತಿ ಸೇವೆಗಳು, ದೂರಸಂಪರ್ಕ ಮತ್ತು ಐಟಿ ಸೇವೆಗಳನ್ನು ಆಮದು ಮಾಡಿಕೊಳ್ಳುತ್ತದೆ. ಉಭಯ ದೇಶಗಳ ನಡುವೆ ಆಲ್ಕೋಹಾಲ್ ವ್ಯಾಪಾರವೂ ಗಣನೀಯ ಪ್ರಮಾಣದಲ್ಲಿದೆ.

Publication Date 16/01/2026

## ಪದಬ

**ಎಡದಿಂದ ಬಲಕ್ಕೆ**

3. ಹಣವನ್ನು ಸಂದಾಯ ಮಾಡುವುದು (3)
5. ಈತ ಸರಿ ಸಮಾನನಾದವನು (3)
6. ಸತಿಗೆ ದೊರೆತ ಮೋಕ್ಷ! (3)
7. ಚನ್ನಯ್ಯನ ಮಗ ನಾನೆಂದು ಹೇಳಿಕೊಂಡ ಈ ಶರಣ ಚಮ್ಮಾರಿಕೆ ಕಾಯಕ ನಡೆಸುತ್ತಿದ್ದನು (6)
8. ತ್ರಿಪುರಾಂತಕ ಲಿಂಗ ಎಂಬ ಅಂಕಿತವುಳ್ಳ ವಚನಕಾರ (6)
12. ಚಿನ್ನದ ಬಣ್ಣವಿದು (3)
13. ಪಲ್ಲಂಗದಲ್ಲಿರುವವನ ಕಾಡುಹರಟೆ (3)
14. ಹದ್ದಿನ ಜಾತಿಗೆ ಸೇರಿದ ಪಕ್ಷಿ (3)

**ಮೇಲಿಂದ ಕೆಳಕ್ಕೆ**

1. ಎಳೆಯ ಹುಲ್ಲು
2. ಕತೆ ಕೊನೆಗಿದ್ದಾಗಿನ ಅಮಲು ತಿರುವುಮುರುವಾಗಿದೆ
3. ಬೀಜ ಬಿತ್ತಲು ಮಾಡಿರುವ ಮಡಿ
4. ಮನಸ್ಸಿನ ಅಸ್ವಾಸ್ಥ್ಯ
6. ಸಗರ ಗ್ರಾಮದ ಈ ಶರಣನ ಪತ್ನಿ ಶಿವದೇವಿ
9. ಅವಶ್ಯವಿಲ್ಲದ ಖರ್ಚು ಉಲ್ಟಾ ಕಾಣುತ್ತಿದೆ
10. ಹೂವಿನಲ್ಲಿರುವ ಹುಡಿ
11. ತಣ್ಣಗಾದ ಅನ್ನ
12. ಕುಳಿ ಇಲ್ಲಿದೆ

Presented by

## ❖ 'ಜಿಡಿಪಿ ಶೇ 7.2ರಷ್ಟು ನಿರೀಕ್ಷೆ'

**ಸಂದರ್ಭ: ಪ್ರಸಕ್ತ ಆರ್ಥಿಕ ವರ್ಷದಲ್ಲಿ ಭಾರತದ ಜಿಡಿಪಿ ಬೆಳವಣಿಗೆ ಶೇ 7.2ರಷ್ಟಾಗುವ ನಿರೀಕ್ಷೆ ಇದೆ ಎಂದು ವಿಶ್ವಬ್ಯಾಂಕ್ ತನ್ನ ಅಂದಾಜನ್ನು ಪರಿಷ್ಕರಿಸಿದೆ.**

- ದೇಶೀಯ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಾಗಿರುವುದು, ತೆರಿಗೆ ಸುಧಾರಣೆಗಳು ಮತ್ತು ಗ್ರಾಮೀಣ ಪ್ರದೇಶದಲ್ಲಿನ ಕುಟುಂಬಗಳ ಗಳಿಕೆಯಲ್ಲಿ ಹೆಚ್ಚಳವಾಗಿರುವುದು ಜಿಡಿಪಿ ಹೆಚ್ಚಳಕ್ಕೆ ನೆರವಾಗಲಿದೆ ಎಂದು ಹೇಳಿದೆ. ಭಾರತವು ಜಗತ್ತಿನಲ್ಲಿ ಅತಿ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆ ಆಗಲಿದೆ ಎಂದು ಹೇಳಿದೆ.
- ಜೂನ್‌ನಲ್ಲಿ ವಿಶ್ವಬ್ಯಾಂಕ್ ಭಾರತದ ಜಿಡಿಪಿ ಬೆಳವಣಿಗೆ ಶೇ 6.3ರಷ್ಟಾಗಲಿದೆ ಎಂದು ಹೇಳಿತ್ತು.
- 2026-27ರಲ್ಲಿ ದೇಶದ ಜಿಡಿಪಿ ಶೇ 6.5 ಮತ್ತು 2027-28ರಲ್ಲಿ ಶೇ 6.6ರಷ್ಟಾಗಬಹುದು ಎಂದು ಹೇಳಿದೆ.
- ಅಮೆರಿಕದ ಸುಂಕ ಹೆಚ್ಚಳ ಮತ್ತು ವ್ಯಾಪಾರ ಸಂಬಂಧಿತ ಅನಿಶ್ಚಿತತೆ ಯಿಂದಾಗಿ ಬಂಡವಾಳದ ಹೊರಹರಿವು ಹೆಚ್ಚಾಗಿದೆ. ಇದರಿಂದ ಮೇ ತಿಂಗಳಿನಿಂದ ಭಾರತದ ರೂಪಾಯಿ ಮೌಲ್ಯ ಕುಸಿದಿದೆ ಎಂದು ವಿಶ್ವ ಬ್ಯಾಂಕ್ ಹೇಳಿದೆ.
- ಇತ್ತೀಚೆಗೆ ಕೇಂದ್ರ ಸರ್ಕಾರ ಬಿಡುಗಡೆ ಮಾಡಿದ ಮೊದಲ ಅಂದಾಜಿನ ಪ್ರಕಾರ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಭಾರತದ ಆರ್ಥಿಕತೆಯು ಶೇ 7.4ರಷ್ಟು ಬೆಳವಣಿಗೆ ಸಾಧಿಸಲಿದೆ ಎಂದು ಹೇಳಿತ್ತು.

## ❖ ವ್ಯಾಪಾರ ಕೊರತೆ ₹2.26 ಲಕ್ಷ ಕೋಟಿ

### ₹3.47 ಲಕ್ಷ ಕೋಟಿ ಮೌಲ್ಯದ ಸರಕು ರಫ್ತು: ಕೇಂದ್ರ ವಾಣಿಜ್ಯ ಸಚಿವಾಲಯ

ನವದೆಹಲಿ (ಪಿಟಿಐ): ಜಾಗತಿಕ ಆರ್ಥಿಕ ಅನಿಶ್ಚಿತತೆಯ ನಡುವೆಯೂ 2025ರ ಡಿಸೆಂಬರ್ ತಿಂಗಳಿನಲ್ಲಿ ದೇಶದ ರಫ್ತು ಪ್ರಮಾಣ ಶೇ 1.87ರಷ್ಟು ಹೆಚ್ಚಳ ವಾಗಿದ್ದು, ₹3.47 ಲಕ್ಷ ಕೋಟಿ ಮೌಲ್ಯದ ಸರಕುಗಳು ರಫ್ತಾಗಿದೆ ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ತಿಳಿಸಿದೆ.



ಇದೇ ಅವಧಿಯಲ್ಲಿ ಆಮದು ಪ್ರಮಾಣವು ಶೇ 8.7ರಷ್ಟು ಏರಿಕೆಯಾಗಿದ್ದು, ₹5.73 ಲಕ್ಷ ಕೋಟಿ ಆಗಿದೆ. ವ್ಯಾಪಾರ ಕೊರತೆಯು ₹2.26 ಲಕ್ಷ ಕೋಟಿಯಷ್ಟಾಗಿದೆ ಎಂದು ತಿಳಿಸಿದೆ.

ರಫ್ತು ಮೌಲ್ಯಕ್ಕಿಂತ ಆಮದು ಮೌಲ್ಯ ಹೆಚ್ಚಿದ್ದರೆ ಅದನ್ನು ವ್ಯಾಪಾರ ಕೊರತೆ ಎಂದು ಕರೆಯಲಾಗುತ್ತದೆ.

ಪ್ರಸಕ್ತ ಆರ್ಥಿಕ ವರ್ಷದ ಏಪ್ರಿಲ್‌ನಿಂದ ಡಿಸೆಂಬರ್‌ವರೆಗೆ ದೇಶದ ಸರಕುಗಳ ರಫ್ತು ಶೇ 2.44ರಷ್ಟು ಹೆಚ್ಚಳವಾಗಿ, ₹29.84 ಲಕ್ಷ ಕೋಟಿಗೆ ತಲುಪಿದೆ. ಇದೇ ಅವಧಿಯಲ್ಲಿ ದೇಶದ ಆಮದು ಶೇ 5.9ರಷ್ಟು ಏರಿಕೆಯಾಗಿ, ₹52.27 ಲಕ್ಷ ಕೋಟಿಯಷ್ಟಾಗಿದೆ. ವ್ಯಾಪಾರ ಕೊರತೆಯು ₹22.43 ಲಕ್ಷ ಕೋಟಿಯಷ್ಟಾಗಿದೆ.

'ದೇಶದ ರಫ್ತು ಸಕಾರಾತ್ಮಕವಾಗಿ ಬೆಳವಣಿಗೆ ದಾಖಲಿಸಿದೆ. ಇದೇ ರೀತಿ ಪ್ರಗತಿ ಮುಂದುವರಿದರೆ ಪ್ರಸಕ್ತ ಆರ್ಥಿಕ ವರ್ಷದಲ್ಲಿ ದೇಶದ ಸರಕು ಮತ್ತು ಸೇವೆಗಳ ಒಟ್ಟು ರಫ್ತು ಹಣಕಾಸಿನ ಮೌಲ್ಯವು ₹76.75 ಲಕ್ಷ ಕೋಟಿ (850 ಬಿಲಿಯನ್ ಡಾಲರ್) ಆಗುವ ನಿರೀಕ್ಷೆ ಇದೆ' ಎಂದು ಕೇಂದ್ರ ವಾಣಿಜ್ಯ ಸಚಿವಾಲಯದ ಕಾರ್ಯದರ್ಶಿ ರಾಜೇಶ್ ಅಗರವಾಲ್ ಹೇಳಿದ್ದಾರೆ.

ಎಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್, ಸಾಗರೋತ್ಪನ್ನಗಳು ಮತ್ತು ಔಷಧಗಳು ಸೇರಿದಂತೆ ವಿವಿಧ ಸರಕುಗಳ ಸಾಗಣೆಯಿಂದ ದೇಶದ ರಫ್ತು ಹೆಚ್ಚಳವಾಗಿದೆ ಎಂದು ತಿಳಿಸಿದ್ದಾರೆ.

ಅಮೆರಿಕ, ಚೀನಾ ಮತ್ತು ಯುಎಇಗೆ ದೇಶದ ರಫ್ತು ಸ್ಥಿರವಾಗಿ ಬೆಳವಣಿಗೆ ಆಗುತ್ತಿದೆ ಎಂದು ತಿಳಿಸಿದ್ದಾರೆ.

### ಭಾರತ–ಅಮೆರಿಕ ಒಪ್ಪಂದ ಶೀಘ್ರ

ಭಾರತ ಮತ್ತು ಅಮೆರಿಕವು ವ್ಯಾಪಾರ ಒಪ್ಪಂದವನ್ನು ಅಂತಿಮಗೊಳಿಸುವ ಅಂತಿಮ ಯತ್ನದಲ್ಲಿವೆ. ಬಾಕಿ ಇರುವ ಎಲ್ಲ ವಿಷಯಗಳ ಕುರಿತು ಎರಡೂ ಕಡೆ ಮಾತುಕತೆ ನಡೆಯುತ್ತಿದೆ ಎಂದು ರಾಜೇಶ್ ಅಗರವಾಲ್ ಹೇಳಿದ್ದಾರೆ. ಅತಿ ಶೀಘ್ರದಲ್ಲಿ ಒಪ್ಪಂದ ಆಗಲಿದೆ. ಆದರೆ, ಒಪ್ಪಂದ ಯಾವಾಗ ಆಗುತ್ತದೆ ಎಂದು ಗಡುವು ನಿಗದಿ ಮಾಡುವುದಕ್ಕೆ ಆಗುವುದಿಲ್ಲ ಎಂದು ಹೇಳಿದ್ದಾರೆ.

ಭಾರತ ಮತ್ತು ಕೆನಡಾ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದ ವ್ಯಾಪ್ತಿಯನ್ನು ಅಂತಿಮಗೊಳಿಸಲು ಸಹ ಕೆಲಸ ಮಾಡಲಾಗುತ್ತಿದೆ ಎಂದು ರಾಜೇಶ್ ಅಗರವಾಲ್ ಹೇಳಿದ್ದಾರೆ.

### 27ಕ್ಕೆ ಭಾರತ–ಐರೋಪ್ಯ ಒಕ್ಕೂಟ ಶೃಂಗಸಭೆ

ಐರೋಪ್ಯ ಸಮಿತಿಯ ಅಧ್ಯಕ್ಷ ಆಂಟೋನಿಯೊ ಲೂಯಿಸ್ ಸ್ಯಾಂಟೋಸ್ ಡ ಕೋಸ್ಟಾ ಮತ್ತು ಐರೋಪ್ಯ ಕಮಿಷನ್‌ನ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರು ಜನವರಿ 25ರಿಂದ 27ರವರೆಗೆ ಭಾರತಕ್ಕೆ ಭೇಟಿ ನೀಡಲಿದ್ದು, 77ನೇ ಗಣರಾಜ್ಯೋತ್ಸವದ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಜ. 27ರಂದು ನಡೆಯಲಿರುವ 16ನೇ ಭಾರತ–ಐರೋಪ್ಯ ಒಕ್ಕೂಟ ಶೃಂಗಸಭೆಯ ಸಹ-ಅಧ್ಯಕ್ಷತೆಯನ್ನು ವಹಿಸಲಿದ್ದಾರೆ. ಈ ವೇಳೆ ಎರಡೂ ಕಡೆಯವರು ಬಹುನಿರೀಕ್ಷಿತ ಭಾರತ–ಐರೋಪ್ಯ ಒಕ್ಕೂಟದ ವ್ಯಾಪಾರ ಒಪ್ಪಂದವನ್ನು ದೃಢೀಕರಿಸುವ ನಿರೀಕ್ಷೆಯಿದೆ ಎಂದು ಹೇಳಿದ್ದಾರೆ.

### ಸುಂಕ ಹೇರಿಕೆ: ಅಮೆರಿಕಕ್ಕೆ ರಫ್ತು ಇಳಿಕೆ

ಡಿಸೆಂಬರ್ ತಿಂಗಳಿನಲ್ಲಿ ಅಮೆರಿಕಕ್ಕೆ ದೇಶದ ಸರಕುಗಳ ರಫ್ತು ಪ್ರಮಾಣ ಶೇ 1.83ರಷ್ಟು ಇಳಿಕೆಯಾಗಿದೆ ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ತಿಳಿಸಿದೆ.

ಭಾರತದ ಸರಕುಗಳ ಮೇಲೆ ಅಮೆರಿಕ ಹೇರಿದ ಹೆಚ್ಚಿನ ಸುಂಕವು ರಫ್ತು ಕಡಿಮೆ ಆಗಲು ಕಾರಣ ಎಂದು ತಿಳಿಸಿದೆ. ಡಿಸೆಂಬರ್‌ನಲ್ಲಿ ₹62,192 ಕೋಟಿ ಮೌಲ್ಯದ ಸರಕುಗಳು ರಫ್ತಾಗಿವೆ. ಆಮದು ಶೇ 7.57ರಷ್ಟು ಹೆಚ್ಚಾಗಿದ್ದು, ₹36,426 ಕೋಟಿಯಷ್ಟಾಗಿದೆ ಎಂದು ತಿಳಿಸಿದೆ.

**ಚೀನಾಕ್ಕೆ ರಫ್ತು ಶೇ 67ರಷ್ಟು ಜಿಗಿತ:** ಡಿಸೆಂಬರ್ ತಿಂಗಳಿನಲ್ಲಿ ಚೀನಾಕ್ಕೆ ಭಾರತದಿಂದ, ₹18,437 ಕೋಟಿ ಮೌಲ್ಯದ ಸರಕುಗಳು ರಫ್ತಾಗಿದ್ದು, 2024ರ ಡಿಸೆಂಬರ್‌ಗೆ ಹೋಲಿಸಿದರೆ ರಫ್ತು ಪ್ರಮಾಣದಲ್ಲಿ ಶೇ 67.35ರಷ್ಟು ಹೆಚ್ಚಳವಾಗಿದೆ.

ಎಲೆಕ್ಟ್ರಾನಿಕ್ಸ್, ಸಾಗರೋತ್ಪನ್ನಗಳು ಸೇರಿದಂತೆ ವಿವಿಧ ಸರಕುಗಳ ರಫ್ತಿನಲ್ಲಿ ಹೆಚ್ಚಳವಾಗಿದೆ. ಇದು ಒಟ್ಟಾರೆ ರಫ್ತು ಹೆಚ್ಚಳಕ್ಕೆ ಕಾರಣವಾಗಿದೆ. ಇದೇ ಅವಧಿಯಲ್ಲಿ ಚೀನಾದಿಂದ ಭಾರತವು, ₹1 ಲಕ್ಷ ಕೋಟಿ ಮೌಲ್ಯದ ಸರಕುಗಳನ್ನು ಆಮದು ಮಾಡಿಕೊಂಡಿದ್ದು, ಶೇ 20ರಷ್ಟು ಹೆಚ್ಚಳವಾಗಿದೆ ಎಂದು ತಿಳಿಸಿದೆ.

ಅಮೆರಿಕದ ನಂತರ ಚೀನಾವು ಭಾರತದ ಎರಡನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದೆ.

## ❖ ಗ್ರೀನ್‌ಲ್ಯಾಂಡ್: ಐರೋಪ್ಯ ರಾಷ್ಟ್ರಗಳ ಯೋಧರ ಪಹರೆ

**ಸಂದರ್ಭ: ಗ್ರೀನ್‌ಲ್ಯಾಂಡ್ ವಶಪಡಿಸಿಕೊಳ್ಳುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಬೆದರಿಕೆ ಒಡ್ಡಿರುವ ನಡುವೆಯೇ, ಫ್ರಾನ್ಸ್, ಜರ್ಮನಿ, ನಾರ್ವೆ, ಸ್ವೀಡನ್ ಸೇರಿ ಹಲವು ಯುರೋಪಿಯನ್ ರಾಷ್ಟ್ರಗಳ ಯೋಧರು ಗ್ರೀನ್ ಲ್ಯಾಂಡ್ ಬಂದಿಳಿದಿದ್ದಾರೆ.**

- ಫ್ರಾನ್ಸ್‌ನ 15 ಯೋಧರು ಸಮರಾಭ್ಯಾಸಕ್ಕಾಗಿ ನೂಕ್‌ನಲ್ಲಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗ್ರೀನ್‌ಲ್ಯಾಂಡ್‌ಗೆ 13 ಮಂದಿಯ ವಿಚಕ್ಷಣ ತಂಡವನ್ನು ನಿಯೋಜಿಸಲಾಗುವುದು ಎಂದು ಜರ್ಮನಿ ರಕ್ಷಣಾ ಸಚಿವಾಲಯ ತಿಳಿಸಿದೆ.
- ಗ್ರೀನ್‌ಲ್ಯಾಂಡ್‌ನಲ್ಲಿ ಸೇನಾ ಬಲವನ್ನು ಹೆಚ್ಚಿಸುವುದಾಗಿ ಡೆನ್ಮಾರ್ಕ್ ಘೋಷಿಸಿದ್ದರೆ, ಮತ್ತಷ್ಟು ಸೇನಾ ಶುಕಡಿಗಳನ್ನು ಕಳುಹಿಸುವುದಾಗಿ ಫ್ರಾನ್ ಹೇಳಿದೆ.

AS/KAS Academy



## ❖ ಸ್ಪೀಕರ್ ನಿರ್ಧಾರ ಪ್ರಶ್ನಿಸಿದ್ದ ಅರ್ಜಿ ವಜಾ

**ಸಂದರ್ಭ: ಸಂಸದೀಯ ಸಮಿತಿ ರಚಿಸಿದ್ದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದ ನ್ಯಾ.ಯಶವಂತ್ ವರ್ಮಾ: ತಮ್ಮ ವಿರುದ್ಧದ ಭ್ರಷ್ಟಾಚಾರ ಆರೋಪಗಳ ತನಿಖೆಗೆ ಲೋಕಸಭಾ ಸ್ಪೀಕರ್ ಸಂಸದೀಯ ಸಮಿತಿ ರಚಿಸಿದ ನಿರ್ಧಾರವನ್ನು ಮತ್ತು ಅದರ ಕಾನೂನಿನ ಮಾನ್ಯತೆಯನ್ನು ಪ್ರಶ್ನಿಸಿ ಅಲಹಾಬಾದ್ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ಸಲ್ಲಿಸಿದ್ದ ಅರ್ಜಿಯನ್ನು ಸುಪ್ರೀಂ ಕೋರ್ಟ್ ವಜಾಗೊಳಿಸಿದೆ.**

- ಈ ಕುರಿತು ಅರ್ಜಿ ವಿಚಾರಣೆ ಯನ್ನು ಜ. 8ರಂದು ನಡೆಸಿದ್ದ ನ್ಯಾಯಮೂರ್ತಿಗಳಾದ ದೀಪಂಕರ್ ದತ್ತ ಮತ್ತು ಎಸ್.ಸಿ.ಶರ್ಮಾ ಅವರ ಪೀಠವು ಕಾಯ್ದಿರಿಸಿದ್ದ ತೀರ್ಪನ್ನು ಶುಕ್ರವಾರ ಪ್ರಕಟಿಸಿತು. ರಾಷ್ಟ್ರಪತಿ ಅನುಪಸ್ಥಿತಿಯಲ್ಲಿ ಉಪ ರಾಷ್ಟ್ರಪತಿ ಯಾದವರು ರಾಷ್ಟ್ರಪತಿಯ ಕಾರ್ಯ ಗಳನ್ನು ನಿರ್ವಹಿಸಬಹುದು ಎಂದರೆ, ರಾಜ್ಯಸಭೆಯ ಸಭಾಪತಿಯ ಅನುಪಸ್ಥಿತಿ ಯಲ್ಲಿ ಉಪಸಭಾಪತಿ ಅವರ ಕಾರ್ಯಗಳನ್ನು ಏಕೆ ನಿರ್ವಹಿಸಬಾರದು ಎಂದು ಸುಪ್ರೀಂಕೋರ್ಟ್ ಹಿಂದಿನ ವಿಚಾರಣೆ ವೇಳೆ ಪ್ರಶ್ನಿಸಿತ್ತು.
- ನ್ಯಾಯಮೂರ್ತಿಗಳ ವಿಚಾರಣಾ ಕಾಯ್ದೆ- 1968ರ ಪ್ರಕಾರ, ವಾಗ್ದಂಡನೆ ಕುರಿತ ನಿರ್ಣಯವನ್ನು ರಾಜ್ಯಸಭೆಯ ಉಪ ತಿರಸ್ಕರಿಸುವ ಅಧಿಕಾರವಿಲ್ಲ, ಸಭಾಪತಿಗೆ ಇಂಥ ನಿರ್ಣಯವನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ಅಧಿಕಾರ ಲೋಕಸಭಾ ಸ್ಪೀಕರ್ ಮತ್ತು ರಾಜ್ಯಸಭಾ ಸಭಾಪತಿಗೆ ಮಾತ್ರ ಇರುತ್ತದೆ ಎಂದು ನ್ಯಾಯಮೂರ್ತಿ ವರ್ಮಾ ಪರ ವಕೀಲರು ಮಾಡಿದ್ದ ವಾದಕ್ಕೆ ಪೀಠ ಸಮ್ಮತಿ ನೀಡಿರಲಿಲ್ಲ. ಇಂಥಹದಕ್ಕೆ ಕಾಯ್ದೆಯಡಿ ಯಾವುದೇ ನಿರ್ಬಂಧವಿಲ್ಲ ಎಂದು ಪೀಠ ಹೇಳಿತ್ತು.
- ನವದೆಹಲಿಯಲ್ಲಿ ನ್ಯಾಯಮೂರ್ತಿ ವರ್ಮಾ ಅವರ ನಿವಾಸದಲ್ಲಿ ಮಾರ್ಚ್ 4ರಂದು ಸುಟ್ಟ ನೋಟುಗಳ ಕಂತೆ ಪತ್ತೆ ಯಾದ ಬೆನ್ನಲ್ಲೇ, ಅವರನ್ನು ದೆಹಲಿ ಹೈಕೋರ್ಟ್‌ನಿಂದ ಅಲಹಾಬಾದ್ ಹೈಕೋರ್ಟ್‌ಗೆ ವರ್ಗಾಯಿಸಲಾಯಿತು.

## ❖ ಮೆಕ್ಕೆಜೋಳ: ಬೆಳೆಗಾರರಿಗೆ ದೊರೆಯದ ಎಂಐಪಿ

**ಸಂದರ್ಭ: ಮಾರುಕಟ್ಟೆಯಲ್ಲಿ ಕಡಿಮೆ ದರಕ್ಕೆ ಮೆಕ್ಕೆಜೋಳ ಮಾರಾಟವಾಗುತ್ತಿರುವ ಕಾರಣಕ್ಕೆ ಬೆಳೆಗಾರರಿಗೆ ಆಗುತ್ತಿರುವ ಆರ್ಥಿಕ ನಷ್ಟವನ್ನು ತಪ್ಪಿಸಲು ರಾಜ್ಯ ಸರ್ಕಾರ 2025-26ನೇ ಮುಂಗಾರು ಹಂಗಾಮಿಗೆ ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ ಮೆಕ್ಕೆಜೋಳ ಖರೀದಿಗೆ ಜ.4ರಂದು ಆದೇಶಿಸಿದೆ. ವಿಳಂಬವಾಗಿ-ದ್ದರಿಂದ ಬಹುತೇಕ ರೈತರಿಗೆ ಅನುಕೂಲ ಆಗಿಲ್ಲ ಎಂದು ರೈತರು ಹೇಳಿದ್ದಾರೆ.**

- ಉತ್ಪಾದನೆಯ ಮೆಕ್ಕೆಜೋಳದ ಆಧಾರದ ಮೇಲೆ ರಾಜ್ಯದ ಹಾವೇರಿ, ವಿಜಯನಗರ, ಗದಗ, ಬೆಳಗಾವಿ, ಕೊಪ್ಪಳ, ವಿಜಯಪುರ, ಹಾಸನ, ದಾವಣಗೆರೆ, ಚಿತ್ರದುರ್ಗ, ಬಾಗಲಕೋಟೆ ಹಾಗೂ ಧಾರವಾಡ ಜಿಲ್ಲೆಗಳ ಎಪಿಎಂಸಿ ಗಳಲ್ಲಿ ಮಾರುಕಟ್ಟೆ ಮಧ್ಯಪ್ರವೇಶ ದರ ಯೋಜನೆಯಡಿ ಒಟ್ಟು 40 ಲಕ್ಷ ಕ್ವಿಂಟಲ್ ಮೆಕ್ಕೆಜೋಳ ಖರೀದಿಗೆ ಸರ್ಕಾರಮುಂದಾಗಿದ್ದು, ಸಮರ್ಪಕವಾಗಿ ಪ್ರಚಾರವನ್ನೂ ನೀಡಲಾಗಿಲ್ಲ ಎಂದೂ ರೈತರು ದೂರಿದ್ದಾರೆ.
- ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಲ್‌ಗೆ 22.1500 ಮೆಕ್ಕೆಜೋಳ ಕಡಿಮೆ ಬೆಲೆಗೆ ಮಾರಾಟವಾದಲ್ಲಿ ಮಾತ್ರ ವ್ಯತ್ಯಾಸದ ಮೊತ್ತವನ್ನು ಸರ್ಕಾರ ಪಾವತಿಸಲಿದೆ. ನಿಗದಿತ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡಿದರೆ ಯೋಜನೆಯ ಪ್ರತಿಫಲ ಸಿಗದು. ರೈತರಿಂದ ಪ್ರತಿ ಎಕರೆಗೆ 12 ಕ್ವಿಂಟಲ್‌ಗಳಂತೆ ಗರಿಷ್ಠ 50 ಕ್ವಿಂಟಲ್‌ಗೆ ಮಾತ್ರ ವ್ಯತ್ಯಾಸದ ದರವನ್ನು ಪರಿಗಣಿಸಲಾಗುತ್ತಿದೆ.
- ಮಾರುಕಟ್ಟೆಯಲ್ಲಿ ಕ್ವಿಂಟಲ್‌ಗೆ ₹1,950ರಂತೆ ಮಾರಾಟವಾದರೆ ಬೆಳೆಗಾರರಿಗೆ ₹200 ದೊರೆಯಲಿದೆ. ₹2,000ರಂತೆ ಮಾರಾಟವಾದರೆ ₹150 ದೊರೆಯಲಿದೆ. ಇದೇ ಮಾದರಿಯಲ್ಲಿ ಬೆಳೆಗಾರರಿಗೆ ಕನಿಷ್ಠ ದರ ₹2,150 ದೊರೆಯಲಿದೆ.
- ರಾಜ್ಯದಲ್ಲಿ 2025-26ನೇ ಸಾಲಿನಲ್ಲಿ ಮುಂಗಾರು ಹಂಗಾಮಿನಲ್ಲಿ ಒಟ್ಟು 17.64 ಲಕ್ಷ ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಬೆಳೆದಿದ್ದು, 53.80 ಲಕ್ಷ ಟನ್ ಉತ್ಪಾದನೆ ನಿರೀಕ್ಷಿಸಲಾಗಿತ್ತು ಎಂದು ಕೃಷಿ ಇಲಾಖೆ ತಿಳಿಸಿದ್ದೆ.

## ❖ 'ಸ್ಟಾರ್ಟ್‌ಅಪ್ ಇಂಡಿಯಾ ಮಿಷನ್' ಇದೀಗ ಕ್ರಾಂತಿ: ಪ್ರಧಾನಿ ಮೋದಿ

**ಸಂದರ್ಭ: ದೇಶದ ಯುವಜನರು ಮತ್ತು ಉದ್ಯಮಿಗಳು ನೈಜ ಸಮಸ್ಯೆ-ಗಳನ್ನು ಪರಿಹರಿಸುವತ್ತ ಗಮನ ಹರಿಸಿದ್ದಾರೆ. ಜೊತೆಗೆ ಸ್ಟಾರ್ಟ್‌ಆಪ್ ಇಂಡಿಯಾ ಮಿಷನ್ ಇದೀಗ ಕ್ರಾಂತಿಯಾಗಿದೆ' ಎಂದು ನರೇಂದ್ರ ಪ್ರಧಾನಿ ನರೇಂದ್ರ ಮೋದಿ ಮೋದಿ ಹೇಳಿದ್ದಾರೆ.**

- 'ಸ್ಟಾರ್ಟ್ ಅಪ್ ಇಂಡಿಯಾ' ಆಯೋಜಿಸಿದ್ದ ಕಾರ್ಯಕ್ರಮಕ್ಕೆ ದಶಕ ತುಂಬಿದ ಪ್ರಯುಕ್ತ ಸಮಾರಂಭದಲ್ಲಿ ಮಾತನಾಡಿದ ಅವರು, 2014ರಲ್ಲಿ ದೇಶದಲ್ಲಿ ಬೆರಣಿಕೆಯಷ್ಟು ಯೂನಿಕಾರ್ನ್‌ಗಳು ಮತ್ತು 500 ನವೋದ್ಯಮಗಳು ಇದ್ದವು. ಪ್ರಸ್ತುತ ದೇಶದಲ್ಲಿ 125ಕ್ಕೂ ಹೆಚ್ಚು ಸಕ್ರಿಯ ಯೂನಿಕಾರ್ನ್ ಮತ್ತು 2 ಲಕ್ಷಕ್ಕೂ ಅಧಿಕ ನವೋದ್ಯಮಗಳಿದ್ದು, ಭಾರತವು, ಜಗತ್ತಿನಲ್ಲಿ ಅತಿ ಹೆಚ್ಚು ನವೋದ್ಯಮ ಹೊಂದಿದ ಮೂರನೇ ರಾಷ್ಟ್ರವಾಗಿದೆ. ಯೂನಿಕಾರ್ನ್‌ಗಳು ಐಪಿಒ ಆರಂಭಿಸಿ, ಉದ್ಯೋಗ ಸೃಷ್ಟಿ ಮಾಡುತ್ತಿವೆಎಂದುತಿಳಿಸಿದ್ದಾರೆ.
- ಎರಡು ಮತ್ತು ಮೂರನೇ ಹಂತದ ನಗರಗಳು, ಗ್ರಾಮೀಣ ಪ್ರದೇಶಗಳಲ್ಲಿನ ಯುವಜನರು ಸ್ವಂತವಾದ ಉದ್ಯಮಗಳನ್ನು ಸ್ಥಾಪಿಸುತ್ತಿದ್ದಾರೆ. ಶೇ 45ರಷ್ಟು ನವೋದ್ಯಮಗಳು 2022 ಮಹಿಳಾ ನಿರ್ದೇಶಕಿ ಅಥವಾ ಮಹಿಳಾ ಪಾಲುದಾರರನ್ನು ಹೊಂದಿವೆ ಎಂದು ಹೇಳಿದ್ದಾರೆ.
- ಮುಂಬರುವ 10 ವರ್ಷಗಳಲ್ಲಿ ಭಾರತವು. ನವೋದ್ಯಮ ಮತ್ತು ಭಾರತವು ತನ್ನ ನವೋದ್ಯಮಗಳ ನಾವೀನ್ಯ ಮತ್ತು ವಿಶ್ವಾಸದಲ್ಲಿ ಸಂಪೂರ್ಣ ನಂಬಿಕೆಯನ್ನು ಹೊಂದಿದೆ. ತಂತ್ರಜ್ಞಾನದಲ್ಲಿ ಮುನ್ನಡೆಸುವುದು ಜಗತ್ತನ್ನು ನಮ್ಮ ಗುರಿಯಾಗಿರಬೇಕು ಎಂದು ಹೇಳಿದ್ದಾರೆ.
- 2016ರ ಜನವರಿ 16ರಂದು ಸ್ಟಾರ್ಟ್ ಅಪ್ ಇಂಡಿಯಾ ಕಾರ್ಯಕ್ರಮ ಆರಂಭವಾಯಿತು. ಶುಕ್ರವಾರ ಈ ಕಾರ್ಯಕ್ರಮಕ್ಕೆ ದಶಕ ಪೂರೈಸಿದೆ.

## ❖ ಭಾರತ-ಐರೋಪ್ಯ ಒಕ್ಕೂಟದ ಎಫ್‌ಟಿಎ: "ಎಲ್ಲ ಒಪ್ಪಂದಗಳ ತಾಯಿ'-ಗೋಯಲ್

**ಸಂದರ್ಭ: 'ಭಾರತ ಮತ್ತು ಐರೋಪ್ಯ ಒಕ್ಕೂಟದ ನಡುವಿನ ಮುಕ್ತ ವ್ಯಾಪಾರ ಒಪ್ಪಂದವು (ಎಫ್ ಟಿಎ) 'ಎಲ್ಲ ಒಪ್ಪಂದಗಳ ತಾಯಿ' ಆಗಿರುತ್ತದೆ' ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪೀಯೂಷ್ ಗೋಯಲ್ ಹೇಳಿದ್ದಾರೆ.**

- ಈ ಪ್ರಸ್ತಾವಿತ ವ್ಯಾಪಾರ ಒಪ್ಪಂದವು ಪರಸ್ಪರ ಪ್ರಯೋಜನಕಾರಿಯಾ ಗಿದ್ದು, ಒಪ್ಪಂದದ ಮಾತುಕತೆಯು ಅಂತಿಮ ಹಂತದಲ್ಲಿದೆ. ಅಲ್ಲದೆ, ಭಾರತವು ನಿರೀಕ್ಷಿಸಿದ ರೀತಿಯಲ್ಲಿ ಈ ಒಪ್ಪಂದ ಫಲಪ್ರದವಾಗಲಿದೆ ಎಂದು ಹೇಳಿದ್ದಾರೆ.
- 2014ರಿಂದ ಇಲ್ಲಿಯವರೆಗೆ ಭಾರತವು, ಏಳು ವ್ಯಾಪಾರ ಒಪ್ಪಂದಗಳನ್ನು ಅಂತಿಮಗೊಳಿಸಿದೆ. ಆಸ್ಟ್ರೇಲಿಯಾ, ಬ್ರಿಟನ್, ಒಮನ್, ನ್ಯೂಜಿಲ್ಯಾಂಡ್, ಯುಎಇ, ಐರೋಪ್ಯ ಮುಕ್ತ ವ್ಯಾಪಾರ ಒಕ್ಕೂಟ (ಇಎಫ್‌ಟಿಎ) ಮತ್ತು ಮಾರಿಷಸ್ ನಡುವೆ ಒಪ್ಪಂದ ಆಗಿದೆ.

-------------------------------------------ಶುಭವಂದನೆಗಳು---------------------------------------